06 ಮೇ 2023 ಶನಿವಾರ

SINCE 1957

ಬೆಳಗಿನ ಪ್ರಾದೇಶಿಕ ಪತ್ರಿಕೆ

# ವರ್ತಮಾನ

ಭವಿಷ್ಯದ ಮುನ್ನುಡಿ

● ಸಂಪಾದಕ : ಕೆ.ಎನ್.ರವಿ

ನ್ಯೂಸ್ NS ಸ್ನ್ಯಾಪ್

ಡಿಜಿಟಲ್ ಮಾಧ್ಯಮ ಕ್ಷೇತ್ರದಲ್ಲಿ ಸಂಚಲನ ಮೂಡಿಸಿದ 'ನ್ಯೂಸ್ ಸ್ನ್ಯಾಪ್ ' ತಿಂಗಳಿಗೆ 2 ಲಕ್ಷ ಓದುಗರ ಬೆರಳ ತುದಿ ಅಂಚಿಗೆ ಸುದ್ದಿ ತಲುಪಿಸುತ್ತದೆ ಎನ್ನುವುದೇ ಹೆಮ್ಮೆಯ ಸಂಗತಿ ಸುದ್ದಿಗಾಗಿ

Kannada.TheNewsnap.com

ಭಯೋತ್ಪಾದನೆ ಮಟ್ಟ ಹಾಕಲು ಬಿಜೆಪಿಗೆ ಮತ ನೀಡಿ ಪುಟ 5

ವಿಂಟೇಜ್ ಕಾರು, ಟಾಂಗಾ ಜಾಥಾ ಪುಟ 6

9742504916 ಮೈಸೂರು | ಮಂಡ್ಯ | ಬೆಂಗಳೂರು | ಹಾಸನ | ಚಾಮರಾಜನಗರ | ರಾಮನಗರ | ಬೆಂಗಳೂರು ಗ್ರಾಮಾಂತರ | ಕೊಡಗು news@varthaman.in

VARTHAMAN Volume : 66 Issue : 285 Pages : 6 KA/SK/MYS/108/2012-15 R.N.I. No. 3577/1957 www.varthaman.in Price - 3

## ನಿಷೇಧ ಅಧಿಕಾರ ರಾಜ್ಯಕ್ಕಿಲ್ಲ

**ಬೆಳಗಾವಿ :** ಬಜರಂಗ ದಳ ಸೇರಿದಂತೆ ಯಾವುದೇ ಸಂಘ ಸಂಸ್ಥೆ ನಿಷೇಧಿಸುವ ಅಧಿಕಾರ ರಾಜ್ಯ ಸರ್ಕಾರಕ್ಕಿಲ್ಲ ಎಂದು ಕಾಂಗ್ರೆಸ್ ನಾಯಕ ಜಗದೀಶ್ ಶೆಟ್ಟರ್ ಹೇಳಿದ್ದಾರೆ.



ನಗರದಲ್ಲಿ ಶುಕ್ರವಾರ ಮಾತನಾಡಿದ ಅವರು, ಬಜರಂಗದಳ ಬ್ಯಾನ್ ಮಾಡುವುದಿಲ್ಲ ಎಂದು ಮಾಜಿ ಸಿಎಂ ವೀರಪ್ಪ ಮೊಯ್ಲಿ ಸ್ಪಷ್ಟವಾಗಿ ಹೇಳಿದ್ದಾರೆ. ಯಾವುದೇ ಸಂಘ ಸಂಸ್ಥೆಯನ್ನು ನಿಷೇಧ ಮಾಡುವ ಅಧಿಕಾರ ರಾಜ್ಯ ಸರ್ಕಾರಕ್ಕಿಲ್ಲ. ಅದು ಕೇಂದ್ರ ಸರ್ಕಾರಕ್ಕೆ ಇರುವ ಅಧಿಕಾರ. ಇದನ್ನು ವಿವಾದ ಮಾಡುವ ಅಗತ್ಯವಿಲ್ಲ ಎಂದು ತಿಳಿಸಿದರು.

## ಮೋದಿ ನಿರೋ ಇದ್ದಂತೆ

**ಮಂಗಳೂರು :** ರೋಮ್ ಹೊತ್ತಿ ಉರಿಯುತ್ತಿದ್ದಾಗ ನೀರೋ ಪಿಟೀಲು ಬಾರಿಸಿದಂತೆ, ಮಣಿಪುರ ಹೊತ್ತಿ ಉರಿಯುತ್ತಿರುವಾಗ ನರೇಂದ್ರ ಮೋದಿ ಇಲ್ಲಿ ಪ್ರಚಾರದಲ್ಲಿ ನಿರತರಾಗಿದ್ದಾರೆ ಎಂದು ಮಾಜಿ ಮುಖ್ಯಮಂತ್ರಿ ವೀರಪ್ಪ ಮೊಯ್ಲಿ ವಾಗ್ದಾಳಿ ನಡೆಸಿದ್ದಾರೆ.



ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮಣಿಪುರ ಹೊತ್ತಿ ಉರಿಯುತ್ತಿದ್ದು, ಇದನ್ನು ನಿಯಂತ್ರಿಸಲು ಬಾಕ್ಸರ್ ಮೇರಿ ಕೋಮ್ ನೆರವು ಕೋರಿದ್ದಾರೆ. ಆದರೆ ಪ್ರಧಾನಿ ಈ ಬಗ್ಗೆ ಗಮನಹರಿಸುತ್ತಿಲ್ಲ. ದೇಶದ ಇತಿಹಾಸದಲ್ಲಿ ಯಾವುದೇ ಪ್ರಧಾನಿ ವಿಧಾನಸಭಾ ಚುನಾವಣೆ ಪ್ರಚಾರಕ್ಕಾಗಿ ಇಷ್ಟು ಸಮಯ ಕಳೆದಿಲ್ಲ ಎಂದು ಟೀಕಿಸಿದರು.

# ಕಾಂಗ್ರೆಸ್‌ನಲ್ಲಿ ಅಭದ್ರತೆ

### ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಟೀಕೆ
### ವರುಣಾ ಕ್ಷೇತ್ರದಲ್ಲಿ ವಿ.ಸೋಮಣ್ಣ ಪರ ಪ್ರಚಾರ

**ಮೈಸೂರು :** ಕಾಂಗ್ರೆಸ್ ಪಕ್ಷಕ್ಕೆ ಅಭದ್ರತೆ ಕಾಡುತ್ತಿದೆ. ಮೊದಲು ತಪ್ಪು ಮಾಡುವುದು, ನಂತರ ಓವರ್ ರಿಯಾಕ್ಟ್ ಮಾಡುವುದು ಎರಡನ್ನೂ ಕಾಂಗ್ರೆಸ್‌ನವರು ಮಾಡುತ್ತಿದ್ದಾರೆ. ಅಪ್ರಮಾಣಿಕತೆ ಎದ್ದು ಕಾಣುತ್ತಿದೆ ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಹೇಳಿದರು.

ವರುಣಾ ಕ್ಷೇತ್ರದಲ್ಲಿ ಬಿಜೆಪಿ ಅಭ್ಯರ್ಥಿ ಪರ ಪ್ರಚಾರ ಮಾಡಲು ಮೈಸೂರಿನ ವಿಮಾನ ನಿಲ್ದಾಣಕ್ಕೆ ಶುಕ್ರವಾರ ಆಗಮಿಸಿದ ಸಿಎಂ ಬೊಮ್ಮಾಯಿ ಮಾಧ್ಯಮ ಪ್ರತಿನಿಧಿಗಳ ಜತೆ ಮಾತನಾಡಿದರು. ವರುಣಾ ಕ್ಷೇತ್ರ ಆರಂಭದ ದಿನದಿಂದ ಬಿಜೆಪಿಗೆ ಉತ್ತಮವಾಗಿದೆ. ಎಲ್ಲ ಸಮುದಾಯದವರು ಬಿಜೆಪಿಯನ್ನು ಬೆಂಬಲಿಸುವ ವಿಶ್ವಾಸ ಇದೆ. ವರುಣಾದಲ್ಲಿ ಒಂದು ದಿನ ಪ್ರಚಾರಕ್ಕೆ ಬರುತ್ತೇನೆ ಎಂದು ಹೇಳುತ್ತಿದ್ದ ಸಿದ್ದರಾಮಯ್ಯ, → 2




## ಆಯತಪ್ಪಿ ಬಿದ್ದ ಸೋಮಣ್ಣ

**ಚಾಮರಾಜನಗರ:** ಚಾಮರಾಜನಗರ ಜಿಲ್ಲೆಯಲ್ಲಿ ಶುಕ್ರವಾರ ಬೆಳಗ್ಗೆ ಕಿಚ್ಚ ಸುದೀಪ್ ಬಿಜೆಪಿ ಅಭ್ಯರ್ಥಿಗಳ ಪರ ಮತಬೇಟೆಗೆ ಇಳಿದಿದ್ದು, ಜನರು ಬಿಜೆಪಿ ಅಭ್ಯರ್ಥಿಗಳಿಗಿಂತಲೂ ಕಿಚ್ಚ ಸುದೀಪ್ ಅವರನ್ನು ನೋಡಲು ಮುಗಿಬಿದ್ದಿದ್ದರು.

ಚಾಮರಾಜನಗರ → 2

## ಚುನಾವಣೆ ಅಂದರೆ ಸ್ಪರ್ಧೆ : ಶತೃತ್ವ ಅಲ್ಲ

### ವಿ.ಸೋಮಣ್ಣಗೆ ನಟ ಶಿವರಾಜ್ ಕುಮಾರ್ ಕಿವಿಮಾತು

**ಶಿವಮೊಗ್ಗ :** ಅಪ್ಪು ಹೆಸರಲ್ಲಿ ನೀವು ಆಸ್ಪತ್ರೆ ಕಟ್ಟಿಸಿದ್ದೀರಿ. ಆ ಬಗ್ಗೆ ನಮಗೆ ತುಂಬಾ ಗೌರವವಿದೆ. ಚುನಾವಣೆ ಅಂದ್ರೆ ಕೇವಲ ಸ್ಪರ್ಧೆ. ಅದು ಶತೃತ್ವಕ್ಕೆ ನಾಂದಿ ಅಲ್ಲ ಎಂದು ನಟ ಶಿವರಾಜ್ ಕುಮಾರ್ ಶುಕ್ರವಾರ ಹೇಳಿದ್ದಾರೆ.

ನನಗೆ ವಿ.ಸೋಮಣ್ಣ ಬಗ್ಗೆ ಗೌರವವಿದೆ. ನಾನು ನನ್ನ ವೈಯಕ್ತಿಕ ದೃಷ್ಟಿಕೋನದ ಆಧಾರದಲ್ಲಿ ಕಾಂಗ್ರೆಸ್ ಪರವಾಗಿ ಪ್ರಚಾರ ಮಾಡುತ್ತಿದ್ದೇನೆ. ಹಾಗಾಗಿ, ಸ್ವಲ್ಪ ಯೋಚಿಸಿ ಮಾತನಾಡಿ ಎಂದು ಹೇಳಿದ್ದಾರೆ.

ವರುಣಾ ಕ್ಷೇತ್ರದಲ್ಲಿ ಕಾಂಗ್ರೆಸ್ ಪರವಾಗಿ ಪ್ರಚಾರ ಮಾಡಿದ್ದ ಶಿವರಾಜ್ ಕುಮಾರ್ ವಿರುದ್ಧ ಬೇಸರ ವ್ಯಕ್ತಪಡಿಸಿದ್ದ ವಿ.ಸೋಮಣ್ಣ, ನಾನು ಪುನೀತ್ ರಾಜ್‌ಕುಮಾರ್ ಹೆಸರಿನಲ್ಲಿ 250 ಹಾಸಿಗೆ → 2

## ಸಿಎಂ, ಸಚಿವ ಸ್ಥಾನ ಮಾರಾಟ

### ಬಿಜೆಪಿ ವಿರುದ್ಧ ಕಾಂಗ್ರೆಸ್ ಗಂಭೀರ ಆರೋಪ

**ಬೆಂಗಳೂರು :** ರಾಜ್ಯದ ಮುಖ್ಯಮಂತ್ರಿ ಸ್ಥಾನವನ್ನು 2,500 ಕೋಟಿ ರೂ.ಗಳಿಗೆ ಮತ್ತು ಸಚಿವ ಸ್ಥಾನವನ್ನು 500 ಕೋಟಿ ರೂ.ಗೆ ಮಾರಾಟ ಮಾಡಲು ಬಿಜೆಪಿ ಸಿದ್ಧತೆ ಮಾಡಿಕೊಂಡಿದೆ ಎಂದು ಕಾಂಗ್ರೆಸ್ ಗಂಭೀರ ಆರೋಪ ಮಾಡಿದೆ.

ನಗರದಲ್ಲಿ ಶುಕ್ರವಾರ ಕಾಂಗ್ರೆಸ್ ಪ್ರಮುಖರು ಬಿಜೆಪಿ ವಿರುದ್ಧ ಪೋಸ್ಟರ್‌ಗಳು ಮತ್ತು ಸ್ಥಳೀಯ ಪತ್ರಿಕೆಗಳಲ್ಲಿ ನೀಡಿರುವ ಜಾಹೀರಾತುಗಳನ್ನು ಸುದ್ದಿಗೋಷ್ಠಿಯಲ್ಲಿ ಬಿಡುಗಡೆ ಮಾಡುವ ಮೂಲಕ ಬಿಜೆಪಿ ಸರ್ಕಾರ ವಿರುದ್ಧ ಸಾಲುಸಾಲು ಭ್ರಷ್ಟಾಚಾರ ಆರೋಪ ಮಾಡಿದೆ.

ಎಐಸಿಸಿ ವಕ್ತಾರ ಪವನ್ ಖೇರಾ ಮಾತನಾಡಿ, ಈ ಹಿಂದೆಯೂ ಬಿಜೆಪಿ ಸಿಎಂ, ಸಚಿವ ಸ್ಥಾನವನ್ನು ಮಾರಾಟ ಮಾಡಿದೆ. ಬಿಜೆಪಿಯನ್ನು 40% ಸರ್ಕಾರ ಎಂದು ಕರೆಯಲು ಕಾರಣವಿದೆ. ಅತ್ಯಂತ ಧಾರ್ಮಿಕ ಪಕ್ಷ ಎಂದು ಹೇಳಿಕೊಳ್ಳುವ ಬಿಜೆಪಿಯು ಮಠಗಳಿಗೆ ಅನುದಾನ ಬಿಡುಗಡೆ ಮಾಡಲು ಶೇ. 30 ಕಮಿಷನ್ ಕೇಳುತ್ತದೆ ಎಂದು ಆರೋಪಿಸಿದರು.

ಮಣಿಪುರ ರಾಜ್ಯ ಹೊತ್ತಿ ಉರಿಯುತ್ತಿರುವ ಈ ಹೊತ್ತಿನಲ್ಲಿ ಪ್ರಧಾನಿ ಮೋದಿ ಅವರು ಕರ್ನಾಟಕದಲ್ಲಿ ಪ್ರಚಾರ ಮಾಡುವುದರಲ್ಲಿ ನಿರತರಾಗಿದ್ದಾರೆ. ಇದು ಬಿಜೆಪಿ ಸರ್ಕಾರದ ತಪ್ಪು ಆದ್ಯತೆಯನ್ನು ತೋರಿಸುತ್ತದೆ ಎಂದು ಟೀಕಿಸಿದರು.

## ಪ್ರಧಾನಿ ರೋಡ್ ಶೋಗೆ ಹೈ ಗ್ರೀನ್ ಸಿಗ್ನಲ್

**ಬೆಂಗಳೂರು :** ನಗರದಲ್ಲಿ ಭಾನುವಾರ ಮೇ 7ರಂದು ಆಯೋಜಿಸಿದ್ದ ಪ್ರಧಾನಿ ನರೇಂದ್ರ ಮೋದಿ ರೋಡ್ ಶೋಗೆ ಹೈಕೋರ್ಟ್ ಗ್ರೀನ್ ಸಿಗ್ನಲ್ ಕೊಟ್ಟಿದೆ. ಸಾರ್ವಜನಿಕರಿಗೆ ತೊಂದರೆಯಾಗುವುದರಿಂದ ರೋಡ್ ಶೋಗೆ ಅನುಮತಿ ನೀಡಬಾರದು ಎಂದು ಸಲ್ಲಿಸಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ಹೈಕೋರ್ಟ್ ವಜಾಗೊಳಿಸಿದೆ.

ಅರ್ಜಿಯ ವಿಚಾರಣೆ ನಡೆಸಿದ ನ್ಯಾ. ಕೃಷ್ಣ → 2

# ಮಂಡ್ಯದಲ್ಲಿ ಬಿಜೆಪಿ ಗೆಲುವು ಖಚಿತ : ಅಶೋಕ್ ಜಯರಾಂ

● ಮಂಡ್ಯ ಅಭಿವೃದ್ಧಿಯ ಮಂತ್ರ ಪಠಣ ● ರೈತರಿಗೆ ನೆಮ್ಮದಿ ಬದುಕು ಕೊಡುವುದು ● ಯುವಕರಿಗೆ ಉದ್ಯೋಗ ಅವಕಾಶ ಸೃಷ್ಟಿಸುವುದು ● ಮೈಷುಗರ್‌ಗೆ ಶಾಶ್ವತ ಪುನಃಶ್ಚೇತನ ● ಬಿಜೆಪಿ ಅಭ್ಯರ್ಥಿ ವಿಶೇಷ ಸಂದರ್ಶನ

**ಮಂಡ್ಯ :** ಈ ಬಾರಿಯ ಚುನಾವಣೆಯಲ್ಲಿ ಬಿಜೆಪಿ ವಿಜಯ ಪತಾಕೆ ಹಾರಿಸಲಿದೆ. ಕ್ಷೇತ್ರದ ಮತದಾರರ ಆಶೀರ್ವಾದದ ಶ್ರೀರಕ್ಷೆ ನನ್ನ ಮೇಲಿದೆ. ಬಿಜೆಪಿ ನಾಯಕರು, ಕಾರ್ಯಕರ್ತರು, ನನ್ನ ತಂದೆ ಜಯರಾಂ ಅಭಿಮಾನಿಗಳ ನಿರಂತರ ಪರಿಶ್ರಮದ ಪ್ರತಿಫಲದ ಪರಿಣಾಮ ಕ್ಷೇತ್ರದಲ್ಲಿ ಇದೇ ಮೊದಲ ಬಾರಿಗೆ ಬಿಜೆಪಿ ತಾವರೆ (ಕಮಲ) ಅರಳಲಿದೆ, ಇದು ಖಚಿತ.

ಇದು ಸೌಮ್ಯ, ಸರಳ ಮತ್ತು ಮಂಡ್ಯ ಐಕಾನ್ ಎಂದೇಖ್ಯಾತಿಯಾಗಿರುವ ಮಂಡ್ಯ ವಿಧಾನ ಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಅಶೋಕ್ ಎಸ್‌ಡಿ ಜಯರಾಂ ಅವರ ಅದಮ್ಯ ವಿಶ್ವಾಸದ ನುಡಿಗಳು.



ಬಿಡುವಿಲ್ಲದ ಪ್ರಚಾರದ ನಡುವೆಯೂ ಅಶೋಕ್ ಜಯರಾಂ 'ವರ್ತಮಾನ'ಕ್ಕೆ ನೀಡಿದ ಸಂದರ್ಶನದಲ್ಲಿ ಬಿಜೆಪಿ ಈ ಬಾರಿ ಕ್ಷೇತ್ರದಲ್ಲಿ ಹೊಸ ಸಂಚಲನ ಮೂಡಿಸಿದೆ. ಮತದಾರರು ಬಿಜೆಪಿ ಪರವಾಗಿದ್ದಾರೆ ಎನ್ನುವುದು ಪ್ರಚಾರದ ವೇಳೆ ಸ್ಪಷ್ಟವಾಗಿ ಗೋಚರವಾಗಿದೆ ಎಂದರು.

ಕ್ಷೇತ್ರದಲ್ಲಿ ಜನರು ನನ್ನ ತಂದೆ ಜಯರಾಂ ಅವರೊಂದಿಗೆ ಹೊಂದಿದ್ದ ಅವಿನಾಭಾವ ಸಂಬಂಧವನ್ನು ಇಂದಿಗೂ ಮರೆತಿಲ್ಲ. ಕ್ಷೇತ್ರದ ಮತದಾರರು ಇಂದಿಗೂ ಅದೇ ಪ್ರೀತಿ, ವಿಶ್ವಾಸ ತೋರುತ್ತಿದ್ದಾರೆ. ಅದೇ ಪ್ರಚಾರಕ್ಕೆ, ಮತ ಬಿಕ್ಷೆ ಕೋರಲು ನನಗೆ ಹೊಸ ಹುಮ್ಮಸ್ಸು ನೀಡಿದೆ.

**1.ಮತದಾರರು ಈ ಬಾರಿ ಚುನಾವಣೆಯಲ್ಲಿ ನಿಮ್ಮನ್ನೇ ಏಕೆ ಆಯ್ಕೆ ಮಾಡಬೇಕು ಎಂದು ಬಯಸುತ್ತೀರಾ?**

**ಅಶೋಕ್ ಜಯರಾಂ :** ಬಿಜೆಪಿ ಸರ್ಕಾರ ಕಳೆದ ಮೂರು ವರ್ಷಗಳಲ್ಲಿ ರಾಜ್ಯದ ಅಭಿವೃದ್ಧಿಗೆ ತನ್ನದೇ ಆದ ಕೊಡುಗೆ ನೀಡಿದೆ. ಬಡವರು, ದೀನ ದಲಿತರು, ರೈತರು, ಹಿಂದುಳಿದವರು, ಮಹಿಳೆಯರ ಕಲ್ಯಾಣಕ್ಕೆ ಹಲವಾರು ಯೋಜನೆ ಗಳನ್ನು ತಂದು ಪ್ರಾಮಾಣಿಕ ಕಳಕಳಿ ತೋರಿದೆ. ಕೇಂದ್ರ ಮತ್ತು ರಾಜ್ಯ ಸರ್ಕಾರದ ಡಬಲ್ ಇಂಜಿನ್ ಸರ್ಕಾರದಿಂದ ಸಾಕಷ್ಟು ಅಭಿವೃದ್ಧಿ ಹಾಗೂ ಜನಪರ ಕಾಳಜಿ ಯೋಜನೆಗಳನ್ನು ತಂದಿರುವುದು ಪಕ್ಷದ ಜನಪ್ರಿಯತೆಗೆ ಸಾಕ್ಷಿಯಾಗಿದೆ. ಅದು ಗೆಲುವಿನ ಮೆಟ್ಟಿಲು ಎಂದು ಭಾವಿಸಿದ್ದೇನೆ

**2.ಮಂಡ್ಯದ ಅಭಿವೃದ್ಧಿಯ ದೃಷ್ಟಿಕೋನಕ್ಕೆ ನಿಮ್ಮ ಆಲೋಚನೆಗಳು ಏನು?**

**ಅಶೋಕ್ ಜಯರಾಂ :** ನಮ್ಮ ತಂದೆ ಮಂಡ್ಯಕ್ಕೆ ಸಾಕಷ್ಟು ಅಭಿವೃದ್ಧಿ ಕೆಲಸಗಳನ್ನು ಮಾಡಿದ್ದಾರೆ. ಜಿಲ್ಲಾ ಕೇಂದ್ರವಾದ ಮಂಡ್ಯ ಅಭಿವೃದ್ಧಿ ದೃಷ್ಟಿಯಿಂದ ಈಗ ಹೋಲಿಕೆ ಮಾಡಿದರೆ ಸಾಕಷ್ಟು ಹಿಂದುಳಿದಿದೆ. ಮಂಡ್ಯಕ್ಕೆ ಅಭಿವೃದ್ಧಿಯ ಹೊಸ ರೂಪ ಕೊಡಬೇಕು. ಬೃಹತ್ ಮಂಡ್ಯ ನಿರ್ಮಾಣದ ಕನಸು ಹಾಗೆ ಉಳಿದಿದೆ. ಯುವಕರಿಗೆ ಉದ್ಯೋಗ ನೀಡಲು ಕೈಗಾರಿಕೆಗಳನ್ನು ಸ್ಥಾಪನೆಗೆ ಪ್ರಾಮಾಣಿಕ ಪ್ರಯತ್ನ ಮಾಡಬೇಕಿದೆ. ಗ್ರಾಮೀಣ ಭಾಗದ ಮಹಿಳೆಯರ ಸ್ವಾವಲಂಬಿ ಬದುಕು ಕಟ್ಟಿ ಕೊಡಲು ಖಾಸಗಿ ಉದ್ಯಮದಾರರ ಮೂಲಕ ಕ್ಷೇತ್ರದಲ್ಲಿ ಗಾರ್ಮೆಂಟ್ ಉದ್ಯಮ ಆರಂಭಿಸುವ ಬಗ್ಗೆ ಆಲೋಚನೆ ಇದೆ. ಶಿಕ್ಷಣ, ಆರೋಗ್ಯ ಕ್ಷೇತ್ರದಲ್ಲಿನ ಪ್ರಗತಿ ಬಗ್ಗೆ ಕೆಲವು ಪರಿಕಲ್ಪನೆಗಳನ್ನು ಇಟ್ಟು ಕೊಂಡಿದ್ದೇನೆ. ಜನರು ಆಶೀರ್ವಾದ ಮಾಡಿದ ಕೂಡಲೇ ಕೆಲವು ಯೋಜನೆಗಳ ಅನುಷ್ಠಾನಕ್ಕೆ ಕ್ರಮಕೈಗೊಳ್ಳಲಾಗುವುದು.

**3.ಮೈಷುಗರ್ ಕಾರ್ಖಾನೆಯ ಶಾಶ್ವತ ಪುನಃಶ್ಚೇತನದ ಪ್ರಯತ್ನಕ್ಕೆ ಕೈ ಹಾಕುವಿರಾ?**

**ಅಶೋಕ್ ಜಯರಾಂ :** ಖಂಡಿತ. ಕಳೆದ ನಾಲ್ಕು ವರ್ಷಗಳಿಂದ ಮುಚ್ಚಿ ಹೋಗಿದ್ದ ಮೈಷುಗರ್ ಕಾರ್ಖಾನೆಯನ್ನು ಬಿಜೆಪಿ ಸರ್ಕಾರ ಕೋಟಿಗಟ್ಟಲೆ ಹಣ ನೀಡಿ ಪುನಃಶ್ಚೇತನದ ಹೆಜ್ಜೆಗಳನ್ನು ಇಟ್ಟಿದೆ. ನಮ್ಮ ಸರ್ಕಾರ ಮತ್ತು ನಾಯಕರಿಗೆ ಮಂಡ್ಯದ ರೈತರ ಬಗ್ಗೆ ಸಾಕಷ್ಟು ಕಾಳಜಿ , ಕಳಕಳಿ ಇರುವ ಕಾರಣಕ್ಕಾಗಿ ಮೈಷುಗರ್ ಕಾರ್ಖಾನೆಗೆ ಶಾಶ್ವತ ಪರಿಹಾರ ಕಂಡು ಹಿಡಿಯಲು ಪ್ರಾಮಾಣಿಕ ಪ್ರಯತ್ನ ಮಾಡಲಿದ್ದಾರೆ. ಜೊತೆಗೆ ನನ್ನ ಕನಸು,ಆಶಯ ಕೂಡ ಮೈಷುಗರ್ ಗತವೈಭದತ್ತ ಸಾಗಬೇಕು. ರೈತರ ಬದುಕು ಹಸನವಾಗಬೇಕು ಎನ್ನುವುದಾಗಿದೆ.

**4.ಸಂಸದೆ ಸಮಲತಾ ಅಂಬರೀಷ್ ಬಿಜೆಪಿ ಸೇರ್ಪಡೆಯಾಗಿರುವುದು ನಿಮಗೆ ಬಲಬಂದಿದೆ ಎಂದು ಭಾವಿಸುತ್ತೀರಾ**

**ಅಶೋಕ್ ಜಯರಾಂ :** ಮೇಡಂ ಸುಮಲತಾ ಅವರು ನಮ್ಮ ಜಿಲ್ಲೆಯ ಸಂಸದರು. ಅವರೊಂದು ಶಕ್ತಿ ಮತ್ತು ಯುಕ್ತಿ. ಸ್ವಾಭಿಮಾನದ ಪ್ರತೀಕವೂ ಹೌದು. ಅವರ ಸೇರ್ಪಡೆಯಿಂದ ಪಕ್ಷ ಹಾಗೂ ಬಿಜೆಪಿ ಎಲ್ಲಾ ಅಭ್ಯರ್ಥಿಗಳಿಗೆ ಬಲ ಬಂದಿದೆ. ಮಂಡ್ಯ ಜನರ ಮೇಲೆ ಅಗಾಧವಾದ ಪ್ರೀತಿ, ಅಭಿಮಾನ ಹೊಂದಿರುವ ಮೇಡಂ ಅವರ ಕನಸುಗಳು ಅನುಷ್ಠಾನಗೊಳ್ಳಬೇಕಾದರೆ ಕೇಂದ್ರ ಮತ್ತು ರಾಜ್ಯದಲ್ಲಿ ಒಂದೇ ಪಕ್ಷದ ಸರ್ಕಾರ ಅಧಿಕಾರಕ್ಕೆ ಬಂದರೆ ಯಾವುದೇ ತೊಡಕಾಗುವುದಿಲ್ಲ ಎಂಬ ಅಭಿಪ್ರಾಯ. ಅದು ಸಾಕಾರಗೊಳ್ಳಬೇಕಿದೆ.

**5. ಕ್ಷೇತ್ರದ ಯುವ ಶಕ್ತಿಗೆ ನೀವು ಹೇಗೆ ಪ್ರೇರಣೆ ಆಗುತ್ತೀರಾ ?**

**ಅಶೋಕ್ ಜಯರಾಂ :** ನಮ್ಮ ಕ್ಷೇತ್ರದಲ್ಲಿ ಯುವಕರು, ಯುವತಿಯರ ಸಂಖ್ಯೆ ಹೆಚ್ಚಿದೆ. ರೈತರ ಮಕ್ಕಳೇ ಹೆಚ್ಚಾಗಿರುವ ಮಂಡ್ಯದಲ್ಲಿ ವಿದ್ಯಾವಂತರೂ ಹೆಚ್ಚಿದ್ದಾರೆ. ಉದ್ಯೋಗ ಜೊತೆಗೆ ಸ್ಪರ್ಧಾತ್ಮಕ ಯುಗಕ್ಕೆ ಅನುಗುಣವಾಗಿ ಸೂಕ್ತ ತರಬೇತಿ, ಮಾರ್ಗದರ್ಶನ, ಕೌಶಲ್ಯ ಅಭಿವೃದ್ಧಿಗೆ ಒತ್ತು ನೀಡುವ ಪರಿಕಲ್ಪನೆ ಇದೆ. ನನ್ನ ದೃಷ್ಟಿಕೋನದಲ್ಲಿ ಸ್ವಯಂ ಉದ್ಯೋಗ ಮೂಲಕ ಯುವ ಶಕ್ತಿ ಸ್ವಾವಲಂಬನೆ ಬದುಕು ಸಾಗಿಸುವ ಬಗ್ಗೆ ಅರಿವು ಮತ್ತು ಅವಕಾಶ ಕಲ್ಪಿಸುವ ಜವಾಬ್ದಾರಿ ನಿರ್ವಹಿಸಬೇಕು ಎಂದು ಕೊಂಡಿದ್ದೇನೆ.





### ಯಾರಿಗೆ ಯಾವ ರೀತಿ ಪ್ಲಸ್-ಮೈನಸ್

**ಅಶೋಕ್‌ಜಯರಾಂ (ಬಿಜೆಪಿ)**
* ಕ್ಷೇತ್ರದಲ್ಲಿ ನಿರಂತರ ಸಾಮಾಜಿಕ ಕಾರ್ಯ
* ತಂದೆ ಎಸ್.ಡಿ.ಜಯರಾಂ ವರ್ಚಸ್ಸು-ಸೌಮ್ಯ ಸ್ವಭಾವ ಲಾಭ
* ಪಕ್ಷ ಸಂಘಟನೆಯಲ್ಲಿ ತಡವಾಗಿ ಸಂಘಟನೆ ಆರಂಭಿಸಿದ್ದು ಎಂಬ ಮಾತಿದೆ
* ಆರ್‌ಎಸ್‌ಎಸ್, ಸಂಸದೆ ಸುಮಲತಾ ಸೇರಿದಂತೆ ಇತರ ನಾಯಕರ ಬಲ

**ಪಿ.ರವಿಕುಮಾರ್‌ಗಣಿಗ (ಕಾಂಗ್ರೆಸ್)**
* ಕಳೆದ ಬಾರಿಯ ಸೋಲಿನ ಅನುಕಂಪವನ್ನು ಜನ ಇನ್ನು ನೆನಪಿನಲ್ಲಿ ಇಟ್ಟುಕೊಂಡಿದ್ದಾರಾ
* ಕೊರೊನಾ ಸಂದರ್ಭದಲ್ಲಿ ನೆರವು ಮಾಡಿದ್ದಾರೆ
* ಕಳೆದ ಬಾರಿ ಮತದಾನ ಹಿಂದಿನ ದಿನ ಕಾರ್ಯಕರ್ತರಿಗೆ ಸಿಗದೆ ಹೋಗಿದ್ದು ದೊಡ್ಡ ಆರೋಪ

**ಬಿ.ಆರ್.ರಾಮಚಂದ್ರು (ಜೆಡಿಎಸ್)**
* ಜೆಡಿಎಸ್ ಪಕ್ಷ ಹಾಗೂ ದಳಪತಿಗಳ ವರ್ಚಸ್ಸು ವರ್ಕ್ ಔಟ್ ಆಗುತ್ತಾ?
* ಕ್ಷೇತ್ರಾದ್ಯಂತ ಸಾಮಾಜಿಕ ಕೆಲಸ ಕಾರ್ಯ ಮಾಡಿರುವುದು ಲಾಭವಾಗುತ್ತಾ?
* ಕ್ಷೇತ್ರದ ವ್ಯಕ್ತಿ ಅಲ್ಲ ಎಂಬ ಹಣೆ ಪಟ್ಟಿ
* ಸ್ವಪಕ್ಷೀಯರ ಬಂಡಾಯ ಮೈನಸ್ ಪಾಯಿಂಟ್

**ಕೆ.ಎಸ್.ವಿಜಯ್ ಆನಂದ್ (ಜೆಡಿಎಸ್ ಬಂಡಾಯ)**
* ತಾತ ಕೆ.ವಿ.ಶಂಕರಗೌಡರ ವರ್ಚಸ್ಸು
* ಶಾಸಕ ಎಂ.ಶ್ರೀನಿವಾಸ್ ಕೃಪೆ-ಸ್ವಾಭಿಮಾನದ ಮಾತುಗಳು ಲಾಭ
* ದಳಪತಿಗಳ ವಿರುದ್ಧ ಬಂಡಾಯ ಸಾರಿದ್ದು ಮೈನಸ್

**ಎಸ್.ಸಿ.ಮಧುಚಂದನ್ (ಸರ್ವೋದಯ ಕರ್ನಾಟಕ)**
* ರೈತಪರ ಹಾಗೂ ಮನ್‌ಮುಲ್ ಹಗರಣಗಳ ವಿರುದ್ಧ ಹೋರಾಟ
* ಚುನಾವಣೆಯಲ್ಲಿ ರೈತಬಲವೇ ಹೆಚ್ಚು. ಏಕಾಂಗಿ ಹೋರಾಟ ಇದ್ದೆ ಇದೆ.

## ಜೆಡಿಎಸ್ ಭದ್ರಕೋಟೆ ಛಿದ್ರ ಮಾಡಲು ಪ್ರಮುಖರ ಪೈಪೋಟಿ

**ಮಂಡ್ಯ :** ಸಕ್ಕರೆ ನಾಡಿನ ಜಿಲ್ಲಾ ಕೇಂದ್ರವಾದ ಮಂಡ್ಯ ವಿಧಾನಸಭಾ ಕ್ಷೇತ್ರದ ಮೇಲೆ ಪ್ರಮುಖ ಮೂರು ಪಕ್ಷಗಳ ಕಣ್ಣು ಕೇಂದ್ರೀಕೃತವಾಗಿವೆ.

ಜೆಡಿಎಸ್‌ನ ಭದ್ರ ಕೋಟೆಯನ್ನು ಛಿದ್ರ ಮಾಡಲು ಬಿಜೆಪಿ, ಕಾಂಗ್ರೆಸ್ ಜೊತೆ ರೈತಸಂಘ ಹಾಗೂ ಜೆಡಿಎಸ್ ಬಂಡಾಯ ಅಭ್ಯರ್ಥಿಯ ಸ್ಪರ್ಧೆಯಿಂದ ಜಿದ್ದಾಜಿದ್ದಿನ ಹೋರಾಟ ನಡೆಯುತ್ತಿದೆ. ಜೆಡಿಎಸ್‌ನಲ್ಲಿದ್ದವರೇ ಎದುರಾಳಿಗಳಾಗಿರುವುದು ರಣಕಣ ಹೆಚ್ಚಿಸಿದೆ.

ಕಾಂಗ್ರೆಸ್ ಅಭ್ಯರ್ಥಿ ರವಿಕುಮಾರ್ ಗಣಿಗ ಹೊರತುಪಡಿಸಿ ಉಳಿದವರೆಲ್ಲರೂ ಹೊಸ ಮುಖಗಳು. ತೀವ್ರ ಪೈಪೋಟಿ ನಡೆಯುತ್ತಿದೆ. ಜೆಡಿಎಸ್‌ನಲ್ಲಿ ಬಂಡಾಯ ಶಾಸಕ ಎಂ.ಶ್ರೀನಿವಾಸ್ ಸ್ವಾಭಿಮಾನಿ ಪಡೆ ಕಟ್ಟಿಕೊಂಡಿರುವುದು ದಳಪತಿಗಳ ನಿದ್ದೆಗೆಡಿಸುವಂತೆ ಮಾಡಿದೆ. ಬಂಡಾಯದ ಲಾಭ ಪಡೆಯಲು ಬಿಜೆಪಿ, ಕಾಂಗ್ರೆಸ್ ಹಾಗೂ ರೈತಸಂಘ ಹವಣಿಸುತ್ತೆ

ಕಾಂಗ್ರೆಸ್ ಅಭ್ಯರ್ಥಿ ಪಿ.ರವಿಕುಮಾರ್ ಗಣಿಗ ಕಳೆದ ಬಾರಿ 2018ರ → 2

ಕ್ಷೇತ್ರದಲ್ಲಿ ಒಟ್ಟು 2,24,229 ಮತದಾರರ ಪೈಕಿ ಪುರುಷರು 1,09,953, ಮಹಿಳೆಯರು 1,14,243 ಹಾಗೂ ಲೈಂಗಿಕ ಅಲ್ಪಸಂಖ್ಯಾತರು 33 ಮಂದಿ ಇದ್ದಾರೆ. ಕಾಂಗ್ರೆಸ್, ಬಿಜೆಪಿ, ಜೆಡಿಎಸ್, ರೈತಸಂಘ ಹಾಗೂ ಪಕ್ಷೇತರ (ಜೆಡಿಎಸ್ ಬಂಡಾಯ) ಅಭ್ಯರ್ಥಿಗಳು ಎಲ್ಲರೂ ಒಕ್ಕಲಿಗ ಸಮುದಾಯದವರೇ ಆಗಿದ್ದಾರೆ. ಇದರಿಂದ ಒಕ್ಕಲಿಗ ಮತಗಳು ಚದುರಲಿವೆ. ಎಸ್ಸಿ, ಎಸ್ಟಿ ಸೇರಿದಂತೆ ಇತರೆ ಜಾತಿಗಳ ಮತದಾರರೇ ನಿರ್ಣಾಯಕ ಪಾತ್ರ ವಹಿಸಲಿದ್ದಾರೆ.

### ಜಾತಿ ಲೆಕ್ಕಾಚಾರ

| | |
|---|---|
| ಒಕ್ಕಲಿಗ 95 ಸಾವಿರ, | ಎಸ್ಸಿಎಸ್ಟಿ 38 ಸಾವಿರ |
| ಲಿಂಗಾಯತ 15 ಸಾವಿರ, | ಕುರುಬ 13 ಸಾವಿರ |
| ಮುಸ್ಲಿಂ 19 ಸಾವಿರ, | ಇತರೆ 44 ಸಾವಿರ |

**ಒಟ್ಟು ಮತದಾರರು 2,24,229**

ಪುರುಷರು : 1,09,953 ಮಹಿಳೆಯರು : 1,14,243

### -: 2018 ಫಲಿತಾಂಶ :-

ಎಂ ಶ್ರೀನಿವಾಸ್ : 69421 (ಜೆಡಿಎಸ್ ಗೆಲುವು)

ರವಿಕುಮಾರ್‌ಗಣಿಗ : 47813 (ಕಾಂಗ್ರೆಸ್)

**ಗೆಲುವಿನ ಅಂತರ : 21608**

ಎನ್.ಶಿವಣ್ಣ : 32064 (ಬಿಜೆಪಿ)

## ರೈತನಮಗ ಕೋಟಿಕೋಟಿ ಸಂಪಾದಿಸಿದ್ದು ಹೇಗೆ?

# ಎಚ್‌ಡಿಕೆ ವಿರುದ್ಧ ಸುಮಲತಾ ವಾಗ್ದಾಳಿ



**ಮದ್ದೂರು :** ಪ್ರಸಕ್ತ ನಡೆಯುತ್ತಿರುವ ವಿಧಾನಸಭೆ ಚುನಾವಣೆಯನ್ನು ಪ್ರತಿಷ್ಠೆಯಾಗಿ ಸ್ವೀಕರಿಸಿದ್ದು ಮತದಾರರು ಬಿಜೆಪಿ ಅಭ್ಯರ್ಥಿಗೆ ಮತನೀಡುವ ಮೂಲಕ ತಮ್ಮ ಕೈ ಬಲಪಡಿಸಬೇಕೆಂದು ಸಂಸದೆ ಸುಮಲತಾ ಅಂಬರೀಷ್ ಮನವಿ ಮಾಡಿದರು.

ಮದ್ದೂರು ತಾಲೂಕಿನ ಬೆಸಗರಹಳ್ಳಿ ಬಸ್‌ನಿಲ್ದಾಣದ ಆವರಣದಲ್ಲಿ ಬಿಜೆಪಿ ಅಭ್ಯರ್ಥಿ ಎಸ್.ಪಿ. ಸ್ವಾಮಿ ಪರ ಮತಪ್ರಚಾರ ಕೈಗೊಂಡು ಮಾತನಾಡಿದ ಅವರು ಪ್ರತಿಸಲ ಚುನಾವಣೆ ಬಂದಾಗಲೂ ಹಿಂದಿನ ಚುನಾವಣೆಯಲ್ಲಿ ಹೇಳಿದ ರೈತರ ಸಾಲ ಮನ್ನಾ, ಸ್ತ್ರೀಶಕ್ತಿ ಸಂಘಗಳ ಸಾಲಮನ್ನಾ ಇನ್ನಿತರೆ ಯೋಜನೆಗಳನ್ನೇ ಹೇಳಿಕೊಂಡು ಜಿಲ್ಲೆಯ ಜನರಿಗೆ ಅನ್ಯಾಯವೆಸಗುತ್ತಿದ್ದಾರೆಂದು ಪರೋಕ್ಷವಾಗಿ ಎಚ್.ಡಿ. ಕುಮಾರಸ್ವಾಮಿ ವಿರುದ್ಧ ವಾಗ್ದಾಳಿ ನಡೆಸಿದರು.

ರೈತರ ಮಕ್ಕಳೆಂದು ಹೆಸರೇಳುವ ಕುಮಾರಸ್ವಾಮಿ ಅವರು ಕೋಟ್ಯಂತರ ರೂ.ಗಳನ್ನು ಸಂಪಾದಿಸಿರುವ ಪರಿ ಹೇಗೆಂದು ಪ್ರಶ್ನಿಸಿದರಲ್ಲದೇ ಪ್ರತಿಸಲವೂ ರೈತರಿಗೆ ಅನ್ಯಾಯ ಮಾಡುತ್ತಿದ್ದು ಹಾಲಿಗೆ ನೀರು ಪ್ರಕರಣ ಬಯಲಿಗೆ ಬಂದ ವೇಳೆ ಜಿಲ್ಲೆಯ ಯಾವೊಬ್ಬ ಶಾಸಕರೂ ಚಕಾರ ಎತ್ತದಿರುವ ಬಗ್ಗೆ ಪ್ರಶ್ನಿಸಿದರಲ್ಲದೇ ಇದಕ್ಕೇಲ್ಲವೂ ಸೂತ್ರದಾರಿಗಳೂ ಅವರೇ ಎಂದು ಪರೋಕ್ಷವಾಗಿ ಕುಟುಕಿದರು.

ಅಕ್ರಮ ಗಣಿಗಾರಿಕೆ ವಿರುದ್ಧ ಹೋರಾಟ ಮಾಡುತ್ತಿದ್ದ ಸಂದರ್ಭದಲ್ಲಿ ಎಚ್.ಡಿ. ಕುಮಾರಸ್ವಾಮಿ ಅವರು ಕೆಆರ್‌ಎಸ್ ಅಣೆಕಟ್ಟೆಗೆ ಅಡ್ಡಡ್ಡ ಮಲಗಿಸುವಂತೆ ಹೇಳಿಕೆ ನೀಡುವ ಮೂಲಕ ದ್ವೇಷದ ರಾಜಕಾರಣ ಮಾಡುತ್ತಿದ್ದು ತಮ್ಮ ಕುಟುಂಬ ರಾಜಕಾರಣಕ್ಕೆ ಮಣೆ ಹಾಕುತ್ತಿರುವ ಕಾರ್ಯಕರ್ತರ ಗತಿ ಏನೆಂದರು.

ಕಳೆದ ಮೂರು ಬಾರಿ ಸ್ಥಳೀಯ ಶಾಸಕರಿಗೆ ಅವಕಾಶ ಕಲ್ಪಿಸಿದ್ದು ಈಗಾಗಲೇ 80 ವರ್ಷ ದಾಟಿರುವ ಶಾಸಕರಿಗೆ ನಿವೃತ್ತಿ ಅನ್ನುವುದೇ ಇಲ್ಲವೇ ಯುವಕರಿಗೆ ಅವಕಾಶ ಕಲ್ಪಿಸುವ ಜತೆಗೆ ಕುಟುಂಬ ರಾಜಕಾರಣಕ್ಕೆ ಇತಿಶ್ರೀ ನೀಡುವಂತೆ ಮನವಿ ಮಾಡಿದರಲ್ಲದೇ ವಿಧಾನಸಭೆ ಚುನಾವಣೆ ನನ್ನ ಪ್ರತಿಷ್ಠೆಯ ಕಣವಾಗಿದ್ದು ಮತದಾರರನ್ನು ನಂಬಿ ತಾವು ಬಿಜೆಪಿ ಪಕ್ಷಕ್ಕೆ ಬೆಂಬಲ ನೀಡಿದ್ದು ತಮ್ಮನ್ನು ಕೈಬಿಡುವುದಿಲ್ಲವೆಂದು ಬಾವುಕರಾದರು.

ಕೇಂದ್ರ ಮತ್ತು ರಾಜ್ಯ ಸರ್ಕಾರ ಜನಪರ ಕೆಲಸಗಳನ್ನು ಕೈಗೊಂಡಿದ್ದು ಜತೆಗೆ ಬಿಜೆಪಿ ಅಭ್ಯರ್ಥಿ ಎಸ್.ಪಿ. ಸ್ವಾಮಿ ಅವರು ಸರಳ ಸಜ್ಜನಿಕೆಯ ಪ್ರಾಮಾಣಿಕ ವ್ಯಕ್ತಿಯಾಗಿದ್ದು ಅವರನ್ನು ಗೆಲ್ಲಿಸುವ ಮೂಲಕ ತಮ್ಮ ಜತೆ ಶಕ್ತಿಯಾಗಿ ನಿಲ್ಲಲು ಅವಕಾಶ ಕಲ್ಪಿಸಬೇಕೆಂದರು.

ಈ ವೇಳೆ ಅಭ್ಯರ್ಥಿ ಎಸ್.ಪಿ. ಸ್ವಾಮಿ, ಜಿ.ಪಂ. ಮಾಜಿ ಸದಸ್ಯ ಮರಿಹೆಗಡೆ, ಮುಖಂಡರಾದ ಮನುಕುಮಾರ್, ನಾಗೇಶ್, ಬೆಸಗರಹಳ್ಳಿ ಬಾಲು, ಮಹೇಂದ್ರ, ಸಿದ್ದಲಿಂಗಸ್ವಾಮಿ ಇತರರಿದ್ದರು.

### ನಾನು ಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸಿದ ಮೂರು ದಿನವೇ

## ಬನ್ನೂರು ತಾಲೂಕು ಕೇಂದ್ರವಾಗಿ ಘೋಷಣೆ

– ಎಚ್.ಡಿ ಕುಮಾರಸ್ವಾಮಿ



**ತಿ.ನರಸೀಪುರ :** ನಾನು ಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸಿದ ಮೂರು ದಿನವೇ ಬನ್ನೂರರನ್ನು ತಾಲೂಕು ಕೇಂದ್ರವಾಗಿ ಘೋಷಣೆ ಮಾಡುತ್ತೇನೆ ಎಂದು ಮಾಜಿ ಮುಖ್ಯಮಂತ್ರಿ ಎಚ್.ಡಿ ಕುಮಾರಸ್ವಾಮಿ ಬನ್ನೂರು ಜನತೆಗೆ ಭರವಸೆ ನೀಡಿದರು.

ತಾಲೂಕಿನ ಬನ್ನೂರು ಡೈರಿ ಮುಂಭಾಗ ಜೆಡಿಎಸ್ ಪಕ್ಷದ ವತಿಯಿಂದ ಆಯೋಜನೆ ಮಾಡಿದ್ದ ಚುನಾವಣೆ ಪ್ರಚಾರದ ಸಭೆಯಲ್ಲಿ ಜೆಡಿಎಸ್ ಅಭ್ಯರ್ಥಿ ಹಾಗೂ ಶಾಸಕ ಎಂ. ಅಶ್ವಿನ್ ಕುಮಾರ್ ಪರ ಮತಯಾಚನೆ ಮಾಡಿ ಮಾತಾಡಿದ ಕುಮಾರಸ್ವಾಮಿ ಬನೂರು ಭೌಗೋಳಿಕವಾಗಿ ತುಂಬಾ ವಿಸ್ತಾರವಾಗಿದ್ದು ಇಲ್ಲಿನ ಜನತೆ ತಮ್ಮ ಕಾರ್ಯ ನಿಮಿತ್ತ ನರಸೀಪುರ ಕೇಂದ್ರಕ್ಕೆ ಹೋಗ ಬೇಕಾಗಿದೆ ಈ ಸಮಸ್ಯೆಯನ್ನು ನಾನು ಅಧಿಕಾರ ವಹಿಸಿಕೊಂಡ ಮರುದಿನವೇ ಪರಿಹಾರ ಮಾಡುತ್ತೇನೆ ತಾವೆಲ್ಲರು ನಮ್ಮ ಪಕ್ಷದ ಅಭ್ಯರ್ಥಿ ಅಶ್ವಿನ್ ಕುಮಾರ್ ರವರನ್ನು ಗೆಲ್ಲಿಸಿ ಕಳಿಸಿಕೂಡಿ ಎಂದು ಮನವಿ ಮಾಡಿದರು.

ಮುಂದುವರೆದು ಮಾತನಾಡಿದ ಕುಮಾರಸ್ವಾಮಿ ಅಲ್ಪ ಸಂಖ್ಯಾತರಿಗೆ ದೇವೇಗೌಡರ ಅವಧಿಯಲ್ಲಿ ನೀಡಲಾಗಿದ್ದ 4% ಮೀಸಲಾತಿಯನ್ನ ಬಿಜೆಪಿಯವರು ತೆಗೆದಿದ್ದಾರೆ ಇನ್ನೆಲ್ಲಿ ಇವರು ಮತ್ತು ಕಾಂಗ್ರೆಸ್ ನವರಿಗೆ ಅನುಕೂಲ ಮಾಡುವುದು ಮುಸ್ಲಿಂ ಬಾಂಧವರ ರಕ್ಷಣೆ ಜೆಡಿಎಸ್ ಪಕ್ಷದಿಂದ ಮಾತ್ರ ಎಂದು ಮಾಜಿ ಮುಖ್ಯಮಂತ್ರಿ ಕುಮಾರಸ್ವಾಮಿ ಹೇಳಿದರು.

ಕರ್ನಾಟಕದ ನಾಲ್ಕು ಮೂಲೆಗಳಿಂದ ಬಡವರು ಮಹಿಳೆಯರು ರೈತರು ಕಣ್ಣೀರು ಹಾಕಿ ಆಸ್ಪತ್ರೆಗೆ ಹೋಗಲು ಹಣವಿಲ್ಲ,ಶಾಲೆಗೆ ಸೇರಿಸಲು ದುಡ್ಡಿಲ್ಲ. ವಾಸಕ್ಕೆ ಮನೆಯಿಲ್ಲ. ಬೆಳೆ ನಾಶವಾಗಿದೆ ಎಂದು ಹೇಳಿ ದಿನ ನಿತ್ಯ ಜನರು ಬಳಿ ಏರುತ್ತಾ ಇದನ್ನೇಲ್ಲ ಮನಸಲ್ಲಿಟ್ಟುಕೊಂಡು ಪಂಚರತ್ನ ಯೋಜನೆಯನ್ನು ಜಾರಿಗೊಳಿಸ ಬೇಕೆಂದಿದ್ದೇನೆ ಇದಕ್ಕೆ ನಿಮ್ಮೆಲ್ಲರ ಸಹಕಾರ ಮುಖ್ಯ ಎಂದರು.

## ಜೆಡಿಎಸ್ ಕಾರ್ಯಕರ್ತರ ಬೈಕ್ ರ‍್ಯಾಲಿ



**ಮದ್ದೂರು :** ನಾಗಮಂಗಲ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಕೊಪ್ಪ ಹೋಬಳಿಯ ಜೆಡಿಎಸ್ ಕಾರ್ಯಕರ್ತರು, ಮುಖಂಡರು ನೂರಾರು ದ್ವಿಚಕ್ರ ವಾಹನಗಳ ಮೂಲಕ ಬೈಕ್ ರ‍್ಯಾಲಿ ನಡೆಸಿ ಶಾಸಕ ಸುರೇಶ್‌ಗೌಡ ಅವರಿಗೆ ಮತ ನೀಡುವಂತೆ ಮನವಿ ಮಾಡಿದರು. ತಾಲೂಕಿನ ಕೊಪ್ಪ ಜಿ.ಪಂ ವ್ಯಾಪ್ತಿಯ ಬೆಕ್ಕಳಲೆ, ಕಿರಂಗೂರು, ಬಿದರಕೋಟೆ, ತಗ್ಗಹಳ್ಳಿ, ಕೀಳಘಟ್ಟ, ಕೋಣಸಾಲೆ, ಚಿಕ್ಕೋನಹಳ್ಳಿ ಇನ್ನಿತರೆ ಗ್ರಾಮಗಳಲ್ಲಿ ಸಾವಿರಾರು ಕಾರ್ಯಕರ್ತರು ಬೈಕ್ ರ‍್ಯಾಲಿ ನಡೆಸಿ ಕ್ಷೇತ್ರದ ಅಭಿವೃದ್ಧಿಗೆ ಹಗಲಿರುಳು ಶ್ರಮಿಸುತ್ತಿರುವ ಶಾಸಕ ಸುರೇಶ್‌ಗೌಡ ಅವರ ಗೆಲುವಿಗೆ ಪ್ರತಿಯೊಬ್ಬ ಕಾರ್ಯಕರ್ತರು ಶ್ರಮಿಸುವಂತೆ ಘೋಷಣೆಗಳನ್ನು ಕೂಗಿದರು.

ತಾಲೂಕಿನ ಬೆಕ್ಕಳಲೆ ಗ್ರಾಮದಲ್ಲಿ ಬೈಕ್ ರ‍್ಯಾಲಿಗೆ ಚಾಲನೆ ನೀಡಿ ಮಾತನಾಡಿದ ಜೆಡಿಎಸ್ ಯುವ ಮುಖಂಡ ಕೋಣಸಾಲೆ ಮಧು ಕೊಪ್ಪ ಹೋಬಳಿ ವ್ಯಾಪ್ತಿಯ 8 ಪಂಚಾಯಿತಿಗಳ ಕಾರ್ಯಕರ್ತರು ಬೈಕ್ ರ‍್ಯಾಲಿ ಮೂಲಕ ತೆರಳಿ ಸುರೇಶ್‌ಗೌಡ ಅವರಿಗೆ ಮತ ನೀಡುವಂತೆ ಮನವಿ ಮಾಡಿದರು

ಕೊಪ್ಪ ಹೋಬಳಿಯಲ್ಲಿ ಶಾಸಕರು ಕೈಗೊಂಡಿರುವ ಅಭಿವೃದ್ಧಿ ಕಾರ್ಯಗಳೇ ಅವರ ಗೆಲುವಿಗೆ ಶ್ರೀರಕ್ಷೆಯಾಗಲಿದ್ದು ಕುಡಿಯುವ ನೀರು, ನಾಲಾ ಆಧುನೀಕರಣ, ಶಾಲಾ, ಕಾಲೇಜು ನಿರ್ಮಾಣ ಆರೋಗ್ಯ ಇನ್ನಿತರೆ ಕ್ಷೇತ್ರಗಳಿಗೆ ಹೆಚ್ಚಿನ ಒತ್ತು ನೀಡಿ ಮಾದರಿ ಕ್ಷೇತ್ರವನ್ನಾಗಿಸಿದ್ದು ಈ ಭಾರಿ ಅತ್ಯಧಿಕ ಮತಗಳಿಂದ ಜಯಶೀಲರಾಗುತ್ತಾರೆಂದು ವಿಶ್ವಾಸ ವ್ಯಕ್ತಪಡಿಸಿದರು.

ಈ ವೇಳೆ ಜೆಡಿಎಸ್ ಉಪಾಧ್ಯಕ್ಷರಾದ ಬಿದರಕೋಟೆ ಕುಶ, ಪ್ರದೀಪ್‌ಕುಮಾರ್, ತಾ.ಪಂ. ಮಾಜಿ ಅಧ್ಯಕ್ಷೆ ಲಕ್ಷ್ಮಿಚನ್ನರಾಜು, ಮುಖಂಡರಾದ ಸಂಗೀತ, ಸುನೀತ, ಶಂಕರ್, ಚನ್ನಪ್ಪ, ದೊಡ್ಡೋನು ಇತರರಿದ್ದರು.

## ಕೆಎಸ್‌ಆರ್‌ಟಿಸಿ ಬಸ್ ಬೈಕ್ ಡಿಕ್ಕಿ : ಮಹಿಳೆ ಸಾವು

**ನಂಜನಗೂಡು :** ಕೆಎಸ್‌ಆರ್‌ಟಿಸಿ ಬಸ್ ಬೈಕ್ ಗೆ ಡಿಕ್ಕಿ ಹೊಡೆದ ಪರಿಣಾಮ ಬೈಕಿನಲ್ಲಿ ಹಿಂದೆ ಕುಳಿತ್ತಿದ್ದ ಮಹಿಳೆ ಸ್ಥಳದಲ್ಲೇ ಸಾವನ್ನಪ್ಪಿ ಸವಾರನಿಗೆ ಗಾಯಗೊಂಡಿರುವ ಘಟನೆ ಸಮೀಪದ ಹಾಡ್ಯದಹುಂಡಿ ಗ್ರಾಮದ ಬಳಿ ಸಂಭವಿಸಿದೆ ಹಲ್ಲರೆ ಗ್ರಾಮದ ಪೂಜಾ(20) ಮೃತಪಟ್ಟ ದುರ್ಧೈವಿ. ಪೂಜಾ ತನ್ನ ಪತಿ ಮದನ್ ಇಬ್ಬರು 2 ತಿಂಗಳ ಹಿಂದೆ ಮದುವೆಯಾಗಿದ್ದರು. ಶುಕ್ರವಾರ ಬೆಳಗ್ಗೆ ಮುತ್ತಿಗೆಹುಂಡಿ ಗ್ರಾಮದಲ್ಲಿನ ಸಂಬಂಧಿಕರ ಮನೆಯಲ್ಲಿ ಪೂಜಾಗೆಂದು ತಮ್ಮ ಬೈಕಿನಲ್ಲಿ ತೆರಳುತ್ತಿದ್ದ ಸಂದರ್ಭದಲ್ಲಿ ಹೆಡಿಯಾಲದಿಂದ ಬಂದ ಕೆಎಸ್ ಆರ್ ಟಿಸಿ ಬಸ್ ಹಾಗು ಬೇಕ್ ನಡುವೆ ಮುಖಾಮುಖಿ ಡಿಕ್ಕಿಯಾದ ಪರಿಣಾಮ ಪೂಜಾಳ ತಲೆಗೆ ಪೆಟ್ಟು ಬಿದ್ದು ಸ್ಥಳದಲ್ಲೇ ಸಾವನ್ನಾಪ್ಪದ್ದರೆ, ಪತಿ ಗಾಯಗೊಂಡು ಮೈಸೂರಿನ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ ಈ ಪ್ರಕರಣ ಹುಲ್ಲಹಳ್ಳಿ ಪೋಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ.

# ವಿದ್ಯಾರ್ಥಿಗಳಿಗೆ ಸಂಸ್ಕೃತಿ, ಸಂಸ್ಕಾರ ಅಗತ್ಯ

**ಮದ್ದೂರು :** ವಿದ್ಯಾರ್ಥಿಗಳು ಶೈಕ್ಷಣಿಕ ಹಂತದಲ್ಲಿಯೆ ಸಂಸ್ಕೃತಿ, ಸಂಸ್ಕಾರ ಮತ್ತು ಭಾಷಾಭಿಮಾನವನ್ನು ಮೈಗೂಡಿಸಿಕೊಂಡು ದೇಶದ ಸತ್ಪ್ರಜೆಗಳಾಗಿ ರೂಪಗೊಳ್ಳಬೇಕೆಂದು ಉದ್ಯಮಿ, ಸಮಾಜ ಸೇವಕ ಪ್ರಣಾಮ್ ಸತೀಶ್ ತಿಳಿಸಿದರು.

ಮದ್ದೂರು ಪಟ್ಟಣದ ವರ್ಧಮಾನ ಪ್ಯಾರಾಮೆಡಿಕಲ್ ಕಾಲೇಜು ಆವರಣದಲ್ಲಿ ತಾಲೂಕು ಕನ್ನಡ ಸಾಹಿತ್ಯ ಪರಿಷತ್ ಆಯೋಜಿಸಿದ್ದ ಕನ್ನಡ ಸಾಹಿತ್ಯ ಪರಿಷತ್‌ನ 109ನೇ ವರ್ಷದ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಕನ್ನಡ, ನಾಡು, ನುಡಿ, ನೆಲ, ಜಲ, ಭಾಷೆಗೆ ಧಕ್ಕೆ ಬಂದಾಗ ಹೋರಾಟದ ಮನೋಭಾವನೆಯನ್ನು ಬೆಳೆಸಿಕೊಳ್ಳುವಂತೆ ಕಿವಿಮಾತು ಹೇಳಿದ ಅವರು ಅನ್ಯ ಭಾಷಿಗರಿಗೂ ಕನ್ನಡ ನಾಡಿನ ಸಾಹಿತ್ಯ, ಸಂಸ್ಕೃತಿ, ಆಚಾರ, ವಿಚಾರಗಳನ್ನು ಪರಿಚಯಿಸಿ ಸಾಹಿತ್ಯಾಭಿರುಚಿಯನ್ನು ಬಹು ಎತ್ತರಕ್ಕೆ ಕೊಂಡೊಯ್ಯಬೇಕೆಂದರು.

ಇತ್ತೀಚಿನ ದಿನಗಳಲ್ಲಿ ಯುವಕರು ಪಾಶ್ಚಿಮಾತ್ಯ ಸಂಸ್ಕೃತಿಗೆ ಮಾರು ಹೋಗುತ್ತಿರುವ ಹಿನ್ನೆಲೆಯಲ್ಲಿ ಗ್ರಾಮೀಣ ಸೊಗಡು ಕಣ್ಮರೆಯಾಗುತ್ತಿರುವ ಜತೆಗೆ ಯುವ ಜನಾಂಗದಲ್ಲೂ ಸಂಸ್ಕೃತಿ, ಆಚಾರ, ವಿಚಾರ, ನಡೆ, ನುಡಿ ಇಲ್ಲದಂತಾಗಿದ್ದು ಬಾಲ್ಯದಲ್ಲೇ ಇವುಗಳನ್ನು ಮೈಗೂಡಿಸಿಕೊಂಡು ಸನ್ಮಾರ್ಗದತ್ತ ಹೆಜ್ಜೆ ಹಿಡಬೇಕೆಂದರು.

ಪ್ಯಾರಾಮೆಡಿಕಲ್ ಕಾಲೇಜಿನಲ್ಲಿ ವ್ಯಾಸಂಗ ಮಾಡುತ್ತಿರುವ ಸುಮಾರು 180 ಮಂದಿ ವಿದ್ಯಾರ್ಥಿಗಳಿಗೆ ಕನ್ನಡ ಸಾಹಿತ್ಯ ಪರಿಷತ್ ಸದಸ್ಯತ್ವ ಪಡೆಯಲು ವಯಕ್ತಿಕವಾಗಿ ಧನ ಸಹಾಯ ನೀಡುವುದರ ಜತೆಗೆ ಪ್ರತಿಯೊಬ್ಬ ಕನ್ನಡಿಗರು ಪರಿಷತ್‌ನ ಸದಸ್ಯತ್ವ ಪಡೆದುಕೊಳ್ಳುವಂತೆ ಮನವಿ ಮಾಡಿದರು.



ಕಸಾಪ ಜಿಲ್ಲಾಧ್ಯಕ್ಷ ಸಿ.ಕೆ. ರವಿಕುಮಾರ್ ಚಾಮಲಾಪುರ ಮಾತನಾಡಿ ಕನ್ನಡ ಸಾಹಿತ್ಯ ಪರಿಷತ್‌ಗೆ ಶತಮಾನ ದಾಟಿದ್ದರೂ ಅದರ ಪ್ರಸ್ತುತತೆ ಜೀವಂತವಾಗಿದ್ದು ಸಾಹಿತ್ಯ ಮತ್ತು ಸಂಸ್ಕೃತಿಗೆ ಸಂಬಂಧಿಸಿದಂತೆ ಬಹು ಎತ್ತರಕ್ಕೆ ಬೆಳೆದಿರುವುದಾಗಿ ಹೇಳಿದರು.

ರಾಜ್ಯಾದ್ಯಂತ 3 ಲಕ್ಷಕ್ಕೂ ಅಧಿಕ ಸದಸ್ಯತ್ವವನ್ನು ಹೊಂದಿದ್ದು ದೇಶದಲ್ಲೇ ಅತಿಹೆಚ್ಚು ಸದಸ್ಯತ್ವ ಹೊಂದಿರುವ ಹೆಗ್ಗಳಿಕೆಗೆ ಕನ್ನಡ ಸಾಹಿತ್ಯ ಪರಿಷತ್ ಹೆಸರಾಗಿದ್ದು ಜಿಲ್ಲಾ ಹಾಗೂ ತಾಲೂಕು ಕೇಂದ್ರಗಳಲ್ಲೂ ಘಟಕಗಳನ್ನು ಹೊಂದಿದ್ದು ಮುಂದಿನ ದಿನಗಳಲ್ಲಿ ಮತ್ತಷ್ಟು ಬಹು ಎತ್ತರಕ್ಕೆ ಬೆಳೆದು ಸಾಹಿತ್ಯಾಸಕ್ತರ ಅಭಿರುಚಿಯನ್ನು ಇತರರಿಗೂ ಪರಿಚಯಿಸಲಿದೆ ಎಂದರು.

**ಅಭಿನಂದನೆ :** ಕಳೆದ ಹಲವಾರು ವರ್ಷಗಳಿಂದಲೂ ವಳಗೆರೆಹಳ್ಳಿ ಗ್ರಾಮದ ಪ್ರಮೀಳಾವೀರಪ್ಪ ಪ್ರೌಢಶಾಲೆಯಲ್ಲಿ ಕನ್ನಡ ಭಾಷಾ ಶಿಕ್ಷಕಿಯಾಗಿ ಕರ್ತವ್ಯ ನಿರ್ವಹಿಸಿ ನಿವೃತ್ತಿ ಹೊಂದಿದ ವಿ.ಕೆ. ರಾಧಾ ಅವರನ್ನು ಸಂಸ್ಥೆ ವತಿಯಿಂದ ಅಭಿನಂದಿಸಿ ಗೌರವಿಸಲಾಯಿತು.

ಈ ವೇಳೆ ಜಿಲ್ಲಾ ಉಪಾಧ್ಯಕ್ಷ ಬಿ.ಎಸ್. ಬೋರೇಗೌಡ, ಸಂಘಟನಾ ಕಾರ್ಯದರ್ಶಿ ಕ್ರಾಂತಿಸಿಂಹ, ಕಸಾಪ ತಾಲೂಕು ಅಧ್ಯಕ್ಷ ವಿ.ಸಿ. ಉಮಾಶಂಕರ್, ಮಹಿಳಾ ಅಧ್ಯಕ್ಷೆ ಟಿ.ಸಿ. ವಸಂತಾ, ಪದಾಧಿಕಾರಿಗಳಾದ ಬಸವರಾಜು, ವಿ.ಎಚ್. ಶಿವಲಿಂಗಯ್ಯ, ಸಾಗರ್, ಶ್ರೀಕಂಠ, ಜಗದೀಶ್, ಕಾಲೇಜು ಪ್ರಾಂಶುಪಾಲೆ ಪಿ.ಕೆ. ನವ್ಯ ಇತರರಿದ್ದರು.

ಮುಖ ಪುಟದಿಂದ . . .

## ಪ್ರಮುಖರ ಪೈಪೋಟಿ





ಚುನಾವಣೆಯಲ್ಲಿ ಕಡಿಮೆ ಅಂತರದಿಂದ ಸೋತಿದ್ದರು. ಈ ಬಾರಿಯೂ ಕಾಂಗ್ರೆಸ್ ಟಿಕೆಟ್ ನೀಡಿರುವುದರಿಂದ, ಕಳೆದ ಬಾರಿ ಸೋಲಿನ ಅನುಕಂಪದ ಲಾಭ ಪಡ ಯುವ ಯತ್ನ ನಡೆಸಿದ್ದಾರೆ.

ಜೆಡಿಎಸ್‌ನಿಂದ ಸ್ಪರ್ಧಿಸಿರುವ ಬಿ.ಆರ್.ರಾಮಚಂದ್ರು ಮನ್‌ಮುಲ್ ಅಧ್ಯಕ್ಷರಾಗಿದ್ದಾರೆ. ಮೇಲುಕೋಟೆ ಕ್ಷೇತ್ರದವರಾಗಿರುವ ಇವರು, ಮಂಡ್ಯ ದವರೇ ಆಗಿದ್ದಾರೆ. ಆದರೆ ರಾಮಚಂದ್ರು ಗೆ ಟಿಕೆಟ್ ನೀಡಿರುವುದು ಇಲ್ಲಿನ ಶಾಸಕರು, ಮುಖಂಡರ ಬಂಡಾಯಕ್ಕೆ ಕಾರಣವಾಗಿದೆ.

ಬಿಜೆಪಿ ಅಭ್ಯರ್ಥಿ ಅಶೋಕ್ ಜಯರಾಂ, ಮಾಜಿ ಸಚಿವ ದಿವಂಗತ ಎಸ್.ಡಿ.ಜಯರಾಂ ಅವರ ಪುತ್ರರಾಗಿರುವ ಇವರು, ಮೊದಲು ಜೆಡಿಎಸ್‌ನಲ್ಲಿದ್ದರು. ಅಲ್ಲಿ ಟಿಕೆಟ್ ಸಿಗದ ಹಿನ್ನೆಲೆಯಲ್ಲಿ ಬಿಜೆಪಿ ಸೇರ್ಪಡೆಗೊಂಡು ಅಭ್ಯರ್ಥಿಯಾಗಿದ್ದಾರೆ. ಜೆಡಿಎಸ್ ಹಾಗೂ ಕಾಂಗ್ರೆಸ್‌ಗೆ ಪೈಪೋಟಿ ನೀಡುತ್ತಿದ್ದು, ತಂದೆಯ ವರ್ಚಸ್ಸು ಕೈಹಿಡಿಯಬಹುದು ಎಂಬ ನಿರೀಕ್ಷೆಯಲ್ಲಿದ್ದಾರೆ.

ಇನ್ನೂ ಪಕ್ಷೇತರ ಅಭ್ಯರ್ಥಿಯಾಗಿ ಸ್ಪರ್ಧಿಸಿರುವ ಪಿಇಟಿ ಕೆ.ಎಸ್. ವಿಜಯ್‌ಆನಂದ್, ಜೆಡಿಎಸ್ ವಿರುದ್ಧ ಬಂಡಾಯವಾಗಿ ಶಾಸಕ ಎಂ. ಶ್ರೀನಿವಾಸ್ ಅವರ ಕೃಪಾಕಟಾಕ್ಷದಿಂದ ಸ್ವಾಭಿಮಾನಿ ಅಭ್ಯರ್ಥಿಯಾಗಿ ಗುರುತಿಸಿಕೊಂಡಿದ್ದಾರೆ. ತಾತ ಕೆ.ವಿ.ಶಂಕರಗೌಡ ಹಾಗೂ ತಂದೆ ಕೆ.ಎಸ್.ಸಚ್ಚಿದಾನಂದ ಅವರ ವರ್ಚಸ್ಸಿನ ಮೂಲಕ ಅಖಾಡಕ್ಕಿಳಿದಿದ್ದಾರೆ.

ಕರ್ನಾಟಕ ಸರ್ವೋದಯ ಪಕ್ಷದ ಅಭ್ಯರ್ಥಿ ಎಸ್.ಸಿ.ಮಧುಚಂದನ್ ಕ್ಷೇತ್ರದಲ್ಲಿ ಸಂಚಲನ ಮೂಡಿಸಿದ್ದಾರೆ. ಮೊದಲು ಬಿಜೆಪಿಯಲ್ಲಿದ್ದ ಅವರು, ಕಳೆದ ಬಾರಿಯ ಟಿಕೆಟ್ ಆಕಾಂಕ್ಷಿಯಾಗಿದ್ದರು. ಆದರೆ ಟಿಕೆಟ್ ಸಿಗಲಿಲ್ಲ. ಇದರಿಂದ ಬೇಸತ್ತು ರೈತಸಂಘ ಸೇರ್ಪಡೆಗೊಂಡು ರೈತಪರ ಹೋರಾಟಗಳ ಮೂಲಕ ಗಮನ ಸೆಳೆದಿದ್ದಾರೆ.

ಎಎಪಿಯಿಂದ ವಕೀಲ ಬೂದನೂರು ಬೊಮ್ಮಯ್ಯ, ಮತ್ತೊಬ್ಬ ಪಕ್ಷೇತರ ಜೆಡಿಎಸ್ ಬಂಡಾಯ ಅಭ್ಯರ್ಥಿ ನಗರಸಭೆ ಮಾಜಿ ಸದಸ್ಯ ಎಂ.ಜೆ.ಚಿಕ್ಕಣ್ಣ ಸ್ಪರ್ಧಾ ಕಣದಲ್ಲಿದ್ದಾರೆ. ಜೆಡಿಎಸ್‌ಗೆ ಬಂಡಾಯದ ಬಿಸಿ ಜೋರಾಗಿಯೇ ತಟ್ಟುತ್ತಿದೆ. ಕ್ಷೇತ್ರದಲ್ಲಿ ಜಾತಿ ಲೆಕ್ಕಾಚಾರವೂ ಚುನಾವಣೆಯಲ್ಲಿ ಕೆಲಸ ಮಾಡಲಿದೆ.



## ಕಾಂಗ್ರೆಸ್‌ನಲ್ಲಿ ಅಭದ್ರತೆ

ನಿನ್ನೆಯಿಂದ ಸ್ಟಾರ್ಗಳ ಜೊತೆ ಪ್ರಚಾರ ಮಾಡುತ್ತಿದ್ದಾರೆ ಎಂದು ವ್ಯಂಗ್ಯವಾಡಿದರು.

ಕಾಂಗ್ರೆಸ್ ಪ್ರಣಾಳಿಕೆಯಲ್ಲಿ ಬಜರಂಗದಳ ನಿಷೇಧ ಮಾಡುವುದಾಗಿ ಹೇಳಿತ್ತು. ಈಗ ಅವರಿಗೆ ಅಭದ್ರತೆ ಕಾಡುತ್ತಿದೆ. ಅದನ್ನು ತಡೆಯಲು ಓವರ್ ರಿಯಾಕ್ಟ್ ಮಾಡುತ್ತಿದೆ. ಲಿಂಗಾಯತ ವಿಚಾರದಲ್ಲೂ ಅವರು ಅದೇ ಮಾಡಿದರು. ಈಗ ಹನುಮ ದೇವಾಲಯ ನಿರ್ಮಾಣ ಮಾಡುತ್ತೇವೆ. ಅಭಿವೃದ್ಧಿ ಮಂಡಳಿ ಮಾಡುತ್ತೇವೆ ಎಂದು ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಭರವಸೆ ನೀಡುತ್ತಿದ್ದಾರೆ. ಮೊದಲು ಡ್ಯಾಮೇಜ್ ಮಾಡುತ್ತಾರೆ. ನಂತರ ಸರಿ ಮಾಡಲು ಬೇರೆ ಏನೋ ಹೇಳುತ್ತಾರೆ ಎಂದು ಟೀಕಿಸಿದರು. ನಂತರ ವರುಣಾ ಕ್ಷೇತ್ರದ ವಿವಿಧ ಗ್ರಾಮಗಳಿಗೆ ತೆರಳಿ ಪ್ರಚಾರ, ರೋಡ್ ಶೋ ನಡೆಸಿದರು.

## ಬಿದ್ದ ಸೋಮಣ್ಣ



ತಾಲ್ಲೂಕಿನ ಸಂತೆಮರಹಳ್ಳಿಯಲ್ಲಿ ತುಂಬಿರುವ ಜನಸ್ತೋಮದ ನಡುವೆ ಅದ್ಧೂರಿಯಾಗಿ ಬಿಜೆಪಿ ಪ್ರಚಾರ ಕಾರ್ಯ ನಡೆಯಿತು. ವಾಹನ ಮೇಲೆ ನಿಂತು ಸಚಿವ ಸೋಮಣ್ಣ ಮತ್ತು ಕಿಚ್ಚ ಸುದೀಪ್ ಪ್ರಚಾರದಲ್ಲಿ ತೊಡಗಿದ್ದರು. ಹಿಂಬದಿಯಿಂದ ಬಂದ ಅಭಿಮಾನಿಯೊಬ್ಬ ಕಿಚ್ಚನನ್ನು ನೋಡಲು ವಾಹನದ ಮೇಲೆಯೇ ಹತ್ತಿ ಬರುತ್ತಾನೆ. ಈ ವೇಳೆ ಸೋಮಣ್ಣ ಅವರನ್ನು ಹಿಡಿಯುತ್ತಾನೆ. ಇದರಿಂದಾಗಿ ವ್ಯಕ್ತಿ ಮತ್ತು ಸೋಮಣ್ಣ ಆಯತಪ್ಪಿ ಬೀಳುತ್ತಾರೆ. ಆದರೆ ಅಲ್ಲೇ ಪಕ್ಕದಲ್ಲಿ ಇದ್ದ ಸುದೀಪ್ ಅವರು ಸೋಮಣ್ಣ ಅವರನ್ನು ಹಿಡಿದು ಮೇಲೆ ಎತ್ತಿದ್ದಾರೆ.

## ಚುನಾವಣೆ ಅಂದರೆ ಸ್ಪರ್ಧೆ

ಸಾಮಥ್ರ್ಯದ ಆಸ್ಪತ್ರೆ ಕಟ್ಟಿಸಿದೆ. ಆದರೆ, ಇದನ್ನು ಶಿವರಾಜ್ ಕುಮಾರ್ ಅವರು ಮರೆತಿದ್ದಾರೆ ಎಂದು ಟೀಕಿಸಿದ್ದರು. ಸೋಮಣ್ಣ ಟೀಕೆಗೆ ಶಿವರಾಜ್‌ಕುಮಾರ್ ಉತ್ತರಿಸಿದ್ದಾರೆ.

ಸುದೀಪ್ ಮತ್ತು ನಾನು ಬೇರೆ ಬೇರೆ ಪಕ್ಷಕ್ಕೆ ಪ್ರಚಾರ ಮಾಡುತ್ತಿದ್ದೇವೆ. ಹಾಗಂತ ನಾನು, ಸುದೀಪ್ ನಾಳೆಯಿಂದ ಮಾತನಾಡಿಸದೇ ಇರೋದಕ್ಕೆ ಆಗುತ್ತಾ? ನಾವಿಬ್ರೂ ಬೆಸ್ಟ್ ಫ್ರೆಂಡ್ಸ್. ಅದು ಅವರ ನಿರ್ಧಾರ. ಇದು ನನ್ನ ನಿರ್ಧಾರ ಎಂದಿದ್ದಾರೆ.

## ಹೈ ಗ್ರೀನ್‌ಸಿಗ್ನಲ್

ದೀಕ್ಷಿತ್, ನ್ಯಾ.ವಿಜಯ್‌ಕುಮಾರ್ ಅವರಿದ್ದ ಪೀಠ, ನೀಟ್ ಪರೀಕ್ಷೆಯ ಹಿನ್ನಲೆಯಲ್ಲಿ ಭಾನುವಾರ ಬೆಳಗ್ಗೆ ಒಂಬತ್ತು ಗಂಟೆಯಿಂದ 11.30ರವರೆಗೆ ರೋಡ್ ಶೋಗೆ ಅನುಮತಿ ನೀಡಿದೆ. ವಕೀಲ ಎನ್.ಪಿ. ಅಮೃತೇಶ್ ಪಿಐಎಲ್ ಅರ್ಜಿ ಸಲ್ಲಿಕೆ ಮಾಡಿದ್ದರು. ನಿಯಂತ್ರಣಕ್ಕೆ ಕೈಗೊಂಡಿರುವ ಕ್ರಮಗಳಿಗೆ ಸಂಬಂಧಿಸಿದ ದಾಖಲೆ ಸಲ್ಲಿಸಲು ರಾಜ್ಯ ಸರ್ಕಾರ, ಪೊಲೀಸ್ ಮಹಾನಿರ್ದೇಶಕರು ಮತ್ತು ಬೆಂಗಳೂರು ಪೊಲೀಸ್ ಆಯುಕ್ತರಿಗೆ ನಿರ್ದೇಶಿಸಬೇಕು ಎಂದು ಅರ್ಜಿಯಲ್ಲಿ ಕೋರಲಾಗಿತ್ತು.

## ಕಾಂಗ್ರೆಸ್ ಪ್ರಣಾಳಿಕೆಯಲ್ಲಿ ಭಜರಂಗ ದಳ ನಿಷೇಧ ಪ್ರಸ್ತಾಪ

# ಹಿಂದೂ ಸಂಘಟನೆಗಳ ಪ್ರತಿಭಟನೆ



**ಚಾಮರಾಜನಗರ :** ಕಾಂಗ್ರೆಸ್ ಪಕ್ಷವು ತನ್ನ ಚುನಾವಣಾ ಪ್ರಣಾಳಿಕೆಯಲ್ಲಿ ಭಜರಂಗದಳವನ್ನು ನಿಷೇಧಿಸುವುದಾಗಿ ತಿಳಿಸಿರುವ್ವದನ್ನು ಖಂಡಿಸಿ ವಿಶ್ವಹಿಂದೂ ಪರಿಷತ್, ಭಜರಂಗದಳ ಸೇರಿದಂತೆ ವಿವಿಧ ಹಿಂದೂ ಸಂಘಟನೆಗಳು ನಗರದಲ್ಲಿ ಪ್ರತಿಭಟನೆ ನಡೆಸಿದವು.

ನಗರದ ಶ್ರೀ ಚಾಮರಾಜೇಶ್ವರ ಸ್ವಾಮಿ ದೇವಸ್ಥಾನದ ಮುಂಭಾಗದಲ್ಲಿ ಹಿಂದೂ ಸಂಘಟನೆಯ ಕಾರ್ಯಕರ್ತರು ಸ್ಥೆರಿ ಕಾಂಗ್ರೆಸ್ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿದರು.

ಈ ವೇಳೆ ಮಾತನಾಡಿದ ಭಜರಂಗದಳದ ಕ್ಷೇತ್ರ ಸಂಚಾಲಕರಾದ ಕೇಶವ್ ಅವರು, ಸೇವೆ, ಸಂಸ್ಕಾರ, ಸುರಕ್ಷೆ ಧ್ಯೆಯವನ್ನು ಇಟ್ಟುಕೊಂಡಿರುವ ಭಜರಂಗದಳವನ್ನು ಅಧಿಕಾರಕ್ಕೆ ಬಂದರೆ ನಿಷೇಧಿಸುವುದಾಗಿ ತನ್ನ ಪ್ರಣಾಳಿಕೆಯಲ್ಲಿ ಕಾಂಗ್ರೆಸ್ ಘೋಷಿಸಿರುವುದು ತೀವ್ರ ಖಂಡನೀಯ ತಿಳಿಸಿದರು.

ಹಿಂದು ಪರವಾಗಿ ಕೆಲಸ ಮಾಡುವ ಸಂಘಟನೆಗಳನ್ನು ಹಾಗೂ ಭಜರಂಗದಳವನ್ನು ನಿಷೇಧಿಸುವುದಾಗಿ ಕಾಂಗ್ರೆಸ್ ಪಕ್ಷ ತನ್ನ ಪ್ರಣಾಳೀಕೆಯಲ್ಲಿ ತಿಳಿಸಿದೆ. ಸಮಸ್ತ ಹಿಂದೂ ಸಮಾಜ ಈ ಪ್ರಣಾಳಿಕೆಯನ್ನು ವಿರೋಧಿಸುತ್ತದೆ.

ಭಜರಂಗದಳ ಪಿಎಫ್ಐ ಮಾದರಿಯ ಯಾವುದೇ ರಾಷ್ಟ್ರ ವಿರೋಧಿ ಸಂಘವಲ್ಲ. ದೇಶಕ್ಕಾಗಿ ಪ್ರಾಣವನ್ನೇ ಕೊಡಬಲ್ಲಂತಹ ಸಂಘಟನೆ ಭಜರಂಗದಳ. ಕೊರೋನ ಸಂದರ್ಭದಲ್ಲಿ ಸಾವಿರಾರು ರೋಗಿಗಳಿಗೆ ತಮ್ಮ ಪ್ರಾಣವನ್ನು ಲೆಕ್ಕಿಸದೆ ಸೇವೆಯನ್ನು ಸಲ್ಲಿಸಿದ್ದಾರೆ. 1500 ಕ್ಕೂ ಹೆಚ್ಚು ಕೊರೋನದಿಂದ ಮೃತಪಟ್ಟ ಅನಾಥ ರೋಗಿಗಳ ಅಂತ್ಯಸಂಸ್ಕಾರ ಮಾಡಿರುತ್ತಾರೆ. ಆಹಾರ ಪೊಟ್ಟಣ ಸರಬರಾಜು ಮಾಡಿದರು. ಹಣ್ಣು ಹಂಪಲುಗಳನ್ನು ನೀಡಿದರು. ಆಸ್ಪತ್ರೆಯಲ್ಲಿ ಸಿಬ್ಬಂದಿಗಳ ಕೊರತೆ ಇದ್ದ ಸಂದರ್ಭದಲ್ಲಿ ಸಿಬ್ಬಂದಿಗಳ ಜೊತೆಯಲ್ಲಿ ನಿಂತು ಭಜರಂಗದಳ ಕಾರ್ಯಕರ್ತರು ಕಾರ್ಯ ನಿರ್ವಹಿಸಿರುತ್ತಾರೆ. ಇದು ಒಂದು ಮುಸ್ಲಿಂ ಒಲೈಕೆಯ ಪ್ರಣಾಳಿಕೆ. ಅಧಿಕಾರಕ್ಕೆ ಬಂದರೆ, ಗೋಹತ್ಯೆ ನಿಷೇಧ ಕಾಯಿದೆ, ಟಿಪ್ಪು ಜಯಂತಿ ಪುನರ್ ಆಚರಿಸುತ್ತೇವೆ ಎಂದು ಕಾಂಗ್ರೆಸ್‌ನವರು ತಮ್ಮ ಚುನಾವಣಾ ಪ್ರಣಾಳಿಕೆಯಲ್ಲಿ ಹೊರಡಿಸಿರುತ್ತಾರೆ ಕೂಡಲೇ ಪ್ರಣಾಳಿಕೆಯಲ್ಲಿ ಈ ಅಂಶವನ್ನು ತೆಗೆದುಹಾಕಬೇಕು. ಇಲ್ಲದಿದ್ದಲ್ಲಿ ರಾಜ್ಯದಾದ್ಯಂತ ಇದರ ವಿರುದ್ಧ ಹೋರಾಟ ಮಾಡಲಾಗುವುದು ಎಂದು ಕೇಶವ್ ಅವರು ತಿಳಿಸಿದರು.

ವಿಶ್ವಹಿಂದೂ ಪರಿಷತ್ ಮುಖಂಡ ರಾ. ಸತೀಶ್‌ಕುಮಾರ್ ಮಾತನಾಡಿ, ಭಜರಂಗದಳ ಶಕ್ತಿಯ ಪ್ರತೀಕ ಹನುಂತನ ಹೆಸರಿನಲ್ಲಿ ನಿಷ್ಬೇಧ ಮಾಡುವುದಾಗಿ ಕಾಂಗ್ರೆಸ್ ಪ್ರಣಾಳಿಕೆಯಲ್ಲಿ ತಿಳಿಸಿರುವುದು ತೀವ್ರವಾಗಿ ಪ್ರತಿಭಟಿಸುತ್ತದೆ. ಇವತ್ತು ದೇಶ, ಧರ್ಮ ಹೆಣ್ಣು ಮಕ್ಕಳು ಸುರಕ್ಷಿತರಾಗಿರುವುದಕ್ಕೆ ಕಾರಣ ಭಜರಂಗದಳ ಸಂಘಟನೆ. ಲವ್‌ಜಿಹಾದ್, ಗೋಹತ್ಯ ಪ್ರಕರಣ, ಮತಾಂತರ ಪ್ರಕರಣಗಳ ವಿರುದ್ಧ ತಮ್ಮ ಪ್ರಾಣದ ಹಂಗು ತೊರೆದು ಹೋರಾಡಿರುತ್ತಾರೆ. ಕಾಂಗ್ರೆಸ್ ಪಕ್ಷವು ಜಾತಿ ಜಾತಿಯ ನಡುವೆ ವಿಷ ಬೀಜವನ್ನು ಬಿತ್ತುತ್ತಿದೆ. ಮುಸಲ್ಮಾನರ ಓಲೈಕೆಗಾಗಿ ಈ ತರಹದ ಪ್ರಣಾಳಿಕೆಯನ್ನು ಬಿಡುಗಡೆ ಮಾಡಿರುತ್ತಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಪ್ರತಿಭಟನೆಯಲ್ಲಿ ಭಜರಂಗದಳದ ಮುಖಂಡರುಗಳಾದ ಹೇಮಂತ್‌ಕುಮಾರ್, ಮಧು ಮದ್ದೂರು, ಕೆ. ಶಶಿಧರ ಸೇರಿದಂತೆ ಅನೇಕ ಕಾರ್ಯಕರ್ತರು ಭಾಗವಹಿಸಿದ್ದರು.

# ಮನುಷ್ಯನಿಗೆ ಮನೋ ದೈಹಿಕ ತಿಳುವಳಿಕೆ ಅಗತ್ಯ

**ಚಾಮರಾಜನಗರ :** ಮನುಷ್ಯನಿಗೆ ಮನೋದೈಹಿಕ ತಿಳುವಳಿಕೆ ಅಗತ್ಯ ಎಂದು ಉಡುಪಿಯ ಎಸ್.ಡಿ.ಎಂಯೋಗ ಮತ್ತು ಪ್ರಕೃತಿ ಚಿಕಿತ್ಸಾ ಕೇಂದ್ರದ ಸಹ ಪ್ರಾಧ್ಯಾಪಕರಾದ ಡಾ. ಶಿವರಾಜ್ ಪಾಟೀಲ್‌ರವರು ತಿಳಿಸಿದರು.



ಶ್ರೀ ಸುತ್ತೂರು ಕ್ಷೇತ್ರದಲ್ಲಿ ಮೇ 3 ರಿಂದ 5 ರವರೆಗೆ ಫಾರ್ಮಸಿ ಮತ್ತು ಲೈಫ್ ಸೈನ್ಸ್ ವಿದ್ಯಾರ್ಥಿಗಳಿಗಾಗಿ ಆಯೋಜಿಸಿರುವ ಶಿಬಿರದಲ್ಲಿ 'ಸಾಂಪ್ರದಾಯಿಕ ಚಿಕಿತ್ಸೆಯ ಬುದ್ಧಿವಂತಿಕೆ' ಎಂಬ ವಿಷಯದ ಕುರಿತು ಮಾತನಾಡುತ್ತಾ, ಕುಟುಂಬ ಮತ್ತು ವೃತ್ತಿ ನಿರ್ವಹಣೆಯಲ್ಲಿ ಒತ್ತಡವಿರುತ್ತದೆ. ಆದರೆ ಮನೋದೈಹಿಕ ಬುದ್ಧಿವಂತಿಕೆಯಿಂದ ಆ ಒತ್ತಡವನ್ನು ನಿರ್ವಹಿಸಬಹುದು, ನಾವು ಸೇವಿಸುವ ಆಹಾರ, ಕೈಗೊಳ್ಳುವ ಚಟುವಟಿಕೆಗಳು ನಮ್ಮ ಬುದ್ಧಿವಂತಿಕೆಯನ್ನು ನಿರ್ಧರಿಸುತ್ತವೆ. ಹಾಗಾಗಿ ನಾವು ಯಾರೊಂದಿಗೂ ಹೋಲಿಕೆ ಮಾಡಿಕೊಳ್ಳದೆ, ಸ್ಪರ್ಧೆ ಮಾಡದೆ, ಸಾತ್ವಿಕಆಹಾರ ಸೇವನೆ, ಯೋಗ, ಸುಖನಿದ್ರೆ, ಉತ್ತಮ ಮನೋಭಾವ ಹಾಗೂ ಸ್ವಗೌರವದಿಂದ ನಮ್ಮ ಮನೋದೈಹಿಕ ಬುದ್ಧಿಶಕ್ತಿಯನ್ನು ಹೆಚ್ಚಿಸಿಕೊಳ್ಳಬೇಕು. ಪಕೃತಿ ನಿಯಮಕ್ಕೆ ಬದ್ಧವಾಗಿ ಬದುಕಿ ನಮ್ಮಲ್ಲಿ ಪ್ರೀತಿ, ಶಾಂತಿ, ಸಂತೋಷ, ಜ್ಞಾನ, ಸತ್ಯ, ಗುಣಗಳನ್ನು ಅಳವಡಿಸಿಕೊಳ್ಳಬೇಕೆಂದು ತಿಳಿಸಿದರು.

ಮೈಸೂರಿನ ವಿಜಯನಗರದ ನಿರ್ವಹಣೆಯ ಸಲಹೆಗಾರರಾದ ಶ್ರೀ ಹರೀಶ್‌ಕೊಡೆಂದರ್‌ರವರು 'ಜಾಗತಿಕ ವೃತ್ತಿಪರರಾಗುವುದು ಹೇಗೆ" ಎಂಬ ವಿಷಯ ಕುರಿತು ಉಪನ್ಯಾಸ ನೀಡಿ, ಇಂದು ಪ್ರಪಂಚದಲ್ಲಿ ವೃತ್ತಿ ನಿರ್ವಹಣೆಯು ತುಂಬಾ ಸವಾಲಿನಿಂದ ಕೂಡಿದ್ದು, ಉತ್ತಮ ಸೃಜನಶೀಲತೆ, ಸಂವಹನ, ಸಂಘಟನೆ ಹಾಗೂ ಒಗ್ಗಟ್ಟಿನಿಂದ ವೃತ್ತಿಯನ್ನು ನಿರ್ವಹಿಸಬೇಕು. ನಮ್ಮ ಮನೋಭಾವ, ಕೌಶಲ, ಜ್ಞಾನವನ್ನು ಅವಶ್ಯಕತೆಗೆ ತಕ್ಕಂತೆ ಅಭಿವೃದ್ಧಿ ಪಡಿಸಿಕೊಳ್ಳಬೇಕು. ಯಾವುದೇ ವೃತ್ತಿ ನಿರ್ವಹಿಸಲು ಪ್ರಾರಂಭಿಸುವ ಮೊದಲು ಆ ವೃತ್ತಿಯಲ್ಲಿಇಲ್ಲಿಯವರೆಗೆ ಏನು ಆಗಿದೆ. ಈಗ ಏನಾಗುತ್ತಿದೆ. ಮುಂದೆ ಏನಾಗಬೇಕು ಎಂಬುದರ ಅರಿವಿರಬೇಕು, ಇದುವೇ ವೃತ್ತಿ ನಿರ್ವಹಣೆಯ ಮೊದಲ ಹೆಜ್ಜೆಯಾಗಿರುತ್ತದೆ. ಭವಿಷ್ಯದ ಅವಶ್ಯಕತೆಗಳ ಬಗ್ಗೆ ಯೋಚಿಸಿ ಆ ಸವಾಲುಗಳಿಗೆ ಸಂಬಂಧಿಸಿದಂತೆ ನಾವು ಸಿದ್ಧರಾಗಬೇಕು.

ವೃತ್ತಿಜೀವನದಲ್ಲಿ ಸಾಮರ್ಥ್ಯ, ಚುರುಕುತನ, ಹೊಂದಿಕೊಳ್ಳುವಿಕೆ, ಸ್ವೀಕಾರ, ಅರಿವು, ಪ್ರಶಂಸೆಗಳು ಮುಖ್ಯಪಾತ್ರವಹಿಸುತ್ತವೆಎಂದು ನುಡಿದರು. ಶಿಬಿರವು ಪರಮಪೂಜ್ಯಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರ ದಿವ್ಯಸಾನ್ನಿಧ್ಯದಲ್ಲಿ ನಡೆಯುತ್ತಿದೆ.

ಶಿಬಿರದಲ್ಲಿ ಬೆಳಗ್ಗೆ ಸಾಮೂಹಿಕ ಪ್ರಾರ್ಥನೆ, ಯೋಗಾಭ್ಯಾಸಧ್ಯಾನ ಹಾಗೂ ಶ್ರೀಕ್ಷೇತ್ರ ದರ್ಶನ, ಸಂಜೆ ದೇಸಿ ಆಟಗಳ ವ್ಯವಸ್ಥೆ ಮಾಡಲಾಗಿತ್ತು. ಸಂಜೆ ಪ್ರಾರ್ಥನೆಯ ನಂತರ: ಶಿಬಿರಾರ್ಥಿಗಳಿಂದ ಸಾಂಸ್ಕೃತಿಕಕಾರ್ಯಕ್ರಮ ನಡೆಸಲಾಯಿತು. ಶಿಬಿರದಲ್ಲಿ 130 ವಿದ್ಯಾರ್ಥಿಗಳು ಪಾಲ್ಗೊಂಡಿದ್ದಾರೆ.

ಶ್ರೀ ಸುತ್ತೂರು ಕ್ಷೇತ್ರದಲ್ಲಿ, ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠ, ಶ್ರೀ ಶಿವರಾತ್ರೀಶ್ವರ ಧಾರ್ಮಿಕದತ್ತಿ ಹಾಗೂ ಜೆಎಸ್‌ಎಸ್ ಮಹಾವಿದ್ಯಾಪೀಠದ ವತಿಯಿಂದ ಫಾರ್ಮಸಿ ಮತ್ತು ಲೈಫ್ ಸೈನ್ಸ್ ವಿದ್ಯಾರ್ಥಿಗಳಿಗೆ ಆಯೋಜಿಸಿರುವ ಶಿಬಿರದಲ್ಲಿ ಉಡುಪಿಯ ಎಸ್.ಡಿ.ಎಂಯೋಗ ಮತ್ತು ಪ್ರಕೃತಿ ಚಿಕಿತ್ಸಾಕೇಂದ್ರದ ಸಹ ಪ್ರಾಧ್ಯಾಪಕರಾದ ಡಾ. ಶಿವರಾಜ್ ಪಾಟೀಲ್‌ರವರು ಉಪನ್ಯಾಸ ನೀಡಿದರು. ಕಾರ್ಯಕ್ರಮದಲ್ಲಿ ಶಿಬಿರಾರ್ಥಿಗಳು ಹಾಜರಿದ್ದರು.

# ಬಿ.ಆರ್.ರಾಮಚಂದ್ರ ಗೆಲ್ಲಿಸಿ : ಎಚ್‌ಡಿಕೆ ಮನವಿ



**ಮಂಡ್ಯ :** ಮಂಡ್ಯ ಕ್ಷೇತ್ರದ ಜೆಡಿಎಸ್ ಟಿಕೆಟ್ ಹಣಕ್ಕೆ ಮಾರಾಟವಾಗಿದೆ ಎಂದು ಆರೋಪಿಸಿರುವ ಶಾಸಕ ಎಂ.ಶ್ರೀನಿವಾಸ್‌ಗೆ ಪಕ್ಷ ನಾಲ್ಕು ಬಾರಿ ಟಿಕೆಟ್ ನೀಡಿದೆ. ಆಗೆಲ್ಲಾ ಶ್ರೀನಿವಾಸ್ ಅವರು ಎಷ್ಟು ಹಣ ಕೊಟ್ಟಿದ್ದರು ಎನ್ನುವುದನ್ನು ಬಹಿರಂಗಪಡಿಸಲಿ ಎಂದು ಮಾಜಿ ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ ಸವಾಲು ಹಾಕಿದರು.

ನಗರದ ಸರ್ಕಾರಿ ಬಾಲಕಿಯರ ಪದವಿಪೂರ್ವ ಕಾಲೇಜು (ಕಲ್ಲು ಕಟ್ಟಡ) ಆವರಣದಲ್ಲಿ ಜೆಡಿಎಸ್ ಅಭ್ಯರ್ಥಿ ಬಿ.ಆರ್. ರಾಮಚಂದ್ರು ಪರ ಆಯೋಜಿಸಿದ್ದ ಬೃಹತ್

ಸಾರ್ವಜನಿಕ ಸಭೆಯನ್ನುದ್ದೇಶಿಸಿ ಮಾತನಾಡಿದರು.

ಶ್ರೀನಿವಾಸ್ ಅವರ ಆರೋಗ್ಯದ ಹಿತದೃಷ್ಟಿಯಿಂದ ಈ ಬಾರಿ ಬೇರೆಯವರಿಗೆ ಟಿಕೆಟ್ ಕೊಡೋಣ.ಹೊಸ ಮುಖಕ್ಕೆ ಟಿಕೆಟ್ ನೀಡುವಂತೆ ಕಾರ್ಯಕರ್ತರೂ ಹೇಳುತ್ತಿದ್ದಾರೆ.ಶ್ರೀನಿವಾಸ್ ಅವರನ್ನು ಗೌರವದಿಂದ ನಡೆಸಿಕೊಳ್ಳುವ ಸಲುವಾಗಿ ಮೊದಲ ಪಟ್ಟಿಯಲ್ಲಿ ಹೆಸರು ಘೋಷಿಸಿದ್ದೆ.ಆನಂತರದಲ್ಲಿ ನಿಮ್ಮ ಕೈಗೇ ಬಿ–ಫಾರಂ ಕೊಡುತ್ತೇನೆ.ನೀವು ಸೂಚಿಸುವ ಅಭ್ಯರ್ಥಿಗೇ ಟಿಕೆಟ್ ಕೊಡುವುದಾಗಿಯೂ ಹೇಳಿದ್ದೆ. ಆದರೆ,ಅವರು ತಮಗೆ ಮತ್ತು ತಮ್ಮ ಅಳಿಯನಿಗಷ್ಟೇ ಸೀಮಿತವಾಗಿ ಟಿಕೆಟ್ ಕೇಳಿದ್ದರಿಂದ ಬಿ.ಆರ್.ರಾಮಚಂದ್ರುಗೆ ಟಿಕೆಟ್ ನೀಡಲಾಯಿತು ಎಂದರು.

ಪಕ್ಷದಿಂದ ಹೊರಹೋಗಿ ಪಕ್ಷೇತರ ಅಭ್ಯರ್ಥಿಯಾಗಿರುವ ವಿಜಯಾನಂದಗೆ ಒಂದು ವರ್ಷದ ಹಿಂದೆಯೇ ಸಂಘಟನೆಯಲ್ಲಿ ತೊಡಗುವಂತೆ ಸೂಚಿಸಿದ್ದೆ. ಆದರೆ, ಆತ ಈಗಲೇ ನನ್ನ ಹೆಸರು ಘೋಷಿಸುವುದು ಬೇಡ.ಶ್ರೀನಿವಾಸ್ ಅವರ ಮನವೊಲಿಸುತ್ತೇನೆ. ಚುನಾವಣೆ ಸಮೀಪಿಸಿದಾಗ ನನ್ನ ಹೆಸರು ಘೋಷಿಸುವಂತೆ ಕೇಳಿಕೊಂಡಿದ್ದರು.ಅದಕ್ಕೇ ನಾನೂ ಸುಮ್ಮನಾಗಿದ್ದೆ.ಈಗ ಜೆಡಿಎಸ್ ಟಿಕೆಟ್ ಮಾರಾಟವಾಗಿದೆ ಎಂದು ಹೇಳುವುದರಲ್ಲಿ ಅರ್ಥವಿದೆಯೇ ಎಂದು ಪ್ರಶ್ನಿಸಿದರು.

ಜೆಡಿಎಸ್ ಪಕ್ಷವನ್ನು ಸೋಲಿಸಲು ಕೇಂದ್ರದ ಬಿಜೆಪಿ ಘಟಾನುಘಟಿ ನಾಯಕರೆಲ್ಲಾ ಮಂಡ್ಯಕ್ಕೆ ಬಂದು ಹೋಗುತ್ತಿದ್ದಾರೆ. ರೈತರು ಆತ್ಮ ಹತ್ಯೆ ಮಾಡಿಕೊಂಡಾಗ, ಭಾರೀ ಮಳೆ ಬಂದು ಹಾನಿಯಾದಾಗ ಇವರೆಲ್ಲಾ ಎಲ್ಲಿದ್ದರು.ಒಬ್ಬ ರೈತ ಕುಟುಂಬದ ಕಣ್ಣೀರು ಒರೆಸಲು ಬರಲಿಲ್ಲ. ಈಗ ಚುನಾವಣೆ ಬಂದಿದೆ ಎಂಬ ಕಾರಣಕ್ಕೆ ಒಬ್ಬರಾದ ಮೇಲೊಬ್ಬರಂತೆ ಇಲ್ಲಿಗೆ ದಾಳಿ ಇಡುತ್ತಿದ್ದಾರೆ. ಅವರಿಂದ ಜಿಲ್ಲೆಗೆ ಯಾವುದೇ ಉಪಯೋಗವಿಲ್ಲ.ಆತ್ಮಹತ್ಯೆಗೆ ಶರಣಾದ ಕುಟುಂಬದ ಕಣ್ಣೀರು ಒರೆಸಿದ್ದು ನಾವು.ಅವರ ಬದುಕಿಗೆ ರಕ್ಷಣೆ ದೊರಕಿಸಿದ್ದು ನಾವು.ನಮಗೆ ಮಾತ್ರ ಮತ ಕೇಳುವ ನೈತಿಕತೆ ಇದೆ. ಬಿಜೆಪಿಯವರಿಗೆ ಜಿಲ್ಲೆಯ ಜನರ ಮತ ಕೇಳುವ ನೈತಿಕತೆ ಇಲ್ಲ ಎಂದು ದೂರಿದರು.

ಕಳೆದ ಚುನಾವಣೆಯಲ್ಲಿ ಜಿಲ್ಲೆಯ ಏಳಕ್ಕೆ ಏಳು ಸ್ಥಾನಗಳಲ್ಲೂ ಜೆಡಿಎಸ್ ಪಕ್ಷವನ್ನು ಗೆಲ್ಲಿಸಿದ್ದೀರಿ.ಈಗಲೂ ಅದೇ ಮಾದರಿಯಲ್ಲಿ ಅಭ್ಯರ್ಥಿಗಳನ್ನು ಗೆಲ್ಲಿಸಿ ನನ್ನನ್ನು ಮುಖ್ಯಮಂತ್ರಿ ಮಾಡಿ. ನಾನು ಜಿಲ್ಲೆಯ ಜನರ ಋಣ ತೀರಿಸುವ ಕೆಲಸ ಮಾಡುತ್ತೇನೆ. ಕಳೆದ ಸಮ್ಮಿಶ್ರ ಸರ್ಕಾರದ ಅವಧಿಯಲ್ಲೇ ಜಿಲ್ಲೆಯ ಅಭಿವೃದ್ಧಿಗೆ 8 ಸಾವಿರ ಕೋಟಿ ರು. ಹಣ ಘೋಷಿಸಿದ್ದೆ. ಆದರೆ, ಉದ್ದೇಶಿತ ಯೋಜನೆಗಳು ಜಾರಿಯಾಗುವ ಮುನ್ನವೇ ಸರ್ಕಾರವನ್ನು ಉರುಳಿಸಿದರು.

ನಂತರ ಬಂದ ಬಿಜೆಪಿ ಸರ್ಕಾರ ಆ ಅನುದಾನವನ್ನೆಲ್ಲಾ ಹಿಂಪಡೆದುಕೊಂಡು ಜಿಲ್ಲೆಯ ಅಭಿವೃದ್ಧಿಗೆ ಹಿನ್ನಡೆ ಉಂಟುಮಾಡಿತು ಎಂದು ದೂರಿದರು. ಕಾಂಗ್ರೆಸ್ ಹಾಗೂ ಬಿಜೆಪಿ ಕುತಂತ್ರಕ್ಕೆ ಜಿಲ್ಲೆಯ ಜನರು ಮಾರುವಾಗದೆ ಮಂಡ್ಯ ಜಿಲ್ಲೆಯ ಜನರು ಪ್ರೀತಿಗೆ ಬೆಲೆ ಕೊಡುವವರು ಆದ್ದರಿಂದ ಜಿಲ್ಲೆಯ ಅಭಿವೃದ್ಧಿಗೆ ಜೆಡಿಎಸ್ ಪಕ್ಷ ಬೆಂಬಲಿಸಿ ಎಂದು ಹೇಳಿದರು.

ರೈತರ ಬದುಕು,ಯುವಕರಿಗೆ ಉದ್ಯೋಗ,ತಾಯಂದಿರ ನೆಮ್ಮದಿ ಬದುಕಿಗೆ ಜೆಡಿಎಸ್ ಪಕ್ಷವನ್ನು ಅಧಿಕಾರಕ್ಕೆ ತನ್ನಿ.ನಾನು ಎರಡು ಬಾರಿ ಮುಖ್ಯಮಂತ್ರಿಯಾದಾಗ ನಾಡಿನ ಅಭಿವೃದ್ಧಿಗೆ ಕೆಲಸ ಮಾಡಿದ್ದೇನೆ, ಜನತೆಯ ಹಣ ಲೂಟಿ ಮಾಡಿಲ್ಲ ಎಂದು ಹೇಳಿದರು. ರಾಜ್ಯದಲ್ಲಿ ಕನ್ನಡಿಗರ ಸರ್ಕಾರ ತರಲು ಹೊರಟಿದ್ದೇನೆ. ಸಾಮಾನ್ಯ ಹಳ್ಳಿಯ ರೈತನ ಸೂಚನೆ ಮೇರೆಗೆ ಸರ್ಕಾರ ನಡೆಯಬೇಕು ಎಂದರು.

ಮಂಡ್ಯ ಜಿಲ್ಲೆಗೆ ಎರಡು ರಾಷ್ಟ್ರೀಯ ಪಕ್ಷಗಳ ಮುಖಂಡರು ದಾಳಿ ಹಾಕುತ್ತಿದ್ದಾರೆ.ದೇವೇಗೌಡರ ಕೊನೆ ಉಸಿರು ಇರುವವರೆಗೂ ಮಂಡ್ಯ ಜಿಲ್ಲೆಯ ಜನತೆಯನ್ನು ಮರೆಯುವುದಿಲ್ಲ. ಜಿಲ್ಲೆಯ ಜನ ಜೆಡಿಎಸ್ ಗೆ ಕೊಟ್ಟ ಶಕ್ತಿಯನ್ನು ಇಂದಿಗೂ ಮರೆಯುವುದಿಲ್ಲ ಎಂದರು.

ಸಭೆಯಲ್ಲಿ ಶಾಸಕ ಸಿ.ಎಸ್.ಪುಟ್ಟರಾಜು,ನಗರಸಭೆ ಅಧ್ಯಕ್ಷ ಹೆಚ್.ಎಸ್.ಮಂಜು, ವಿಧಾನಪರಿಷತ್ ಮಾಜಿ ಸದಸ್ಯ ಕೆ.ಟಿ.ಶ್ರೀಕಂಠೇಗೌಡ, ಜೆಡಿಎಸ್ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಜಫ್ರುಲ್ಲಾಖಾನ್, ಜೆಡಿಎಸ್ ಜಿಲ್ಲಾಧ್ಯಕ್ಷ ಡಿ. ರಮೇಶ್,ನಗರ ಘಟಕದ ಅಧ್ಯಕ್ಷ ಎಸ್.ಪಿ.ಗೌರೀಶ್,ಜೆಡಿಎಸ್ ಅಭ್ಯರ್ಥಿ ಬಿ.ಆರ್.ರಾಮಚಂದ್ರ, ಮೈಷುಗರ್

ಮಾಜಿ ಅಧ್ಯಕ್ಷ ಸಿದ್ದರಾಮೇಗೌಡ, ನಗರಸಭೆ ಮಾಜಿ ಅಧ್ಯಕ್ಷೆ ಅಂಬುಜಮ್ಮ,ಪರಿಶಿಷ್ಟ ಜಾತಿ ಜಿಲ್ಲಾಧ್ಯಕ್ಷ ಜಯರಾಮ್, ಸೇರಿದಂತೆ ಇತರರಿದ್ದರು.

# ಮತದಾನ ಮಹತ್ವದ ಅರಿವು ಕಾರ್ಯಕ್ರಮ



**ಚಾಮರಾಜನಗರ :** ಮತದಾನ ಪ್ರತಿಯೊಬ್ಬರ ಹಕ್ಕು ಚುನಾವಣಾ ಮುಖಾಂತರ ಉತ್ತಮ ವ್ಯಕ್ತಿಯನ್ನು ವಿಧಾನಸಭೆಗೆ ಕಳಿಸುವ ಉದ್ದೇಶವಾಗಿದೆ. ನಮಗೆ ಸಂವಿಧಾನ ಬಂದ ದಿನ ದಿಂದ ನಮ್ಮ ದೇಶದ ಪ್ರಜೆಗಳಿಗೆ ಮತದಾನದ ಹಕ್ಕು ದೊರೆತಿದೆ ಎಂದು ಚಾಮರಾಜನಗರ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಉಮ್ಮತ್ತೂರು ಇಂದುಶೇಖರ್ ತಿಳಿಸಿದರು.

ಜೆ.ಎಸ್.ಎಸ್ ಮಹಿಳಾ ಪದವಿ ಕಾಲೇಜು, ಸಾಧನ ಸಂಸ್ಥೆ, ಚಾಮರಾಜನಗರ, ಚುನಾವಣಾ ಸಾಕ್ಷರತಾ ಕಬ್ಲ್ ಮತ್ತು ರಾಜ್ಯಶಾಸ್ತ್ರ ವಿಭಾಗದ ಕೌಟಿಲ್ಯ ಕ್ಲಬ್ ಇವರ ಸಹಯೋಗದಲ್ಲಿ ನಗರದ ಜೆ.ಎಸ್.ಎಸ್. ಮಹಿಳಾ ಕಾಲೇಜು ಸಭಾಂಗಣದಲ್ಲಿ ಗುರುವಾರ ಮತದಾನ ಮಹತ್ವದ ಅರಿವು ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಮಾತನಾಡಿದರು. ಭ್ರಷ್ಟಚಾರದ ವಿರುದ್ದ ಹೋರಾಡುವ ಶಕ್ತಿ ಯುವಜನಾಂಗಕ್ಕೆ ಇರಬೇಕು, ಸ್ವಜನ ಪಕ್ಷ ಪಾತ ಮಾಡುವವರಿಗೆ, ಸ್ವಜಾತಿ ಪ್ರೇಮ ಉಳ್ಳವರಿಗೆ ಮತ ನೀಡಿದರೆ ಪ್ರಜಾಪ್ರಭುತ್ವಕ್ಕೆ ಮಾರಕವಾಗಲಿದೆ. ಈ ನಿಟ್ಟಿನಲ್ಲಿ 18 ವರ್ಷ ತುಂಬಿದ ಪ್ರತಿಯೊಬ್ಬರು, ಮೂಲಭೂತ ಸೌಕರ್ಯಗಳನ್ನು ಕಲ್ಪಿಸಿ ಕೊಡುವ, ಸಾಮಾಜಿಕ ಸಮಸ್ಯೆಗಳನ್ನು ನಿವಾರಿಸ ಬಲ್ಲ ಯೋಗ್ಯ ಅಭ್ಯರ್ಥಿಗಳನ್ನು ಆರಿಸಬೇಕಿದೆ. ಎಂದರು.

ಸಾಧನ ಸಂಸ್ಥೆಯ ನಿರ್ದೇಶಕ ಟಿ.ಜೆ. ಸುರೇಶ್ ಮಾತನಾಡಿ ಮತದಾನದ ದಿನ ಪ್ರತಿಯೊಬ್ಬರು ತಪ್ಪದೆ ತಮ್ಮ ಹಕ್ಕನ್ನು ಚಲಾಯಿಸಬೆಕು. ಮತದಾನದ ಮಹತ್ವದ ಬಗ್ಗೆ ಅರಿವು ಮೂಡಿಸುವ ಕಾರ್ಯಕ್ರಮ ಗಳನ್ನು ಆಯೋಜಿಸಿ ಜನರಿಗೆ ತಮ್ಮ ಹಕ್ಕಿನ ಬಗ್ಗೆ ತಿಳಿವಳಿಕೆ ಮೂಡಿಸಲಾಗುತ್ತಿದೆ. ಮತದಾರರು ಯಾವುದೇ ಆಮೀಷಕ್ಕೆ ಒಳಗಾಗದೇ ಮತದಾನ ಮಾಡಬೇಕು. ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಮತದಾನದ ಬಗ್ಗೆ ರಂಗೋಲಿ ಮತ್ತು ಚಿತ್ರಕಲೆ ಸ್ಪರ್ಧೆಯಲ್ಲಿ ಭಾಗವಹಿಸಿದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಣೆ ಮಾಡಿ ಪ್ರತಿಜ್ಞಾ ವಿಧಿ ಬೋಧಿಸಲಾಯಿತು. ವೇದಿಕೆಯಲ್ಲಿ ಪ್ರಭಾರ ಪ್ರಾಂಶುಪಾಲ ಮಲ್ಲಿಕಾರ್ಜುನ ಸ್ವಾಮಿ, ಉಪನ್ಯಾಸಕರಾದ ಕೌಟಿಲ್ಯ ಕ್ಲಬ್ ಮುಖ್ಯಸ್ಥರು ಡಾ.ಸುಷ್ಮಾ ಇದ್ದರು. ಈ ಸಂದರ್ಭದಲ್ಲಿ ಉಪನ್ಯಾಸಕರಾದ ಕೆ.ಹೆಚ್. ಮಹೇಶ, ತ್ರಿವೇಣಿ, ರಾಜೇಶ್ವರಿ, ನಿರ್ಮಾಲ, ರೂಪ, ವರಪ್ರಸಾದ್ ಹಾಗೂ ವಿದ್ಯಾರ್ಥಿನಿಯರು ಹಾಜರಿದ್ದರು

# ಬಿಂದಿಗೆ ಹಿಡಿದು ವಾಟಾಳ್ ಮತಯಾಚನೆ



**ಚಾಮರಾಜನಗರ :** ವಾಟಾಳ್ ನಾಗಾರಾಜ್ ಅಂದರೆವಿಶಿಷ್ಠ ಅವರ ಕಾರ್ಯವೈಖರಿಯು ಸಹ ವಿಭಿನ್ನ.ಅದರಂತೆ ಇಂದು ಸಹ ನಗರದ ಭುವನೇಸ್ವರಿ ವೃತ್ತದ ಬಳಿ ಇರುವ ಭುವನೇಶ್ವರಿ ನಾಮಫಲಕದ ಬಳಿ ಕಾವೇರಿ ನೀರು ತುಂಬಿದ ಬಿಂದಿಗೆ ಹೊತ್ತುಕೊಂಡು ಕನ್ನಡ ಚಳವಳಿ ವಾಟಾಳ್ ಪಕ್ಷದ ಅಭ್ಯರ್ಥಿ ವಾಟಾಳ್ ನಾಗರಾಜ್ ವಿಭಿನ್ನವಾಗಿ ಮತಯಾಚನೆ ಮಾಡಿದರು.

ಇದೇ ನೇಳೆ ಸುದ್ಧಿಗಾರರೊಂದಿಗೆ ಮಾತನಾಡಿದ ಅವರು, ಚಾಮರಾಜನಗರದ ಜನತೆ ಕುಡಿಯುವ ನೀರಿಗಾಗಿ ಪರದಾಡುತ್ತಿರುವಾಗ ಕಾವೇರಿ ನೀರು ತಂದವನು ನಾನು. ಅದಕ್ಕಾಗಿ ಪಟ್ಟ ಪರಿಶ್ರಮ ಭಗೀರಥ ಪ್ರಯತ್ನವೇ ಅಯಿತು.

ಜಿಲ್ಲಾ ಕೇಂದ್ರ ಮಾಡುವಾಗ ಅನೇಕ ಅಡೆತಡೆಗಳನ್ನು ಎದುರಿಸಬೇಕಾಯಿತು. ಆದರೂ ಛಲ ಬಿಡದೆ ಚಾಮರಾಜನಗರ ಜಿಲ್ಲೆ ಮಾಡಿಸಿದೆ. ಜಿಲ್ಲಾ ಕೇಂದ್ರದಲ್ಲಿ ಸುಸಜ್ಜಿತ ಕ್ರೀಡಾಂಗಣ ಮಂಜೂರು ಮಾಡಿಸಿದೆ.ನೂತನ ಬಸ್ ನಿಲ್ದಾಣ ನಿರ್ಮಾಣ ಮಾಡಿಸಿದೆ ಇಟಲ್ಲಾ ಅಭಿವೃದ್ಧಿ ಕಾರ್ಯಗಳು ನನ್ನ ಅವಧಿಯಲ್ಲಿಯೇ ಆದರೂ ಸಹ ಜನತೆ ನನ್ನನ್ನು ಆಯ್ಕೆ ಮಾಡಲಿಲ್ಲ.ಈಗಲಾದರೂ ಸಹ ಚಾಮರಾಜನಗರ ಜನತೆ ನನಗೆ ಪ್ರಾಮಾಣಿಕವಾಗಿ ಮತ ಹಾಕುವ ಮೂಲಕ ನನ್ನನ್ನು ಆಯ್ಕೆ ಮಾಡಲಿ ಎಂದು ಮನವಿ ಮನವಿ ಮಾಡಿದರು.

ನಂತರ ತೆರೆದ ವಾಹನದಲ್ಲಿ ಹಾಗೂ ನಗರದ ಪ್ರಮುಖ ಬೀದಿಗಳಲ್ಲಿ ಆಟೋಗಳ ಮೆರವಣಿಗೆ ನಡೆಸಿ ಮತ ಯಾಚನೆ ನಡೆಸಿದರು.



ಪಿರಿಯಾಪಟ್ಟಣದ ಜೆ.ಡಿ.ಎಸ್ ಅಭ್ಯರ್ಥಿ ಕೆ.ಮಹದೇವ್ ಪರ ಜೆಡಿಎಸ್ ಮುಖಂಡ ಸುರೇಶ್ ಹಾಗೂ ಮಾಜಿ ಜಿ.ಪಂ.ಸದಸ್ಯ ಮಂಜುನಾಥ್ ನೇತೃತ್ವದಲ್ಲಿ ಕಿತ್ತೂರು ಹಾಗೂ ಸುತ್ತಮುತ್ತಲಿನ ಗ್ರಾಮಗಳಲ್ಲಿ ಶುಕ್ರವಾರ ಮತಯಾಚನೆ ಮಾಡಿದರು. ಈ ಸಂದರ್ಭದಲ್ಲಿ ಮಾಜಿ ಶಾಸಕ ದಿ.ಕಾಳಮರೀಗೌಡರ ಮೊಮ್ಮಗ ಗಗನ್, ವಕೀಲ ಕೆ.ಡಿ.ಸಂದೀಪ್, ಕೊರಮ ಸಮಾಜದ ತಾಲ್ಲೂಕು ಅಧ್ಯಕ್ಷ ಭೂತನಹಳ್ಳಿ ನವೀನ್ ಮತ್ತಿತರ ಪ್ರಮುಖರು ಪಾಲ್ಗೊಂಡಿದ್ದರು

### ರಾಣಾ ಬ್ಯಾಟಿಂಗ್, ರಿಂಕು ಮ್ಯಾಜಿಕ್ ಫೀಲ್ಡಿಂಗ್

# ಕೆಕೆಆರ್‌ಗೆ 5 ರನ್‌ಗಳ ರೋಚಕ ಜಯ



**ಹೈದರಾಬಾದ್ :** ರಿಂಕು ಸಿಂಗ್, ನಾಯಕ ನಿತೀಶ್ ರಾಣಾ ಸಂಘಟಿತ ಬ್ಯಾಟಿಂಗ್ ಹಾಗೂ ಸಂಘಟಿತ ಬೌಲಿಂಗ್ ದಾಳಿ ನೆರವಿನಿಂದ ಕೋಲ್ಕತ್ತಾ ನೈಟ್‌ರೈಡರ್ಸ್ ತಂಡವು ಸನ್ ರೈಸರ್ಸ್ ಹೈದರಾಬಾದ್ ವಿರುದ್ಧ 5 ರನ್‌ಗಳ ರೋಚಕ ಜಯ ಸಾಧಿಸಿತು.

ಇಲ್ಲಿನ ರಾಜೀವ್‌ಗಾಂಧಿ ಕ್ರೀಡಾಂಗಣದಲ್ಲಿ ನಡೆದ ಪಂದ್ಯದಲ್ಲಿ ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಿದ ಕೋಲ್ಕತ್ತಾ ನೈಟ್‌ರೈಡರ್ಸ್ ತಂಡ 20 ಓವರ್‌ಗಳಲ್ಲಿ 9 ವಿಕೆಟ್ ನಷ್ಟಕ್ಕೆ 171 ರನ್ ಗಳಿಸಿತ್ತು. ಗೆಲುವಿಗೆ 172 ರನ್ ಗುರಿ ಪಡೆದ ಸನ್ ರೈಸರ್ಸ್ ಹೈದರಾಬಾದ್ ನಿಗದಿತ 20 ಓವರ್‌ಗಳಲ್ಲಿ 8 ವಿಕೆಟ್ ನಷ್ಟಕ್ಕೆ 166 ರನ್ ಗಳಿಸಿ ಸೋಲೊಪ್ಪಿಕೊಂಡಿತು.

ಚೇಸಿಂಗ್ ಆರಂಭಿಸಿದ ಹೈದರಾಬಾದ್ ತಂಡ ಮೊದಲ 10 ಓವರ್‌ಗಳಲ್ಲಿ 75 ರನ್ ಗಳಿಸಿತ್ತು. ಇನ್ನೂ 60 ಎಸೆತಗಳಲ್ಲಿ 97 ರನ್‌ಗಳ ಅಗತ್ಯವಿತ್ತು. ರನ್ ಗಳಿಕೆಯಲ್ಲಿ ಉತ್ತಮ ಸ್ಥಿತಿಯಲ್ಲಿದ್ದರೂ ಪ್ರಮುಖ 4 ವಿಕೆಟ್ ಕಳೆದುಕೊಂಡು ಸಂಕಷ್ಟಕ್ಕೆ ಸಿಲುಕಿತ್ತು. ಆದರೆ ನಾಯಕ ಏಡನ್ ಮಾರ್ಕ್ರಮ್ ಹಾಗೂ ಹೆನ್ರಿಕ್ ಕ್ಲಾಸೆನ್ ಜವಾಬ್ದಾರಿಯುತ ಬ್ಯಾಟಿಂಗ್ ನೆರವಿನಿಂದ ತಂಡಕ್ಕೆ ಮತ್ತಷ್ಟು ರನ್ ಸೇರ್ಪಡೆಯಾಯಿತು. ತಂಡದಲ್ಲಿ ಗೆಲುವಿನ ಆಸೆಯೂ ಚಿಗುರಿತ್ತು.

11 ರಿಂದ 19ನೇ ಓವರ್‌ವರೆಗೆ ಕ್ರಮವಾಗಿ 15, 12, 12, 10, 10, 4, 8, 5, 12 ರನ್ ಸೇರ್ಪಡೆಯಾಯಿತು. ಕೊನೆಯ ಓವರ್‌ನಲ್ಲಿ 9 ರನ್ ಬೇಕಿದ್ದಾಗ ವರುಣ್ ಚಕ್ರವರ್ತಿ ಬೌಲಿಂಗ್‌ನಲ್ಲಿದ್ದರು. ಮೊದಲ ಎರಡು ಎಸೆತಗಳಲ್ಲಿ ತಲಾ ಒಂದೊಂದು ರನ್ ಸೇರ್ಪಡೆಯಾಯಿತು. ಆದ್ರೆ ಕ್ರೀಸ್‌ನಲ್ಲಿದ್ದ ಅಬ್ದುಲ್ ಸಮದ್ 3ನೇ ಎಸೆತವನ್ನು ಸಿಕ್ಸ್ ಸಿಡಿಸಲು ಯತ್ನಿಸಿ ಬೌಂಡರಿ ಲೈನ್ ಕ್ಯಾಚ್ ನೀಡಿ ನಿರಾಸೆ ಮೂಡಿಸಿದರು. ಬಳಿಕ 3 ಎಸೆತದಲ್ಲಿ ಒಂದೊಂದು ರನ್ ಗಳಷ್ಟೇ ಗಳಿಸಲಾಗಿ ತಂಡ ಸೋಲೊಪ್ಪಿಕೊಂಡಿತು.

ಹೈದರಾಬಾದ್ ಪರ ಮಯಾಂಕ್ ಅಗರ್ವಾಲ್ 18 ರನ್, ರಾಹುಲ್ ತ್ರಿಪಾಠಿ 20 ರನ್, ಏಡನ್ ಮಾರ್ಕ್ರಮ್ 41 ರನ್, ಹೆನ್ರಿಕ್ ಕ್ಲಾಸೆನ್ 36 ರನ್ ಹಾಗೂ ಅಬ್ದುಲ್ ಸಮದ್ 21 ರನ್ ಗಳಿಸಿದರು.

ಕೆಕೆಆರ್ ಪರ ವೈಭವ್ ಅರೋರ, ಶಾರ್ದೂಲ್ ಠಾಕೂರ್ ತಲಾ 2 ವಿಕೆಟ್ ಪಡೆದರೆ, ಹರ್ಷಿತ್ ರಾಣಾ, ರಸ್ಸೆಲ್, ಅನುಕುಲ್ ರಾಯ್ ಹಾಗೂ ವರುಣ್ ಚಕ್ರವರ್ತಿ ತಲಾ ಒಂದೊಂದು ವಿಕೆಟ್ ಕಿತ್ತರು.

ಮೊದಲು ಬ್ಯಾಟಿಂಗ್ ಮಾಡಿದ ಕೆಕೆಆರ್ ತಂಡ ಒಂದೆಡೆ ವಿಕೆಟ್ ಕಳೆದುಕೊಳ್ಳುತ್ತಿದ್ದರೂ ರನ್ ಕಲೆಹಾಕುತ್ತಾ ಸಾಗಿತು. ಮಧ್ಯಮ ಕ್ರಮಾಂಕದಲ್ಲಿ ನಾಯಕ ನಿತೀಶ್ ರಾಣಾ, ರಿಂಕು ಸಿಂಗ್ ಹಾಗೂ ಆಯಂಡ್ರೆ ರಸ್ಸೆಲ್ ಬ್ಯಾಟಿಂಗ್ ನೆರವಿನಿಂದ 170 ರನ್‌ಗಳ ಗಡಿದಾಟುವಲ್ಲಿ ಯಶಸ್ವಿಯಾಯಿತು.

ಕೆಕೆಆರ್ ಪರ ನಾಯಕ ರಿಂಕು ಸಿಂಗ್ 46 ರನ್ (35 ಎಸೆತ, 4 ಬೌಂಡರಿ, 1 ಸಿಕ್ಸರ್), ನಿತೀಶ್ ರಾಣಾ 42 ರನ್ (31 ಎಸೆತ, 3 ಬೌಂಡರಿ, 3 ಸಿಕ್ಸರ್), ರಸ್ಸೆಲ್ 24 ರನ್ ಹಾಗೂ ಜೇಸನ್ ರಾಯ್ 20 ರನ್ ಗಳಿಸಿ ತಂಡಕ್ಕೆ ನೆರವಾದರು.

ಹೈದರಾಬಾದ್ ಪರ ಮಾರ್ಕೊ ಜಾನ್ಸೆನ್, ಟಿ. ನಟರಾಜನ್ ತಲಾ 2 ವಿಕೆಟ್ ಪಡೆದರೆ, ಭುವನೇಶ್ವರ್ ಕುಮಾರ್, ಕಾರ್ತಿಕ್ ತ್ಯಾಗಿ, ಏಡನ್ ಮಾರ್ಕ್ರಮ್, ಮಯಾಂಕ್ ಮಾರ್ಕಂಡೆ ತಲಾ ಒಂದೊಂದು ವಿಕೆಟ್ ಪಡೆದು ಮಿಂಚಿದರು.

# ಪಂಜಿನ ಮೆರವಣಿಗೆ ಮೂಲಕ ಮತದಾನ ಜಾಗೃತಿ ಕಾರ್ಯಕ್ರಮ



**ರಾಮನಗರ :** ಚನ್ನಪಟ್ಟಣ ಸ್ವೀಪ್ ಸಮಿತಿ ವತಿಯಿಂದ ನಗರಸಭೆ ಮತ್ತು ಶಿಕ್ಷಣ ಇಲಾಖೆ ಸಹಯೋಗದೊಂದಿಗೆ 185–ಚನ್ನಪಟ್ಟಣ ವಿಧಾನ ಸಭಾ ಕ್ಷೇತ್ರದಲ್ಲಿ ಮತದಾನ ಜಾಗೃತಿ ಪಂಜಿನ ಮೆರವಣಿಗೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಚನ್ನಪಟ್ಟಣ ನಗರಸಭೆ ಆವರಣದಿಂದ ಜೆ.ಸಿ ರಸ್ತೆ ಮಾರ್ಗವಾಗಿ ಗಾಂಧಿ ಭವನದ ವರೆಗೆ ಆಡಿಯೊ ಪ್ರಚಾರದೊಂದಿಗೆ ಮತ್ತು ಮಾನವ ಸರಪಳಿಯೊಂದಿಗೆ ಪಂಜಿನ ಮೆರವಣಿಗೆ ನಡೆಸಲಾಯಿತು.

ಈ ಸಂದರ್ಭದಲ್ಲಿ ಕಾರ್ಯನಿರ್ವಾಹಕರ ಅಧಿಕಾರಿ ಶಿವಕುಮಾರ್, ಕ್ಷೇತ್ರ ಶಿಕ್ಷಣ ಅಧಿಕಾರಿ ಮರಿಗೌಡ, ನಗರ ಸಭೆ ಪೌರಯುಕ್ತರಾದ ಪುಟ್ಟಸ್ವಾಮಿ, ಹಿರಿಯ ಆರೋಗ್ಯ ನಿರೀಕ್ಷಕರಾದ ಕುಸುಮ ಜಿ, ಅಕ್ಷರದಾಸೋಹ ಸಹಾಯಕ ನಿರ್ದೇಶಕರಾದ ಸಿದ್ದರಾಜು, ಅಧಿಕಾರಿಗಳು ಹಾಗೂ ತಾಲ್ಲೂಕು ಪಂಚಾಯಿತಿ ಸಿಬ್ಬಂದಿಗಳು, ನಗರ ಸಭೆ ಪೌರಕಾರ್ಮಿಕರು ಹಾಜರಿದ್ದರು.

# ಪದವಿ ವಿದ್ಯಾರ್ಥಿಗಳಿಗೆ ಮತದಾನ ಅರಿವು ಕಾರ್ಯಕ್ರಮ



**ರಾಮನಗರ :** ಚನ್ನಪಟ್ಟಣ ತಾಲ್ಲೂಕು ಸ್ವೀಪ್ ಸಮಿತಿ ವತಿಯಿಂದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಆವರಣದಲ್ಲಿ ಪದವಿ ವಿದ್ಯಾರ್ಥಿಗಳಿಗೆ ಮತದಾನ ಅರಿವು ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಕಡ್ಡಾಯವಾಗಿ ನೈತಿಕ ಮತದಾನ ಮತ್ತು ಚುನಾವಣಾ ಅಕ್ರಮಗಳನ್ನು ದಾಖಲಿಸುವ ಸಿ.ವಿಜಿಲ್ ಆಪ್, 1950 ಕಂಟ್ರೋಲ್ ರೂಂ ಬಗ್ಗೆ ಹಾಗೂ ಇವಿಎಂ ಬಳಕೆ ಬಗ್ಗೆ ತಿಳುವಳಿಕೆ ನೀಡಿ ಮತದಾರರ ಪ್ರತಿಜ್ಞಾ ವಿಧಿ ಬೋಧಿಸಲಾಯಿತು. ಮತದಾರರ ಮಾರ್ಗದರ್ಶಿ ಹಂಚಲಾಯಿತು. ಈ ಕಾರ್ಯಕ್ರಮದಲ್ಲಿ ತಾಲ್ಲೂಕು ಚುನಾವಣಾಧಿಕಾರಿ ಮುನೇಗೌಡ, ಸ್ವೀಪ್ ಸಮ್ಮಿತಿ ಮುಖ್ಯಸ್ಥರಾದ ತಾಲ್ಲೂಕು ಕಾರ್ಯನಿರ್ವಾಹಕ ಅಧಿಕಾರಿ ಶಿವಕುಮಾರ್, ತಹಶೀಲ್ದಾರ್ ಮಹೇಂದ್ರ, ಕ್ಷೇತ್ರ ಶಿಕ್ಷಣ ಅಧಿಕಾರಿ ಮರಿಗೌಡ, ಕಾಲೇಜಿನ ಪ್ರಾಂಶುಪಾಲರಾದ ವೆಂಕಟೇಶ್, ಅಕ್ಷರದಾಸೋಹ ಸಹಾಯಕ ನಿರ್ದೇಶಕರಾದ ಸಿದ್ದರಾಜು, ಹಾಗೂ ತಾಲ್ಲೂಕು ಪಂಚಾಯಿತಿ ಸಿಬ್ಬಂದಿಗಳು, ಕಾಲೇಜಿನ ಶಿಕ್ಷಕ ವೃಂದದವರು ಹಾಜರಿದ್ದರು.

## ಚೆಕ್ ಪೋಸ್ಟ್‌ಗಳಲ್ಲಿ ತಪಾಸಣೆ ವೇಳೆ 38443.54 ಲೀ ಮದ್ಯ ವಶಕ್ಕೆ

**ರಾಮನಗರ :** ಜಿಲ್ಲೆಯಾದ್ಯಂತ ಕಟ್ಟುನಿಟ್ಟಾಗಿ ಮಾದರಿ ನೀತಿ ಸಂಹಿತೆ ಜಾರಿಗೊಳಿಸಿದ್ದು ಮೇ 5ರ ಬೆಳಿಗ್ಗೆ 9 ಗಂಟೆಯ ವರೆಗೆ ಒಟ್ಟು 38443.54 ಲೀ. ಮದ್ಯ ಜಿಲ್ಲೆಯ ವಿವಿಧ ಚೆಕ್‌ಪೋಸ್ಟಗಳಲ್ಲಿ ತಪಾಸಣೆ ವೇಳೆ ವಶಕ್ಕೆ ಪಡೆಯಲಾಗಿದೆ.

ಅಬಕಾರಿ ಇಲಾಖೆ ಕಾರ್ಯಾಚರಣೆ ವೇಳೆ 1,03,91,733 ರೂ. ಮೌಲ್ಯದ 38107.66 ಲೀ ಮದ್ಯ ಹಾಗೂ ಪೋಲಿಸ್ ಇಲಾಖೆ ಕಾರ್ಯಾಚರಣೆಯಲ್ಲಿ 2,88,390 ರೂ ಮೌಲ್ಯದ 294.21 ಲೀ ಮದ್ಯ ವಶಕ್ಕೆ ಪಡೆದು ಪ್ರಕರಣಗಳನ್ನು ದಾಖಲಿಸಲಾಗಿದೆ.

## ಒಲಿಂಪಿಕ್ಸ್ ಚಿನ್ನದ ಪದಕ ವಿಜೇತೆ ಟೋರಿ ಬೋವಿ ಅನುಮಾನಾಸ್ಪದ ಸಾವು




**ವಾಷಿಂಗ್ಟನ್ :** ಒಲಿಂಪಿಕ್ಸ್ ಕ್ರೀಡೆಯಲ್ಲಿ ಮೂರು ಪದಕಗಳು ಹಾಗೂ ಎರಡು ಬಾರಿ ವಿಶ್ವಚಾಂಪಿಯನ್ ಶಿಪ್ ಪ್ರಶಸ್ತಿಗಳನ್ನು ಗೆದ್ದಿದ್ದ ಟೋರಿ ಬೋವಿ (32) ಅನುಮಾನಾಸ್ಪದ ರೀತಿಯಲ್ಲಿ ಸಾವನ್ನಪ್ಪಿದ್ದಾರೆ.

ಹಲವು ದಿನಗಳ ಹಿಂದೆ ಆರೋಗ್ಯ ತಪಾಸಣೆಗಾಗಿ ತೆರಳಿದ್ದ ಬೋವಿ ಫ್ಲೋರಿಡಾದಲ್ಲಿ ಶವವಾಗಿ ಪತ್ತೆಯಾಗಿದ್ದಾಳೆ. ಆದರೂ ಈ ಬಗ್ಗೆ ಸಂಬಂಧಪಟ್ಟ ಇಲಾಖೆ ತನಿಖೆ ನಡೆಸಲು ಹಿಂದೇಟು ಹಾಕಿದೆ ಎಂಬ ಆರೋಪಗಳು ಕೇಳಿಬಂದಿದೆ.

ಐಒಸಿ ಅಧ್ಯಕ್ಷ ಥಾಮಸ್ ಬಾಚ್ ತಮ್ಮ ಟ್ವೀಟ್ ಮೂಲಕ ಸಂತಾಪ ಸೂಚಿಸಿದ್ದಾರೆ. ಟೋರಿ ಬೋವಿ ಹಠಾತ್ ನಿಧನವು ಆಘಾತ ತಂದಿದೆ. ಅವರ ಕುಟುಂಬಸ್ಥರು ಹಾಗೂ ಸ್ನೇಹಿತರಿಗೆ ದುಃಖ ಭರಿಸುವ ಶಕ್ತಿ ಕೊಡಲಿ ಎಂದು ಪ್ರಾರ್ಥಿಸುವುದಾಗಿ ಬರೆದುಕೊಂಡಿದ್ದಾರೆ.

ಟೋರಿ 2016ರ ಒಲಿಂಪಿಕ್ಸ್‌ನಲ್ಲಿ ಮೂರು ಪದಗಳನ್ನು ಬಾಚಿಕೊಂಡಿದ್ದರು. 4*100 ಮೀಟರ್ ರಿಲೇನಲ್ಲಿ ಚಿನ್ನದ ಪದಕ, 100 ಮೀಟರ್ ರಿಲೇನಲ್ಲಿ ಬೆಳ್ಳಿ ಹಾಗೂ 200 ಮೀಟರ್ ಓಟದಲ್ಲಿ ಕಂಚಿನ ಪದಕಗಳನ್ನ ಗೆದ್ದಿದ್ದರು. 2017ರ ವಿಶ್ವಚಾಂಪಿಯನ್‌ಶಿಪ್‌ನಲ್ಲಿ 100 ಮೀಟರ್ ಓಟ ಮತ್ತು 4*100 ಮೀಟರ್ ರಿಲೇನಲ್ಲಿ ಚಿನ್ನದ ಪದಕ, 2019ರಲ್ಲಿ ನಡೆದ ವಿಶ್ವ ಅಥ್ಲೆಟಿಕ್ಸ್ ಚಾಂಪಿಯನ್ ಶಿಪ್‌ನಲ್ಲಿ ಲಾಂಗ್ ಜಂಪ್‌ನಲ್ಲಿ 4ನೇ ಸ್ಥಾನ ಪಡೆದು ಮಿಂಚಿದ್ದರು. ಕೊನೆಯದ್ದಾಗಿ 2022ರಲ್ಲಿ ಅಂತಾರಾಷ್ಟ್ರೀಯ ಕ್ರೀಡಾಕೂಟದಲ್ಲಿ ಭಾಗವಹಿಸಿದ್ದರು.

## ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್ ಫೈನಲ್‌ನಿಂದ ಹೊರಗುಳಿದ ಕೆ.ಎಲ್.ರಾಹುಲ್



**ನವದೆಹಲಿ :** ಶಸ್ತ್ರಚಿಕಿತ್ಸೆಗೆ ಒಳಗಾಗಿರುವ ಟೀಮ್ ಇಂಡಿಯಾದ ಆರಂಭಿಕ ಬ್ಯಾಟರ್ ಕನ್ನಡಿಗ ಕೆ.ಎಲ್. ರಾಹುಲ್ ಅವರು ಮುಂಬರುವ ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್ (ಡಬ್ಲ್ಯುಟಿಸಿ) ಫೈನಲ್‌ನಿಂದ ಹೊರಗುಳಿದಿದ್ದಾರೆ.


ಡಬ್ಲ್ಯುಟಿಸಿ ಫೈನಲ್ ಓವಲ್ ಕ್ರೀಡಾಂಗಣದಲ್ಲಿ ಜೂನ್ 7 ರಿಂದ 11ರವರೆಗೆ ಭಾರತ–ಆಸ್ಟ್ರೇಲಿಯಾ ನಡುವೆ ನಡೆಯಲಿದೆ.

ಲಖನೌ ಸೂಪರ್ ಜೈಂಟ್ಸ್ ತಂಡದ ನಾಯಕ ಕೆ.ಎಲ್. ರಾಹುಲ್ ಅವರು ಈಚೆಗೆ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡದ ಎದುರಿನ ಪಂದ್ಯದಲ್ಲಿ ಫೀಲ್ಡಿಂಗ್ ಮಾಡುವಾಗ ಬಲ ತೊಡೆಯ ಸ್ನಾಯುಸೆಳೆತದಿಂದ ಬಳಲಿದ್ದರು. ಈ ಗಾಯವು ಗಂಭೀರವಾಗಿದ್ದು, ಮುಂಬೈನಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಇದರಿಂದಾಗಿ ಪ್ರಸಕ್ತ ಐಪಿಎಲ್ ಟೂರ್ನಿಯಿಂದ ಹೊರಬಿದ್ದಿದ್ದಾರೆ.

ನಾನು ಮುಂದಿನ ತಿಂಗಳು ಓವಲ್‌ನಲ್ಲಿ ನಡೆಯಲಿರುವ ಆಸ್ಟ್ರೇಲಿಯಾ ವಿರುದ್ಧದ ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್ (ಡಬ್ಲ್ಯುಟಿಸಿ) ಫೈನಲ್‌ನಲ್ಲಿ ಆಡುವುದಿಲ್ಲ. ಆದರೆ, ನೀಲಿ ಜರ್ಸಿ ತೊಡುವುದಕ್ಕೆ ಮತ್ತು ದೇಶವನ್ನು ಪ್ರತಿನಿಧಿಸಲು ನಾನು ಸದಾ ಸಿದ್ಧನಿರುತ್ತೇನೆ. ಅದು ಯಾವಾಗಲೂ ನನ್ನ ಗಮನ ಮತ್ತು ಆದ್ಯತೆಯಾಗಿದೆ ಎಂದು ರಾಹುಲ್ ಅವರು ತಮ್ಮ ಸಾಮಾಜಿಕ ಮಾಧ್ಯಮಗಳಲ್ಲಿ ಬರೆದುಕೊಂಡಿದ್ದಾರೆ.

ವೈದ್ಯರ ಸಲಹೆ ಮೇರೆಗೆ ನಾನು ಶೀಘ್ರದಲ್ಲೇ ತೊಡೆಯ ಶಸ್ತ್ರಚಿಕಿತ್ಸೆಗೆ ಒಳಗಾಗಲಿದ್ದು, ಅದಷ್ಟು ಬೇಗ ಚೇತರಿಸಿಕೊಳ್ಳಲಿದ್ದೇನೆ ಎಂದು ರಾಹುಲ್ ತಿಳಿಸಿದ್ದಾರೆ.

## ಭಾರೀ ಮೊತ್ತಕ್ಕೆ ಸೇಲ್ ಆದ ಸೂರ್ಯ ನಟನೆಯ ಕಂಗುವ




ತಮಿಳಿನ ಖ್ಯಾತ ನಟ ಸೂರ್ಯ ನಟನೆಯ ಕಂಗುವ ಸಿನಿಮಾದ ಶೂಟಿಂಗ್ ಇನ್ನೂ ಕಂಪ್ಲೀಟ್ ಆಗಿಲ್ಲ. ಆಗಲೇ ಭರ್ಜರಿ ವ್ಯಾಪಾರ ಆರಂಭಿಸಿದೆ. ಮೊನ್ನೆಯಷ್ಟೇ ಚಿತ್ರದ ಶೀರ್ಷಿಕೆಯನ್ನು ರಿಲೀಸ್ ಮಾಡಿ ಅಭಿಮಾನಿಗಳ ಸಂಭ್ರಮಕ್ಕೆ ಕಾರಣವಾಗಿತ್ತು ಚಿತ್ರತಂಡ. ಇದೀಗ ಭಾರೀ ಮೊತ್ತಕ್ಕೆ ಓಟಿಟಿಗೆ ಸೇಲ್ ಆಗುವ ಮೂಲಕ ಸಂಭ್ರಮವನ್ನು ಇಮ್ಮಡಿಗೊಳಿಸಿದೆ.

ಮೂಲಗಳ ಪ್ರಕಾರ ಅಮೆಜಾನ್ ಪ್ರೈಮ್ ಸಂಸ್ಥೆಯು ಕಂಗುವ ಸಿನಿಮಾದ ಓಟಿಟಿ ಹಕ್ಕನ್ನು ಬರೋಬ್ಬರಿ 80 ಕೋಟಿಗೆ ಖರೀದಿ ಮಾಡಿದೆಯಂತೆ. ಇದು ಎಲ್ಲ ಭಾಷೆಯ ಹಕ್ಕುಗಳನ್ನೂ ಒಳಗೊಂಡಿದೆ ಎನ್ನಲಾಗುತ್ತಿದೆ. ಈ ಮಾಹಿತಿಯನ್ನು ಚಿತ್ರತಂಡವೇ ಬಹಿರಂಗ ಪಡಿಸಿದೆ ಎಂದು ಕೆಲ ಮಾಧ್ಯಮಗಳ ವರದಿ ಮಾಡಿವೆ.

ಸ್ಟುಡಿಯೋ ಗ್ರೀನ್ನಡಿ ಕೆ.ಇ. ಜ್ಞಾನ ವೇಲ್ ರಾಜ ನಿರ್ಮಿಸಿ, ಶಿವ ನಿರ್ದೇಶಿಸುತ್ತಿರುವ ಈ ಚಿತ್ರವು ಪ್ರಾರಂಭವಾದಾಗಿನಿಂದ ಅಭಿಮಾನಿಗಳ ವಲಯದಲ್ಲಿ ಸಾಕಷ್ಟು ಕುತೂಹಲ ಕೆರಳಿಸಿದೆ. ಬಹುಕೋಟಿ ವೆಚ್ಚದ ಈ ಚಿತ್ರದಲ್ಲಿ ಸೂರ್ಯಗೆ ನಾಯಕಿಯಾಗಿ ಬಾಲಿವುಡ್ ಬೆಡಗಿ ದಿಶಾ ಪಠಾಣಿ ಅಭಿನಯಿಸುತ್ತಿದ್ದು, ಯೋಗಿ ಬಾಬು ಮುಂತಾದವರು ಪ್ರಮುಖ ಪಾತ್ರಗಳಲ್ಲಿ ಕಾಣಿಸಿಕೊಳ್ಳುತ್ತಿದ್ದಾರೆ.

ಕಂಗುವ ಚಿತ್ರವು 10 ಭಾಷೆಗಳಲ್ಲಿ ಏಕಕಾಲಕ್ಕೆ ಬಿಡುಗಡೆಯಾಗುತ್ತಿರುವುದರಿಂದ ಎಲ್ಲ ಭಾಷೆಗಳಿಗೂ ಕನೆಕ್ಟ್ ಆಗುವಂತಹ ಶೀರ್ಷಿಕೆಯೊಂದರ ಹುಡುಕಾಟದಲ್ಲಿ ಚಿತ್ರತಂಡ ಇತ್ತು. ಆ ಶೀರ್ಷಿಕೆ ಕೊನೆಗೂ ಸಿಕ್ಕಿದ್ದು, ಕಂಗುವ ಎಂದರೆ, ಬೆಂಕಿಯ ಶಕ್ತಿಯುಳ್ಳವನು ಎಂದರ್ಥ. ಇಲ್ಲಿ ನಾಯಕ ಒಬ್ಬ ಸೂಪರ್ ಹೀರೋ ಆಗಿದ್ದು, ಹಲವು ಅವತಾರಗಳಲ್ಲಿ ಕಾಣಿಸಿಕೊಳ್ಳುತ್ತಾನೆ.

# ಕುಡಿದು ಪೊಲೀಸರಿಂದ ಹಲ್ಲೆ ಆರೋಪ

## ದೇಶದ ಅತ್ಯುನ್ನತ ಪ್ರಶಸ್ತಿ ಹಿಂದಿರುಗಿಸಲು ಮುಂದಾದ ಕುಸ್ತಿಪಟುಗಳು

**ನವದೆಹಲಿ :** ಭಾರತೀಯ ಕುಸ್ತಿ ಫೆಡರೇಷನ್ ಅಧ್ಯಕ್ಷ ಬ್ರಿಜ್ ಭೂಷಣ್ ಶರಣ್ ಸಿಂಗ್ ವಿರುದ್ಧ ಲೈಂಗಿಕ ಕಿರುಕುಳ ಆರೋಪಿಸಿ ಕಳೆದ ಕೆಲವು ದಿನಗಳಿಂದ ದೆಹಲಿಯ ಜಂತರ್ ಮಂತರ್ ನಲ್ಲಿ ಪ್ರತಿಭಟನೆ ನಡೆಸುತ್ತಿರುವ ಕುಸ್ತಿಪಟುಗಳ ಮೇಲೆ ದೆಹಲಿ ಪೊಲೀಸರು ಹಲ್ಲೆ ನಡೆಸಿದ್ದಾರೆ.

ಕುಸ್ತಿ ಫೆಡರೇಷನ್ ಮುಖ್ಯಸ್ಥ ಬ್ರಿಜ್ ಭೂಷಣ್ ವಿರುದ್ಧ ಲೈಂಗಿಕ ಕಿರುಕುಳ ಆರೋಪಗಳನ್ನು ಮಾಡಿರುವ ಮೂವರು ಮಹಿಳಾ ಕುಸ್ತಿಪಟುಗಳು ಸಲ್ಲಿಸಿದ್ದ ಅರ್ಜಿ ವಿಚಾರಣೆಯನ್ನು ಸುಪ್ರೀಂಕೋರ್ಟ್ ಅಂತ್ಯಗೊಳಿಸಿದೆ. ಎಫ್‌ಐಆರ್‌ಗಳನ್ನು ದಾಖಲಿಸಿರುವುದು ಮತ್ತು 7 ದೂರುದಾರರಿಗೆ ಸೂಕ್ತ ಭದ್ರತೆ ಒದಗಿಸಿರುವುದನ್ನು ಪರಿಗಣಿಸಿ ನಿರ್ಧಾರ ಕೈಗೊಂಡಿದೆ.

ಮುಖ್ಯ ನ್ಯಾಯಮೂರ್ತಿ ಡಿವೈ ಚಂದ್ರಚೂಡ್ ಅವರ ನೇತೃತ್ವದ ನ್ಯಾಯಪೀಠ, ಪ್ರಸ್ತುತ ನಡೆಯುತ್ತಿರುವ ತನಿಖೆಯನ್ನು ನಿವೃತ್ತ ಅಥವಾ ಹಾಲಿ ಹೈಕೋರ್ಟ್ ನ್ಯಾಯಮೂರ್ತಿ ನಿಗಾವಣೆಗೆ ಒಪ್ಪಿಸುವಂತೆ ಹೇಳಿ ಕುಸ್ತಿಪಟುಗಳ ಪರ ವಕೀಲರು ಮಾಡಿದ ಮೌಖಿಕ ಮನವಿ ಪರಿಗಣಿಸಲು ನಿರಾಕರಿಸಿತು.

ಈಖಖ ದಾಖಲಿಸುವುದು ಮತ್ತು ದೂರುದಾರರಿಗೆ ಭದ್ರತೆ ಒದಗಿಸುವ ನಿರ್ದಿಷ್ಟ ಮನವಿಗಳೊಂದಿಗೆ ನೀವು ಇಲ್ಲಿಗೆ ಬಂದಿದ್ದೀರಿ. ನಿಮ್ಮ ಬೇಡಿಕೆಯನ್ನ ಈಡೇರಿಸಲಾಗಿದೆ. ಇನ್ನೂ ಬೇರೆ ಮನವಿಗಳಿದ್ದರೆ ನೀವು ಹೈಕೋರ್ಟ್ ಅಥವಾ ಆ ವ್ಯಾಪ್ತಿಯ ಮ್ಯಾಜಿಸ್ಟ್ರೇಟ್‌ಗೆ ಮನವಿ ಸಲ್ಲಿಸಬಹುದು ಎಂದು ನ್ಯಾಯಮೂರ್ತಿಗಳಾದ ಪಿ.ಎಸ್ ನರಸಿಂಹ ಮತ್ತು ಜೆಬಿ ಪರ್ದಿವಾಲಾ ಅವರನ್ನು ಒಳಗೊಂಡ ನ್ಯಾಯಪೀಠ, ಪ್ರಕರಣದ ಅರ್ಜಿಯ ವಿಚಾರಣೆಯನ್ನು ಅಂತ್ಯಗೊಳಿಸುವುದಾಗಿ ಹೇಳಿತ್ತು. ಈ ಬೆನ್ನಲ್ಲೇ ಕುಸ್ತುಪಟುಗಳ ಮೇಲೆ ಹಲ್ಲೆ ನಡೆದಿದೆ.





**ಪೊಲೀಸರು–ಕುಸ್ತಿಪಟುಗಳ ನಡುವೆ ಜಟಾಪಟಿ :** ದೆಹಲಿಯ ಜಂತರ್ ಮಂತರ್‌ನಲ್ಲಿ ಪ್ರತಿಭಟನೆ ನಡೆಸುತ್ತಿರುವ ಕುಸ್ತಿಪಟುಗಳ ಮೇಲೆ ಕುಡಿದ ಅಮಲಿನಲ್ಲಿದ್ದ ಪೊಲೀಸರು ಬುಧವಾರ ರಾತ್ರಿ ಹಲ್ಲೆ ನಡೆಸಿರುವುದಾಗಿ ಕುಸ್ತಿಪಟುಗಳು ಆರೋಪಿಸಿದ್ದಾರೆ. ಪ್ರತಿಭಟನಾ ಸ್ಥಳಕ್ಕೆ ಹಾಸಿಗೆಗಳನ್ನು ತರಲು ಹೋಗಿದ್ದಾಗ ಪೊಲೀಸರು ಹಲ್ಲೆ ನಡೆಸಿರುವುದಾಗಿ ದೂರಿದ್ದಾರೆ.

ಕೆಲವು ಕುಸ್ತಿಪಟುಗಳ ತಲೆಗೆ ಹೊಡೆತ ಬಿದ್ದಿದ್ದು, ಇಬ್ಬರಿಗೆ ಗಾಯಗಳಾಗಿವೆ. ಒಬ್ಬರು ಪ್ರಜ್ಞೆ ಕಳೆದುಕೊಂಡು ಕುಸಿದು ಬಿದ್ದಿದ್ದು, ಚಿಕಿತ್ಸೆಗಾಗಿ ಆಸ್ಪತ್ರೆಗೆ ದಾಖಲಿಸಲಾಗಿದೆ.

ಆಮ್ ಆದ್ಮಿ ಪಕ್ಷದ ಶಾಸಕ ಸೋಮನಾಥ್ ಭಾರ್ತಿ ಅವರು ಅನುಮತಿ ಇಲ್ಲದೇ ಪ್ರತಿಭಟನಾ ಸ್ಥಳಕ್ಕೆ ಹಾಸಿಗೆಗಳೊಂದಿಗೆ ಬಂದಿದ್ದರು. ಪೊಲೀಸರು ಮಧ್ಯಪ್ರವೇಶ ನಡೆಸಿದಾಗ ಸಣ್ಣ ಜಗಳ ನಡೆಯಿತು. ಬಳಿಕ ಎಎಪಿ ನಾಯಕ ಹಾಗೂ ಇತರೆ ಇಬ್ಬರನ್ನು ಬಂಧಿಸಲಾಯಿತು ಎಂದು ಪೊಲೀಸರು ತಿಳಿಸಿದ್ದಾರೆ.

**ಪ್ರಶಸ್ತಿ ಹಿಂದಿರುಗಿಸಲು ಸಿದ್ಧ :** ಪೊಲೀಸರು ಹಲ್ಲೆ ನಡೆಸಿದ ಬಳಿಕ ಒಲಿಂಪಿಕ್ಸ್ ಕಂಚಿನ ಪದಕ ವಿಜೇತ ಬಜರಂಗ್ ಪೂನಿಯಾ ಸುದ್ದಿಗಾರರೊಂದಿಗೆ ಮಾತನಾಡಿ, ಕುಸ್ತಿಪಟುಗಳನ್ನು ಈ ರೀತಿ ನಡೆಸಿಕೊಳ್ಳುವುದು ಎಷ್ಟು ಸರಿ. ಇದು ಹೀಗೆ ಮುಂದುವರಿದರೆ ನಾವು ನಮ್ಮ ಎಲ್ಲ ಪದಕಗಳು ಮತ್ತು ಪ್ರಶಸ್ತಿಗಳನ್ನ ಭಾರತ ಸರ್ಕಾರಕ್ಕೆ ಹಿಂದಿರುಗಿಸುತ್ತೇವೆ. ಬಳಿಕ ಕುಸ್ತಿ ಬಿಟ್ಟು ಸಾಮಾನ್ಯ ಜೀವನ ನಡೆಸುತ್ತೇವೆ ಎಂದು ಕಣ್ಣೀರಿಟ್ಟಿದ್ದಾರೆ.


ವಿನೇಶ್, ಸಾಕ್ಷಿ ಮತ್ತು ಬಜರಂಗ್ ಮೂವರೂ ದೇಶದ ಅತ್ಯುನ್ನತ ಕ್ರೀಡಾ ಪ್ರಶಸ್ತಿ ಖೇಲ್ ರತ್ನ ಸ್ವೀಕರಿಸಿದ್ದಾರೆ. ಸಾಕ್ಷಿ ಮಲಿಕ್ 2017 ರಲ್ಲಿ ಮತ್ತು ಬಜರಂಗ್ ಪೂನಿಯಾ 2019 ರಲ್ಲಿ ದೇಶದ 4ನೇ ಅತ್ಯುನ್ನತ ನಾಗರಿಕ ಗೌರವವಾದ ಪದ್ಮಶ್ರೀ ಪ್ರಶಸ್ತಿಯನ್ನೂ ಪಡೆದುಕೊಂಡಿದ್ದಾರೆ.

ಸದ್ಯ ಪೊಲೀಸರಿಂದ ಹಲ್ಲೆ ನಡೆದ ಹೊರತಾಗಿಯೂ ಕ್ರೀಡೋತ್ಸಾಹ ನಿಲ್ಲಿಸದ ಕುಸ್ತಿಪಟುಗಳು ಜಂತರ್ ಮಂತರ್‌ನಲ್ಲೇ ಕುಸ್ತಿ ತರಬೇತಿ ನಡೆಸಲು ಮುಂದಾಗಿದ್ದಾರೆ.

## ಸಂಕ್ಷಿಪ್ತ ಸುದ್ದಿ

# ಬಿಜೆಪಿಗೆ ಅಂಬೇಡ್ಕರ್ ಬಗ್ಗೆ ಅಪಾರ ಗೌರವವಿದೆ

**ಮಂಡ್ಯ :** ಕಾಂಗ್ರೆಸ್ ಪಕಷದ ರಾಷ್ಟ್ರೀಯ ಅಧ್ಯಷರು, ಬಿಜೆಪಿ ಕಚೇರಿಯಲ್ಲಿ ಬಾಬಾ ಸಾಹೇಬರ ಫೋಟೋ ಇಟ್ಟಿಲಾ, ಅಂಬೇಡ್ಕರ್ ರವರ ಬಗ್ಗೆ ಗೌರವವಿಲಾ ಎಂಬ ಹೇಳಿಕೆ ಹಾಸ್ಯಾಸ್ಪದ ಎಂದು ಬಿಜೆಪಿ ಮಾಧ್ಯಮ ವಕ್ತಾರ ಸಿ.ಟಿ. ಮಂಜುನಾಥ್ ಹೇಳಿದ್ದಾರೆ.



ಬಿಜೆಪಿ ಪಷಕ್ಕೆ ಬಾಬಾ ಸಾಹೇಬರ ಬಗ್ಗೆ ಗೌರವ ವಿದ್ದುದ್ದರಿಂದಲೇ ಅವರು ಹುಟ್ಟಿ, ಬೆಳೆದು, ಅಧ್ಯಯನ ಮಾಡಿದ ಜಾಗ ಹಾಗೂ ಅವರ ಸಮಾಧಿ ಸ್ಥಳಗಳನ್ನು ಅಂತರರಾಷ್ಟ್ರೀಯ ಮಟ್ಟದಲ್ಲಿ ಅಭಿವೃದ್ಧಿ ಪಡಿಸಲಾಗಿದೆ.

1956 ರಲ್ಲಿ ಬಾಬಾ ಸಾಹೇಬರು ಸಕ್ಕರೆ ಖಾಯಿಲೆಯಿಂದ ಸಾವನ್ನಪ್ಪಿದಾಗ, ದೆಹಲಿಯ ಪ್ರತಿಶಿಷ್ಟರ ಸಮಾದಿಯ ಸ್ಥಳ ರಾಜಘಾಟ್‌ನಲಿ ಅವರನ್ನು ಮಣ್ಣು ಮಾಡಲು ಕಾಂಗ್ರೆಸ್ ಪಕಷ ಅನುವು ಮಾಡಿ ಕೊಡಲಿಲಾ, ನಂತರ ಅವರನ್ನು ಮುಂಬೈನ ದಾದರ್‌ನಲ್ಲಿ ಅವರ ಅಂತ್ಯ ಸಂಸ್ಕಾರ ಮಾಡಬೇಕಾಯಿತು ಎಂದು ವಿವರಿಸಿದರು.

ಅವರು ತೀರಿಕೊಂಡ 33 ವರ್ಷಗಳ ನಂತರ 1989ರಲ್ಲಿ ಕಾಂಗ್ರೆಸ್ಸೇತರ ವಿ.ಪಿ .ಸಿಂಗ್ ಬಂದ ನಂತರ ಬಾಬಾ ಸಾಹೇಬರಿಗೆ ಭಾರತ ರತ್ನ ಕೊಡಲಾಯಿತು. ಆಗ ಬಿ.ಜೆ.ಪಿ. ಪಕಷ ಆಗಿನ ಸರ್ಕಾರದಲ್ಲಿ ತನ್ನ ಬೆಂಬಲವನ್ನು ನೀಡಿತ್ತು. ತಾನು ಮತ್ತು ತನ್ನ ಕುಟುಂಬಕ್ಕೆ ಭಾರತ ರತ್ನ ಕೊಟ್ಟುಕೊಂಡ ಕಾಂಗ್ರೆಸ್ ಪಷವು ಸಂವಿಧಾನ ಶಿಲ್ಪಿಗೆ ಭಾರತ ರತ್ನ ನೀಡಲಿಲ್ಲವೇಕೆ ಎಂದು ಪ್ರಶ್ನಿಸಿದರು.

ಅಂಬೇಡ್ಕರ್ ಅವರನ್ನು ಚುನಾವಣೆಯಲ್ಲಿ ಸೋಲಿಸಿ ಆಯ್ಕೆಯಾದ ವ್ಯಕ್ತಿಗೆ ಕಾಂಗ್ರೆಸ್ ಸರ್ಕಾರ ಪದ್ಮಭೂಷಣ ಪ್ರಶಸ್ತಿಯನ್ನು ನೀಡಿ ಗೌರವಿಸಿದೆ. ಆದರೆ ಅಂಬೇಡ್ಕರ್ ಅವರಿಗೆ ಜೀವಿತಾವಧಿಯಲ್ಲಿ ಯಾವ ಪ್ರಶಸ್ತಿಯನ್ನೂ ನೀಡದೆ ಅಪಮಾನ ಮಾಡಿದ್ದಾರೆ ಎಂದು ದೂರಿದರು.

ಇಷ್ಟೆಲ್ಲ ಅಪಮಾನ ಮಾಡಿರುವ ಕಾಂಗ್ರೆಸ್ ಪಷ , ಬಿ.ಜೆ.ಪಿ.ಗೆ ಅಂಬೇಡ್ಕರ್ ಬಗ್ಗೆ ದಲಿತ ಕಾಳಜಿಯ ಬಗ್ಗೆ ಪಾಠ ಮಾಡಲು ಹೊರಟಿರೋದು ನಗೆ ಪಾಟಲಿನ ವಿಚಾರ ಎಂದು ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ.

# ಭಯೋತ್ಪಾದನೆ ಮಟ್ಟ ಹಾಕಲು ಬಿಜೆಪಿಗೆ ಮತ ನೀಡಿ



**ಬಳ್ಳಾರಿ :** ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಮಧ್ಯಾಹ್ನ ಬಳ್ಳಾರಿ ನಗರದ ಕಪ್ಪಗಲ್ಲು ರಸ್ತೆಯ ಜಮೀನೊಂದರಲ್ಲಿ ಹಮ್ಮಿಕೊಂಡಿದ್ದ ನವ ಕರ್ನಾಟಕ ಸಂಕಲ್ಪ ಸಮಾವೇಶ ದಲ್ಲಿ ಪಾಲ್ಗೊಂಡು ಮಾತಮಾಡಿದರು.

ಮೊದಲಿಗೆ ಕನ್ನಡದಲ್ಲಿ ಎಲ್ಲರಿಗೂ ನಮಸ್ಕಾರ ಹೇಳಿದ ಅವರು, ಸಂಡೂರಿನ ಕುಮಾರಸ್ವಾಮಿ, ದುರ್ಗಮ್ಮ, ಬೊಮ್ಮಗಟ್ಟದ ಹುಲಿಕುಂಟರಾಯನ ನ್ನು ನೆನೆದರು.

ದೇಶದ ರಾಜಕೀಯದಲ್ಲಿ ಕಾಂಗ್ರೆಸ್ ಬರೀ ಸುಳ್ಳನ್ನೇ ಹುಟ್ಟು ಹಾಕುತ್ತ ಬಂದಿದೆ. ರಾಜ್ಯದಲ್ಲೂ ಕಾಂಗ್ರೆಸ್ ಗ್ಯಾರೆಂಟಿಗಳ ಮೂಲಕ ಹೊಸ ಸುಳ್ಳನ್ನು ಹೇಳುತ್ತಾ ಹೊರಟಿದೆಂದರು.

ಬಿಜೆಪಿಯ ಪ್ರಣಾಳಿಕೆ ಸಂಕಲ್ಪ ಪತ್ರ ಆಗಿದೆ. ಅದು ದೇಶದ ನಂಬರ್ ಒನ್ ರಾಜ್ಯ ಮಾಡುವುದಾಗಿದೆ. ಅದಕ್ಕಾಗಿ ಬಿಜೆಪಿಗೆ ಮತ ನೀಡಿ ಎಂದರು.

ಕಾಂಗ್ರೆಸ್ ಪ್ರಣಾಳಿಕೆಯಲ್ಲಿ ಬರೀ ಅದನ್ನು ತಡೆಯುತ್ತೇವೆ. ಇದನ್ನು ಹಿಂದಕ್ಕೆ ಪಡೆಯುತ್ತೇವೆ ಎಂಬ ಘೋಷಣೆ ಇವೆ. ಅಷ್ಟೇ ಅಲ್ಲ ಬಜರಂಗ ದಳವನ್ನು ನಿಷೇಧದ ಬಗ್ಗೆ ಹೇಳಿದ್ದಾರೆ ಅದಕ್ಕಾಗಿ ಆ ಪಕ್ಷಕ್ಕೆ ಸರಿತಾದ ಬುದ್ದಿಯನ್ನು ಕರ್ನಾಟಕದ ಜನತೆ ಚುನಾವಣೆಯಲ್ಲಿ ಕಲಿಸಬೇಕು ಎಂದರು.

ಭಯೋತ್ಪಾದನೆ ವಿರುದ್ಧ ಬಿಜೆಪಿ ಕಠಿಣ ನಿರ್ಧಾರ ತೆಗಡದುಕೊಂಡಾಗಲೆಲ್ಲ ಕಾಂಗ್ರೆಸ್ ಗೆ ತಳಮಳಗೊಳ್ಳುತ್ತದೆ ಯಾಕೆ ಎಂದು ಪ್ರಶ್ನಿಸಿ. ಜೀವನ, ವಿಕಾಸ, ವಿರೋಧಿಯಾದ ಭಯೋತ್ಪಾದನೆಯನ್ನು ಮಟ್ಟಹಾಕಲು ಮತ ಮುದ್ರೆ ಒತ್ತಬೇಕು ಎಂದರು.

ಭಯತ್ಪಾದನೆ ಬೆಳೆದರೆ ಇಲ್ಲಿನ ಐಟಿ, ಕೃಷಿ, ಗೌರವ ಸಂಸ್ಕೃತಿ ಎಲ್ಲಾ ಹಾಳಾಗುತ್ತದೆ. ಆದರೆ ಈಬಗ್ಗೆ ಒಂದೇ ಒಂದು ಮಾತನಾಡುತ್ತಿಲ್ಲ ಕಾಂಗ್ರೆಸ್ ಎಂದರು.ಸ್ಮಗಲಿಂಗ್ ಡ್ರಗ್ಸ್ ಮಾರಾಟದ ದಂಧೆಯಿಂದ ಭಯೋತ್ಪಾನೆ ಬೆಳೆಯುತ್ತಿದೆ. ಪಿಸ್ತೂಲಿನಿಂದ ಆಡಳಿತ ನಡೆಸುವ ಕಾಲ ಬರಲಿದೆ. ಅದಕ್ಕಾಗಿ ಎಲ್ಲರೂ ಎಚ್ಚರದಿಂದ ಇರಬೇಕು. ಭಯೋತ್ಪಾದನೆ ವಿರುದ್ದ ಧ್ವನಿ ಎತ್ತಬೇಕು ಎಂದರು. ಕೇರಳ ಸ್ಟೋರಿ ಬಗ್ಗೆ ಚರ್ಚೆಯಾಗ್ತಿದೆ

ಕೇರಳ ಸ್ಟೋರಿ ಕೇವಲ ಒಂದು ರಾಜ್ಯದಲ್ಲಿ ನಡೆದಿದೆ ಎನ್ನುತ್ತಾರೆ.. ಆದ್ರೇ ಇಷ್ಟೊಂದು ಸುಂದರ ರಾಜ್ಯದಲ್ಲಿ ಹೀಗೆ ನಡೆಯುತ್ತದೆ ಆಂದ್ರೇ ಹೇಗೆ.

ಆದ್ರೇ ಕಾಂಗ್ರೆಸ್ ಇದರ ಬಗ್ಗೆ ಮಾತನಾಡದೇ ಭಯೋತ್ಪಾದಕರ ಪರ ಮಾತನಾಡ್ತಾರೆ. ಹಿಂಭಾಗಿಲ ಮೂಲಕ ಭಯೋತ್ಪಾದಕರ ಬೆಂಬಲ ನೀಡ್ತಿದ್ದಾರೆ. ಈ ಬಗ್ಗೆ ಜನರು ಎಚ್ಚರದಿಂದ ಇರಬೇಕು.

ರಾಜ್ಯದಲ್ಲಿ ಯಡಿಯೂರಪ್ಪ ಮತ್ತು ಬೊಮ್ಮಾಯಿ ಅವರ ನೇತೃತ್ವದಲ್ಲಿ ಡಬಲ್ ಇಂಜಿನ್ ಸರ್ಕಾರ ಭ್ರಷ್ಟಾಚಾರ ರಹಿತವಾಗಿ ನಡೆಯುತ್ತಿದೆ. ಆದರೆ ಕಾಂಗ್ರೆಸ್ ವರಿಷ್ಟ ರಾಜೀವ್ ಗಾಂಧಿ ಅವರೇ ಹೇಳುವಂತೆ ಕೇಂದ್ರದಲ್ಲಿ ಒಂದು ರೂ ನೀಡಿದರೆ ಗ್ರಾಮಗಳಿಗೆ ಭ್ರಷ್ಟಾಚಾರದಿಂದ 10 ರೂ ಬರುತ್ತದೆಂದು. ಶೇ 85 % ಕಮೀಷನ್ ಪಡೆಯುತ್ತದೆಂದು ಹೇಲಕಿದ್ದಾರೆಂದು ಆರೋಪಿಸಿದರು.

# ಅಧಿಕಾರದ ಹಗಲುಗನಸು ಕಾಣುವ ಕಾಂಗ್ರೆಸ್

## ರಾಜ್ಯ ಬಿಜೆಪಿ ಉಪಾಧ್ಯಕ್ಷ ವಿಜಯೇಂದ್ರ ಹೇಳಿಕೆ



**ಪಿರಿಯಾಪಟ್ಟಣ :** ಮೇ 13 ರ ಮತ ಎಣಿಕೆ ಆರಂಭವಾದ ಎರಡೇ ತಾಸುಗಳಲ್ಲಿ ಕಾಂಗ್ರೆಸ್ ಪಕ್ಷದ ಏಜೆಂಟರು ಮತ ಏಣಿಕೆ ಕೇಂಧ್ರದಿಂದ ಹೊರ ನಡೆಯಲಿದ್ದಾರೆ ಎಂದು ರಾಜ್ಯ ಬಿಜೆಪಿ ಉಪಾಧ್ಯಕ್ಷ ವಿಜಯೇಂದ್ರ ಹೇಳಿದರು.

ಪಕ್ಷದ ಅಭ್ಯರ್ಥಿ ಪರವಾಗಿ ರೋಡ್ ಶೋ ನಡೆಸಿ ಬಳಿಕ ಮಾತನಾಡಿದ ಅವರು ಬಡವರು, ದೀನದಲಿತರು, ಅಲ್ಪಸಂಖ್ಯಾತರು, ಹಿಂದುಳಿದ ವರ್ಗದವರ ಹಿತ ಕಾಯಲು ಬಿಜೆಪಿ ಸದಾ ಸಿದ್ಧವಿದೆ. ರಾಜ್ಯದ ಜನರ ಕಲ್ಯಾಣಕ್ಕಾಗಿ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪನವರು ತಮ್ಮ ಅವಧಿಯಲ್ಲಿ ಭಾಗ್ಯ ಲಕ್ಷ್ಮಿ ಬಾಂಡ್, ಮಾಸಾಸನ ಸೇರಿದಂತೆ ಹಲವು ಯೋಜನೆಗಳನ್ನು ಜಾರಿಗೆ ತಂದ ಕೀರ್ತಿ ಅವರಿಗೆ ಸಲ್ಲುತ್ತದೆ ಎಂದರು.

ಕಾಂಗ್ರೆಸ್ ಪಕ್ಷವು ಚುನಾವಣಾಪೂರ್ವ ಸಮಕ್ಷೇಗಳನ್ನ ನಂಬಿ ಈಗಾಗಲೇ ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷ ಆಡಳಿತಕ್ಕೆ ಬರುತ್ತದೆ ಎಂಬ ಭ್ರಮೆಯಲ್ಲಿದ್ದಾರೆ. ದೇಶದಲ್ಲಿ ಕಾಂಗ್ರೆಸ್ ಪಕ್ಷ ದಿನೇದಿನೆ ಆಡಳಿತವನ್ನು ಕಳೆದುಕೊಳ್ಳುತ್ತಿದೆ. ಕೇಂದ್ರದಲ್ಲಿ ಮೋದಿ ರವರ ಆಡಳಿತ ಹಾಗೂ ರಾಜ್ಯದಲ್ಲಿ ಬಸವರಾಜ್ ಬೊಮ್ಮಯ್ಯ ರವರ ಡಬಲ್ ಇಂಜಿನ್ ಸರ್ಕಾರ ಮತ್ತೊಮ್ಮೆ ಅಧಿಕಾರಕ್ಕೆ ಬರುವುದು ಖಚಿತ ಎಂದು ಆತ್ಮ ವಿಶ್ವಸ ವ್ಯಕ್ತಪಡಿಸಿದರು.

ಅಭ್ಯರ್ಥಿ ಸಿ.ಎಚ್. ವಿಜಯಶಂಕರ್ ಮಾತನಾಡಿ, ತಾಲೂಕಿನಲ್ಲಿ ಕಾಂಗ್ರೆಸ್ ಮತ್ತು ಜೆಡಿಎಸ್ ಪಕ್ಷಗಳಿಗೆ ಅವಕಾಶ ನೀಡಿದಂತೆ ನಮಗೂ ಒಂದು ಅವಕಾಶ ನೀಡಿದರೆ ತಾಲೂಕಿನ ಸಮಗ್ರ ಅಭಿವೃದ್ಧಿಗಾಗಿ ಶ್ರಮಿಸುತ್ತೇನೆ ಎಂದು ಮನವಿ ಮಾಡಿದರು. ಈ ಭಾಗದ ಪ್ರಮುಖ ವಾಣಿಜ್ಯ ಬೆಳೆಯಾದ ಹೊಗೆಸೊಪ್ಪಿಗೆ ಸರಿಯಾಗಿ ಬೆಲೆ ದೊರೆಯುತ್ತಿಲ್ಲ. ಕಾಫಿ, ರೇಷ್ಮೆ, ಸಾಂಬಾರ್, ತೆಂಗು, ಅಡಕೆ ಮಂಡಳಿಗಳ ಸ್ಥಾಪನೆ ಮಾಡಿ ಈ ಭಾಗದ ರೈತರ ಆದಾಯವನ್ನು ದ್ವಿಗುಣಗೊಳಿಸುವುದಾಗಿ ತಿಳಿಸಿದರು.ಈ ಸಂದರ್ಭದಲ್ಲಿ ಮಾಜಿ ಶಾಸಕ ಎಚ್. ಸಿ.ಬಸವರಾಜ್ ತಾಲ್ಲೂಕು ಘಟಕದ ಅಧ್ಯಕ್ಷ ಎಂ.ಎಂ ರಾಜೇಗೌಡ, ಪ್ರಧಾನ ಕಾರ್ಯದರ್ಶಿ, ವೀರಭದ್ರ, ಚಂದ್ರು, ಅರಗು ಮತ್ತು ವಾರ್ನಿಶ್ ನಿಗಮ ಮಂಡಳಿ ಅಧ್ಯಕ್ಷ ರಘು ಕೌಟಿಲ್ಯ, ಹುಣಸೂರು ವಿಧಾನಸಭಾ ಕ್ಷೇತ್ರದ ಅಭ್ಯರ್ಥಿ ಸೋಮಶೇಖರ್ ಮುಖಂಡರಾದ ಕೌಲನಹಳ್ಳಿ ಸೋಮಶೇಖರ್, ಆರ್ ಟಿ ಸತೀಶ್, ಪ್ರಶಾಂತ್ ಗೌಡ, ವಿಕ್ರಮ್ ರಾಜ್ರ, ರವಿ ಪಿ.ಜೆ, ನಾಗರಾಜ್ ಮಲಾಡಿ, ಕಿರಣ್ ಕುಮಾರ್, ರಮೇಶ್, ಮಾಗಳಿ ಸ್ವಾಮಿ, ನಾಗಣ್ಣ ಸೇರಿದಂತೆ ಇತರರು ಹಾಜರಿದ್ದರು.




**ಮಳವಳ್ಳಿ ವಿಧಾನಸಭೆ ಕ್ಷೇತ್ರದಲ್ಲಿ ಬಿಜೆಪಿ ಪಕ್ಷದ ಅಭ್ಯರ್ಥಿಯಾಗಿ ಸ್ಪರ್ಧಿಸಿರುವ ಮುನಿರಾಜ್ ಅವರ ಪರವಾಗಿ ಕಾರ್ಯಕರ್ತರು ಹಲಗೂರು ಸೇರಿದಂತೆ ವಿವಿಧ ಗ್ರಾಮಗಳಲ್ಲಿ ಮನೆ ಮನೆಗೆ ತೆರಳಿ ಮತ ನೀಡುವಂತೆ ಮನವಿ ಮಾಡಿದರು. ಈ ಸಂದರ್ಭದಲ್ಲಿ ಮುಖಂಡರಾದ ಮೋದಿ ರವಿ,ಎನ್.ಕೆ. ಕುಮಾರ್, ಮಹೇಶ, ಶಿವಕುಮಾರ, ಕೃಷ್ಣೆಗೌಡ ಸೇರಿದಂತೆ ಇತರರಿದ್ದರು.**



**ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಪಿ.ಎಂ. ನರೇಂದ್ರಸ್ವಾಮಿ ಅವರ ಪರವಾಗಿ ಪಕ್ಷದ ಕಾರ್ಯಕರ್ತರು ಹಲಗೂರಿನ ವಿವಿಧ ಬಡಾವಣೆಗಳಿಗೆ ತೆರಳಿ ಮತಯಾಚಿಸಿದರು.**

**ಈ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರಾದ ಶಿವಪ್ಪ, ಮಾಜಿ ಗ್ರಾಮ ಪಂಚಾಯಿತಿ ಅಧ್ಯಕ್ಷ ಎಚ್.ವಿ. ರಾಜು,ಎಚ್.ಆರ್. ಪದ್ಮನಾಭ, ಅಶ್ವಿನ್‌ಕುಮಾರ್, ನವೀನ, ಸ್ಯಾಮ್, ಕೆಂಪಯ್ಯ, ಸಿದ್ದಯ್ಯ, ಜೀವನ್‌ಕುಮಾರ್ ಸೇರಿದಂತೆ ಇತರರಿದ್ದರು.**



**ಜೆಡಿಎಸ್ ಪಕ್ಷದ ಮುಖಂಡರಾದ ಎಚ್.ಎನ್. ರಾಮಚಂದ್ರಗೌಡ ಅವರು ಜೆಪಿಎಂ ಬಡಾವಣೆಯಲ್ಲಿ ಜೆಡಿಎಸ್ ಪಕ್ಷ ಅಭ್ಯರ್ಥಿ ಕೆ.ಅನ್ನದಾನಿ ಪರವಾಗಿ ಮತಯಾಚಿಸಿದರು. ಈ ಸಂದರ್ಭದಲ್ಲಿ ಎಚ್.ಎಮ್. ಆನಂದ್ ಕುಮಾರ್, ಸಚಿನ್, ಶಿವಕುಮಾರ್, ಸಿದ್ದಾಚಾರಿ, ಮನು ಸೇರಿದಂತೆ ಇತರರು ಇದ್ದರು.**

# ಸ್ವಗ್ರಾಮದ ಜನತೆ ಋಣ ತೀರಿಸಲು ಸಾಧ್ಯವಿಲ್ಲ



**ಹನೂರು :** ಬಡ ರೈತ ಕುಟುಂಬದಲ್ಲಿ ಜನಿಸಿದ ನನ್ನನ್ನು ಮೂರು ಬಾರಿ ಶಾಸಕರನ್ನಾಗಿ ಮಾಡಲು ಹಗಲಿರುಳು ಶ್ರಮಿಸಿ ನಾಲ್ಕನೇ ಬಾರಿಗೂ ದುಡಿಯುತ್ತಿರುವ ನನ್ನ ಸ್ವಗ್ರಾಮದ ಜನತೆಯ ಋಣವನ್ನು ತೀರಿಸಲು ಎಂದಿಗೂ ಸಾಧ್ಯವಿಲ್ಲ ಎಂದು ಶಾಸಕ ಆರ್. ನರೇಂದ್ರ ತಿಳಿಸಿದರು.

ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಶಾಸಕ ಆರ್. ನರೇಂದ್ರ ರವರ ಸ್ವಗ್ರಾಮ ದೊಡ್ಡಿಂದವಾಡಿ ಗ್ರಾಮದಲ್ಲಿ ಹಮ್ಮಿಕೊಳ್ಳಲಾಗಿದ್ದ ಪ್ರಚಾರ ಕಾರ್ಯಕ್ರಮದಲ್ಲಿ ಮಾತನಾಡಿದರು.

ನಮ್ಮ ಗ್ರಾಮದ ಎಲ್ಲ ಸಮುದಾಯ ವರ್ಗದವರು ನಮ್ಮ ಕುಟುಂಬವನ್ನು ಕಳೆದ 50 ವರ್ಷಗಳಿಂದ ಬೆಂಬಲಿಸುತ್ತಾ ಬಂದಿದ್ದಾರೆ. ನಮ್ಮ ತಂದೆಯವರ ಅಕಾಲಿಕ ನಿಧಾನದ ನಂತರ ಸ್ಪರ್ಧಿಸಿದ ಮೊದಲ ಚುನಾವಣೆಯಲ್ಲಿ ಸೋತರು ಸಹ ನನಗೆ ಧೈರ್ಯ ತುಂಬಿ ಮುನ್ನಡೆಸಿಕೊಂಡು ಬಂದಿದ್ದಾರೆ. ನಮ್ಮ ಗ್ರಾಮದಲ್ಲಿ ಎಲ್ಲ ವರ್ಗದವರು ವಾಸಿಸುವ ಬಡಾವಣೆಗಳಲ್ಲಿ ಕುಡಿಯುವ ನೀರು, ಚರಂಡಿ, ರಸ್ತೆ, ಪ್ರಾಥಮಿಕ ಆರೋಗ್ಯ ಕೇಂದ್ರ ಸೇರಿದಂತೆ ಎಲ್ಲ ರೀತಿಯ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಿದ್ದೇನೆ. ಕಳೆದ ಮೂರು ಚುನಾವಣೆಗಳಲ್ಲಿಯೂ ನನಗೆ ಅತ್ಯಧಿಕ ಮತಗಳನ್ನು ನೀಡಿ ಬೆಂಬಲಿಸಿದ್ದಾರೆ. ಈ ಬಾರಿಯೂ ನಮ್ಮ ಗ್ರಾಮದ ಜನತೆ ಬಡವರ ಪಕ್ಷ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಕಳೆದ ವಿಧಾನಸಭಾ ಚುನಾವಣೆಯಲ್ಲಿ ಜಾದಳ ಅಭ್ಯರ್ಥಿಯಾಗಿದ್ದ ಎಂ. ಆರ್. ಮಂಜುನಾಥ್ ನಾನು ಹನೂರು ವಿಧಾನಸಭಾ ಕ್ಷೇತ್ರದಲ್ಲಿ ಕಾರ್ಖಾನೆ ತೆರೆಯುವುದಾಗಿ ಭರವಸೆ ನೀಡಿದ್ದರು. ಇದೀಗ ನನ್ನನ್ನು ಗೆಲ್ಲಿಸಿದರೆ ಕಾರ್ಖಾನೆ ತರುತ್ತೇನೆ ನಿರುದ್ಯೋಗ ಯುವಕರಿಗೆ ಉದ್ಯೋಗ ಕೊಡುತ್ತೇನೆಂದು ಹೊಸವರಸೆ ತೆಗೆದಿದ್ದಾರೆ. ಡಾ.ಬಾಬಾ ಸಾಹೇಬರ ಸಂವಿಧಾನದ ನಿಯಮಗಳನ್ನು ಅರ್ಥೈಸಿಕೊಂಡು ನಾನು ವಕೀಲ ವೃತ್ತಿಯಿಂದ ನನ್ನ ಜೀವನ ಪ್ರಾರಂಭಿಸಿ ಮತದ ಮೌಲ್ಯ ಏನೆಂಬುದನ್ನು ತಿಳಿದುಕೊಂಡಿದ್ದೇನೆ. ನಾನು ಮತವನ್ನು ಕುದುರೆ ವ್ಯಾಪಾರದಂತೆ 2ಸಾವಿರ 3ಸಾವಿರ ಕ್ಕೆ ಬೆಲೆ ಕಟ್ಟುತ್ತಿಲ್ಲ, ಹಣ ಆಮಿಷಗಳನ್ನು ಒಡ್ಡಿ ಮತ ಪಡೆಯುತ್ತಿಲ್ಲ ನಾನು ಪಕ್ಷದ ನಿಷ್ಠಾವಂತ ಕಾರ್ಯಕರ್ತನಾಗಿ ನಾನು ಮಾಡಿರುವ ಅಭಿವೃದ್ಧಿ ಕಾರ್ಯ ಕ್ರಮಗಳನ್ನು ಮುಂದಿಟ್ಟು, ಮತ ಭಿಕ್ಷೆ ಬೇಡುತ್ತಿದ್ದೇನೆ. ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ದಿ ರಾಜುಗೌಡರವರ ಕಾಲದಲ್ಲಿ 9 ಜಲಾಶಯಗಳನ್ನು ನಿರ್ಮಾಣ ಮಾಡುವ ಮೂಲಕ ರೈತರಿಗೆ ನೆರವಾಗಿದ್ದೇವೆ. ಇದನ್ನು ತಿಳಿದುಕೊಳ್ಳದೇ ನೀರಾವರಿ ಬಗ್ಗೆ ಮಾತನಾಡುತ್ತಾರೆ. ಮೊದಲು ಕ್ಷೇತ್ರದಲ್ಲಿರುವ ಜಲಾಶಯಗಳ ಯಾವ ಕಾಲದಲ್ಲಾಗಿದೆ, ಅಭಿವೃದ್ಧಿ ಯಾರ ಅವಧಿಯಲ್ಲಾಗಿದೆ, ನೀವು ಏನು ಕೊಡುಗೆ ನೀಡಿದ್ದೀರಾ ಎಂಬುದನ್ನು ಸಾಬೀತು ಪಡಿಸಬೇಕು ಎಂದು ಜಾದಳ ಅಭ್ಯರ್ಥಿ ವಿರುದ್ಧ ವಾಗ್ದಾಳಿ ನಡೆಸಿದರು.

**ರಾಜುಗೌಡ ರವರ ಕುಟುಂಬಕ್ಕೆ ಮತ ನೀಡಿ :** ದೊಡ್ಡಿಂದುವಾಡಿ ಗ್ರಾಮದಲ್ಲಿ ಶಾಸಕ ಆರ್. ನರೇಂದ್ರ ಮತ ಪ್ರಚಾರ ನಡೆಸುತ್ತಿದ್ದ ವೇಳೆ ಹಿರಿಯ ವೃದ್ದೆಯೊಬ್ಬರು 50ರೂ 100ರೂ ಮತವನ್ನು ಮಾರಿಕೊಳ್ಳಬೇಡಿ. ರಾಜು ಗೌಡ ಹಾಗೂ ನರೇಂದ್ರನವರ ಹೆಸರು ಹೇಳಿ ಅನ್ನ ತಿನ್ನುತ್ತಿದ್ದೇವೆ ಎಂದಿಗೂ ಮೋಸ ಮಾಡಬೇಡಿ ಎಂದು ಮಾತನಾಡುವ ಮೂಲಕ ಗಮನ ಸೆಳೆದರು.

# ಇದು ನನ್ನ ಕೊನೆ ಚುನಾವಣೆ : ಡಿ.ಸಿ.ತಮ್ಮಣ್ಣ

**ಭಾರತೀನಗರ :** ನನ್ನ ಜೀವನ ತೆರೆದ ಪುಸ್ತಕವಾಗಿದೆ. ನಿಮಗೆಲ್ಲ ನನ್ನ ಬಗ್ಗೆ ಚೆನ್ನಾಗಿ ಗೊತ್ತಿದೆ. ಆದರೆ, ಕ್ಷೇತ್ರದಲ್ಲಿ ನನ್ನ ವಿರುದ್ಧ ಇಲ್ಲಸಲ್ಲದ ಅಪಪ್ರಚಾರ ಮಾಡುತ್ತಿರುವವರಿಗೆ ಚುನಾವಣೆಯಲ್ಲಿ ಜನತೆ ತಕ್ಕ ಪಾಠ ಕಲಿಸ್ತಾರೆ ಎಂದು ಮದ್ದೂರು ಕ್ಷೇತ್ರದ ಜೆಡಿಎಸ್ ಅಭ್ಯರ್ಥಿ ಶಾಸಕ ಡಿ.ಸಿ.ತಮ್ಮಣ್ಣ ವಿರೋಧಿಗಳಿಗೆ ಟಾಂಗ್ ನೀಡಿದರು.

ಮದ್ದೂರು ವಿಧಾನ ಸಭಾ ಕ್ಷೇತ್ರದ ಅಜ್ಜಹಳ್ಳಿ, ತೊರೆಚಾಕನಹಳ್ಳಿ, ಕ್ಯಾತಘಟ್ಟ, ಗುರುದೇವರಹಳ್ಳಿ, ಚಿಕ್ಕರಸಿನಕೆರೆ, ಸೇರಿದಂತೆ ವಿವಿಧ ಗ್ರಾಮಗಳಲ್ಲಿ ಚುನಾವಣಾ ಪ್ರಚಾರ ನಡೆಸಿದ ಶಾಸಕ ತಮ್ಮಣ್ಣ ಇದು ನನ್ನ ಕೊನೆ ಚುನಾವಣೆಯಾಗಿದ್ದು, ಇದೊಂದು ಬಾರಿ ನನ್ನನ್ನು ಬೆಂಬಲಿಸುವಂತೆ ಮತದಾರರ ಬಳಿ ಮನವಿ ಮಾಡಿದರು.

ನಾನು ಸರ್ಕಾರಿ ಅಧಿಕಾರಿಯಾಗಿ ಮತ್ತು ಸುಮಾರು 23 ವರ್ಷಗಳಿಂದ ರಾಜಕೀಯ ಜೀವನದಲ್ಲಿ ಯಾವುದೇ ಕಪ್ಪು ಚುಕ್ಕೆಯಿಲ್ಲದೆ ನಿಮ್ಮಗಳ ಸೇವೆ ಮಾಡುತ್ತ ಬಂದಿದ್ದೇನೆ. ಜನ ಸೇವೆಗಾಗಿಯೇ ನನ್ನ ಜೀವನವನ್ನು ಮುಡಿಪಾಗಿಟ್ಟಿದ್ದೇನೆ. ಮದ್ದೂರು ಕ್ಷೇತ್ರವನ್ನು ಇತಿಹಾಸದಲ್ಲೆ ಕಂಡು ಕೇಳರಿಯದ ರೀತಿಯಲ್ಲಿ ಅಭಿವೃದ್ಧಿ ಮಾಡಿದ್ದೀನಿ ಅನ್ನೋ ತೃಪ್ತಿ ನನಗಿದೆ




ಹೀಗಾಗಿ ಈ ಬಾರಿ ಇನ್ನೊಮ್ಮೆ ಅವಕಾಶ ಕೊಟ್ಟರೆ ಕ್ಷೇತ್ರವನ್ನು ಇನ್ನಷ್ಟು ಅಭಿವೃದ್ಧಿ ಮಾಡುವುದಾಗಿ ಎಂದು ಶಾಸಕ ತಮ್ಮಣ್ಣ ಮತದಾರರಿಗೆ ತಿಳಿಸಿದರು. ಕ್ಷೇತ್ರದ ಇನ್ನಷ್ಟು ಅಭಿವೃದ್ಧಿ ದೃಷ್ಟಿಯಿಂದ ಉದ್ದೇಶದಿಂದ ನಾನು ಮತ್ತೆ ಚುನಾವಣೆಯಲ್ಲಿ ಸ್ಪರ್ಧಿಸುವ ಇಂಗಿತ ವ್ಯಕ್ತಪಡಿಸಿದ್ದೇನೆ ಎಂದರು.

ನಂತರ ಮಾತನಾಡಿದ ಮಾಜಿ ಜಿಲ್ಲಾ ಪಂಚಾಯತ ಸದಸ್ಯ ಗುರುಚರಣ್ ಈ ಬಾರಿ ಜೆಡಿಎಸ್ ಪಕ್ಷ ಬಹುಮತದೊಂದಿಗೆ ಅಧಿಕಾರಕ್ಕೆ ಬರಲಿದ್ದು, ರಾಜ್ಯದ ಅಭಿವೃದ್ಧಿಗೆ ಪೂರಕವಾದ ಯೋಜನೆಗಳನ್ನು ಕುಮಾರಸ್ವಾಮಿ ಅವರು ಜಾರಿಗೆ ತರಲಿದ್ದಾರೆ ಎಂದು ಹೇಳಿದರು. ಪ್ರಣಾಳಿಕಿಯಲ್ಲಿ ತಿಳಿಸಿರುವ ಅಷ್ಟು ಯೋಜನೆಗಳನ್ನು ಅಧಿಕಾರ ಬಂದ 24ಗಂಟೆ ಒಳಗೆ ಕಾರ್ಯರೂಪಕ್ಕೆ ತರಲಾಗುವುದು ಎಂದರು.

ಇದೇ ವೇಳೆ ಜೆಡಿಎಸ್ ಕಾರ್ಯಾಧ್ಯಕ್ಷ ಮಾದನಾಯಕನಹಳ್ಳಿ ರಾಜಣ್ಣ, ಜೆಡಿಎಸ್ ತಾಲೂಕು ಅಧ್ಯಕ್ಷ ಹಾಗಲಹಳ್ಳಿ ಚಿಕ್ಕತಿಮ್ಮೇಗೌಡ,ಮುಖಂಡರಾದ ಕರಡಕೆರೆ ಹನುಮಂತು,ಗುರುದೇವರಹಳ್ಳಿ ಅರವಿಂದ್, ಟಿಎಪಿಸಿಎಂಎಸ್ ನಿರ್ದೇಶಕ ಕೂಳಗೆರೆ ಶೇಖರ್ ಮುಖಂಡರಾದ ಕೆಂಗಲ್ ಗೌಡ, ಮತ್ತಿತರರು ಇದ್ದರು.

# 30-40 ಕ್ಷೇತ್ರ ಸೋಲು

## ಎಚ್.ಡಿ ಕುಮಾರಸ್ವಾಮಿ ಆತಂಕ



**ಮೈಸೂರು :** ದುಡ್ಡಿನ ಕೊರತೆಯಿಂದ ನಾನು 30-40 ಕ್ಷೇತ್ರ ಸೋಲುತ್ತೇನೆ ಎಂದು ಮಾಜಿ ಸಿಎಂ ಎಚ್.ಡಿ.ಕುಮಾರಸ್ವಾಮಿ ಹೇಳಿದರು.

ಜಿಲ್ಲೆಯ ತಿ.ನರಸೀಪುರದಲ್ಲಿ ಜೆಡಿಎಸ್ ಅಭ್ಯರ್ಥಿ ಅಶ್ವಿನ್‌ಕುಮಾರ್ ಪರವಾಗಿ ಮತಯಾಚಿಸಿ ಅವರು ಮಾತನಾಡಿದರು. ಬಜೆಪಿ, ಕಾಂಗ್ರೆಸ್ ರೀತಿ ದುಡ್ಡು ಇದ್ದರೆ 150-160 ಕ್ಷೇತ್ರ ಗೆಲ್ಲುತ್ತಿದ್ದೆ. ಸುಮಾರು 30 ಕ್ಷೇತ್ರಗಳಲ್ಲಿ 500ರಿಂದ 3000 ಸಾವಿರ ವೋಟಿನಲ್ಲಿ ಅಂತರದಲ್ಲಿ ಸೋಲುತ್ತೇವೆಂದರು.

ಅಶ್ವಿನ್ ಕುಮಾರ್ ಬಳಿ ಹಣ ಇಲ್ಲ. ನಾನು ಕೊಡೋದು ಯಾವುದಕ್ಕೂ ಸಾಲೋದಿಲ್ಲ. ಕಾಂಗ್ರೆಸ್‌ನವರಷ್ಟು ದುಡ್ಡಿಗೆ ಅಶ್ವಿನ್ ಮ್ಯಾಚ್ ಮಾಡಲಾರ. ನಾವೂ ಅಷ್ಟೋ ಇಷ್ಟೋ ದುಡ್ಡು ಕೊಡಬಹುದು. ತಿ.ನರಸೀಪುರದಲ್ಲಿ ಪಂಚರತ್ನ ಯಾತ್ರೆ ಮಾಡಿದ್ದೇನೆ. ದೇವೇಗೌಡರು ಬಂದು ಮತ ಕೇಳಿದ್ದಾರೆ. ನನ್ನ ಅವಶ್ಯತೆ ಇರಲಿಲ್ಲ. ಕಾಂಗ್ರೆಸ್ ಅಭ್ಯರ್ಥಿಗೆ ದುಡ್ಡಿಗೆ ಕೊರತೆ ಇಲ್ಲ. ದುಡ್ಡಿಗೆ ಜನ ಮರಳಾಗಲ್ಲ ಎಂದರು. ನಾನು ಬರದೇ ಇದ್ದರೂ ಗೆಲ್ಲುತ್ತೀಯ ಅಂತ ಹೇಳಿದ್ದೆ, ನೀನು ಮನೆ ಮಗನಂತೆ ಇದ್ದೀಯ. ಅದೇ ರೀತಿ ಜೀವನ ಪೂರ್ತಿ ಹೀಗೆ ಇರು.

# ವಿಂಟೇಜ್ ಕಾರು, ಟಾಂಗಾ ಜಾಥಾ

## ಮತದಾನ ಮಾಡುವ ಮೂಲಕ ಪ್ರಜಾಪ್ರಭುತ್ವದ ಹಬ್ಬ ಆಚರಿಸಿ : ಡಾ.ಕೆ.ವಿ ರಾಜೇಂದ್ರ

**ಮೈಸೂರು :** ಮೇ 10 ರಂದು ನಡೆಯಲಿರುವ ಸಾರ್ವತ್ರಿಕ ವಿಧಾನಸಭೆ ಚುನಾವಣೆಯಲ್ಲಿ ಮತದಾನ ಮಾಡುವ ಮೂಲಕ ಪ್ರಜಾಪ್ರಭುತ್ವದ ಹಬ್ಬ ಆಚರಿಸಿ ಎಂದು ಜಿಲ್ಲಾಧಿಕಾರಿಗಳಾದ ಡಾ ಕೆ.ವಿ.ರಾಜೇಂದ್ರ ಅವರು ತಿಳಿಸಿದರು.

ಇಂದು ನಗರದಲ್ಲಿನ ಕೋಟೆ ಆಂಜನೇಯ ಸ್ವಾಮಿ ದೇವಸ್ಥಾನದ ಮುಂಭಾಗದಲ್ಲಿ ಸ್ವೀಪ್ ವತಿಯಿಂದ ಆಯೋಜಿಸಲಾಗಿದ್ದ ವಿಂಟೇಜ್ ಕಾರು ಮತ್ತು ಟಾಂಗಾ ಜಾಥಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಚುನಾವಣಾ ಅಕ್ರಮಗಳನ್ನು ತಡೆಯುವ ನಿಟ್ಟಿನಲ್ಲಿ ಈಗಾಗಲೇ ಹಲವು ಕ್ರಮಗಳನ್ನು ಕೈಗೊಳ್ಳಲಾಗಿದ್ದು ಮತದಾರರು ಯಾವುದೇ ಆಮಿಷಗಳಿಗೆ ಒಳಗಾಗದೆ ನೈತಿಕ ಮತದಾನ ಮಾಡುವ ಮೂಲಕ ದೇಶದ ಭವಿಷ್ಯವನ್ನು ಕಾಪಾಡಿಕೊಳ್ಳಬೇಕು ಎಂದು ತಿಳಿಸಿದರು.

ಚುನಾವಣೆಯಂದು ಸಾರ್ವತ್ರಿಕ ರಜೆ ಇರುವ ಕಾರಣ ಅಂದು ಮನೆಯಲ್ಲಿಯೇ ಕೂರದೆ ಪ್ರತಿಯೊಬ್ಬರೂ ಮತದಾನದಲ್ಲಿ ಪಾಲ್ಗೊಳ್ಳಬೇಕು ಹಾಗೂ 80 ವರ್ಷ ಮೇಲ್ಪಟ್ಟವರಿಗೆ ಮತದಾನ ಪ್ರಕ್ರಿಯೆ ಈಗಾಗಲೇ ಆರಂಭಗೊಂಡಿದ್ದು ವಯಸ್ಸಾದವರು ಮತದಾರರು ಮತಗಟ್ಟೆಗೆ ಬರಲಾಗದಿದ್ದರೆ ಅಂಥವರಿಗೆ ವಾಹನದ ವ್ಯವಸ್ಥೆ ಬೇಕಿದ್ದಲ್ಲಿ ಬೂತ್ ಮಟ್ಟದ ಅಧಿಕಾರಿಗಳನ್ನು ಸಂಪರ್ಕಿಸಬಹುದು ಎಂದು ತಿಳಿಸಿದರು.

ರಾಜ್ಯದಲ್ಲಿ ಮೈಸೂರು ತನ್ನ ಸಾಂಸ್ಕೃತಿಕತೆಯಿಂದ ಹೆಸರುವಾಸಿಯಾಗಿದ್ದು, ಇಂದಿಗೂ ಹೆಚ್ಚಾಗಿ ಟಾಂಗಾ ಗಾಡಿಗಳ



ಬಳಕೆ ನಗರದಲ್ಲಿದೆ. ವಿಟೇಂಜ್ ಕಾರು ಗಳ ಪ್ರಾಮುಖ್ಯತೆ ಹಾಗೂ ಪರಿಸರಕ್ಕೆ ಹಾನಿಯಾಗದ ರೀತಿ ಅವುಗಳ ಮರುಬಳಕೆ ಬಗ್ಗೆ ಅರಿವನ್ನ ಹೊಂದಿರಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ನಗರ ಪೊಲೀಸ್ ಆಯುಕ್ತರಾದ ರಮೇಶ್ ಬಾನೋತ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಾದ ಕೆ.ಎಂ.ಗಾಯಿತ್ರಿ ,ನಗರ ಪಾಲಿಕೆ ಆಯುಕ್ತರಾದ ಲಕ್ಷ್ಮಿಕಾಂತ ರೆಡ್ಡಿ, ಪ್ರಾಚ್ಯ ವಸ್ತು ಸಂಗ್ರಹಾಲಯ ಇಲಾಖೆಯ ಆಯುಕ್ತರಾದ ದೇವರಾಜು ಹಾಗೂ ಅಂತರಾಷ್ಟ್ರೀಯ ಯೋಗಪಟುವಾದ ಖುಷಿ ಅವರು ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಕಾಂಗ್ರೆಸ್ ಕಾರ್ಯಕರ್ತರ ಕ್ಷಮೆಯಾಚಿಸಿದ ಸುಮಲತಾ

## ಕಾಂಗ್ರೆಸ್ ಪಕ್ಷಕ್ಕೆ ನನಗೆ ಆಹ್ವಾನವಿರಲಿಲ್ಲ



**ಮಂಡ್ಯ :** ನಾಗಮಂಗಲದಲ್ಲಿ ಚುನಾವಣಾ ಪ್ರಚಾರಕ್ಕೆ ತೆರಳಿದ್ದ ವೇಳೆ ಸಂಸದೆ ಸುಮಲತಾ ಕಾಂಗ್ರೆಸ್ ಕಾರ್ಯಕರ್ತರ ಬಳಿ ಕ್ಷಮೆಯಾಚಿಸಿದ್ದಾರೆ.

ಬಿಜೆಪಿಗೆ ಬೆಂಬಲ ನೀಡಿದ ವಿಚಾರವಾಗಿ ಮಾತನಾಡಿದ ಸುಮಲತಾ, ನನ್ನ ನಡೆಯಿಂದ ಕಾಂಗ್ರೆಸ್ ಕಾರ್ಯಕರ್ತರಿಗೆ ಬೇಸರ ತರಿಸಿದ್ರೆ, ನೋವುಂಟು ಮಾಡಿದ್ರೆ ಕ್ಷಮೆಯಾಚಿಸುತ್ತೇನೆ. ಆದರೆ ನಿಮ್ಮ ನಾಯಕರ ನಡೆಗೆ ನಾನು ಹೊಣೆ ಅಲ್ಲ ಎಂದು ಭಾವುಕವಾಗಿ ಮಾತನಾಡಿದ್ದಾರೆ.

ನಿಮ್ಮ ರಾಜ್ಯಾಧ್ಯಕ್ಷರು ನನ್ನ ಬಗ್ಗೆ ಕೊಟ್ಟಿರುವ ಹೇಳಿಕೆಗಳನ್ನು ಗಮನಿಸಿ. ಆ ನಂತರ ನನ್ನ ನಿರ್ಧಾರ ಬಗ್ಗೆ ಪ್ರಶ್ನೆ ಮಾಡಿ ಎಂದ ಅವರು, ಬಿಜೆಪಿ ಪಕ್ಷದ ಅತ್ಯಂತ ಗೌರವದಿಂದ ಆಹ್ವಾನಿಸಿದರು ಎಂದು ತಿಳಿಸಿದ್ದಾರೆ.

**ರಸ್ತೆಗೆ ಅಂಬರೀಶ್ ಹೆಸರಿಟ್ಟಿದ್ದು ಬಿಜೆಪಿ :** ನೀವು ಪಕ್ಷಕ್ಕೆ ಬಂದ್ರೆ ನಮಗೆ ಶಕ್ತಿ ಸಿಗಲಿದೆ ಎಂಬ ಮಾತು ಹೇಳಿದ್ರು. ಬಿಜೆಪಿ ಸರ್ಕಾರ ಬೆಂಗಳೂರು ? ಮೈಸೂರಲ್ಲಿ ರಸ್ತೆಗೆ ಅಂಬರೀಶ್ ಹೆಸರಿಟ್ಟಿದ್ದಾರೆ. 12 ಕೋಟಿ ವೆಚ್ಚದಲ್ಲಿ ಸುಂದರ ಸ್ಮಾರಕ ನಿರ್ಮಿಸಿದ್ದಾರೆ. ಅಂಬರೀಶ್ ಅವರು ಬಿಜೆಪಿ ಪಕ್ಷದಲ್ಲಿದ್ರಾ? 27 ವರ್ಷ ಕಾಂಗ್ರೆಸ್ ಸೇವೆ ಸಲ್ಲಿಸಿದ್ದಾರೆ. ಈ ನಡುವೆ ಜೆಡಿಎಸ್‌ನ ಹಲವರು ಅಂಬರೀಶ್ ಆತ್ಮೀಯರು ಎಂದು ಹೇಳಿಕೊಂಡು ಓಡಾಡ್ತಿದ್ದಾರೆ. ಆತ್ಮೀಯತೆ ಇದ್ದಮೇಲೆ ಅಧಿಕಾರದಲ್ಲಿದ್ದಾಗ ಇವರೇಕೆ ಸ್ಮಾರಕ ಮಾಡುವ ಕೆಲಸ ಮಾಡಲಿಲ್ಲ ಎಂದು ಪ್ರಶ್ನಿಸಿದ್ದಾರೆ.

ಅಂಬರೀಶ್‌ಗೆ ಸ್ವಾಭಿಮಾಣ ಇತ್ತು: ಅಂಬರೀಶ್ ಅವರಿಗೆ ಕೊನೆಯ ಎರಡು ವರ್ಷ ಕಾಂಗ್ರೆಸ್ ಅವಮಾನದಿಂದ ನಡೆಸಿಕೊಂಡಿದೆ. ಅದಕ್ಕೆಲ್ಲಾ ನಾನೇ ಸಾಕ್ಷಿ. ಅವಮಾನ ಆಗಿದ್ದರಿಂ ದ ಚುನಾವಣೆಗೆ ನಿಲ್ಲಬಾರದು ಎಂದು 2018ರಲ್ಲಿ ಬಿ-ಫಾರಂ ಎಸೆದಿದ್ದರು. ಅಂತಹ ಸ್ವಾಭಿಮಾನ ಅಂಬರೀಶ್ ಅವರಿಗೆ ಇತ್ತು ಎಂದು ಗುಡುಗಿದ್ದಾರೆ.

# ಈ ಬಾರಿ ಕಾಂಗ್ರೆಸ್‌ಗೆ ಅಧಿಕಾರ ಖಚಿತ

## ಕಾಂಗ್ರೆಸ್ ಮುಖಂಡ ಜಯರಾಮ್ ರಮೇಶ್




**ಮೈಸೂರು :** ಈ ಬಾರಿ ಜನ ನಮ್ಮ ಬಳಿ ಇದ್ದಾರೆ. ಈ ಬಾರಿ ಕಾಂಗ್ರೆಸ್ ಅಧಿಕಾರಕ್ಕೆ ಬಂದೆ ಬರುತ್ತದೆ ಎಂದು ಕಾಂಗ್ರೆಸ್ ಹಿರಿಯ ಮುಖಂಡ ಜಯರಾಮ್ ರಮೇಶ್ ಹೇಳಿದರು.

ನಗರದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಹುಲ್‌ಗಾಂಧಿಯವರ ಭಾರತಜೋಡೋ ಯಾತ್ರೆಯಿಂದಲೇ ಕಾಂಗ್ರೆಸ್‌ಗೆ ಡಬಲ್ ಇಂಜಿನ್ ಸಿಕ್ಕಿದಂತೆ ಆಗಿದೆ. ಡಬಲ್ ಇಂಜಿನ್ ಸರ್ಕಾರವನ್ನು ಹೋಗಲಾಡಿಸಿ. ಕಾಂಗ್ರೆಸ್ ಬೆಂಬಲಿಸಿ. ಡಬಲ್ ಎಂಜಿನ್ ಎಂದರೆ ಕೇಂದ್ರದಲ್ಲೂ ಬಿಜೆಪಿ, ರಾಜ್ಯ ದಲ್ಲೂ ಬಿಜೆಪಿ ಎಂಬ ಅರ್ಥ ನೀಡುತ್ತದೆ. ಇದು ಮೋದಿ ಸರಕಾರವಲ್ಲ ಇದು ಬೆಂಗಳೂರುನಲ್ಲಿ ಯಾವ ಸರಕಾರ ಮಾಡುತ್ತಾರೆ ಅದು ಸರಕಾರವಾಗಿದೆ. ಸಾಮಾಜಿಕ ದೃಡೀಕರಣ ನಮಗೆ ಬೇಡ ನಮ್ಮಲ್ಲಿ 5 ಮುಖ್ಯ ನಾಯಕರು ಎಲ್ಲ ಕ್ಷೇತ್ರಗಳನ್ನು ಪ್ರಚಾರವನ್ನು ಮಾಡುತ್ತಿದ್ದಾರೆ. ನಮ್ಮ ಪಾರ್ಟಿಯಲ್ಲಿ ಟಿಕೆಟ್ ಕೇಳುವವರು ದುಡ್ಡನ್ನು ಕಟ್ಟಾಬೇಕು, ಆದರೆ, ಇದು ಬಿಜೆಪಿಯಲ್ಲಿ ಜಾಸ್ತಿ ಇದೆ. ಅನ್ನಭಾಗ್ಯ, ಗೃಹಜ್ಯೋತಿ, ಗೃಹಲಕ್ಷ್ಮಿ, ಉಚಿತ ಬಸ್ ಪಾಸ್ ಅನ್ನು ನೀಡಲಾಗುವುದು ಎಂದರು. ಕಾಂಗ್ರೆಸ್ ಜಿಲ್ಲಾಧ್ಯಕ್ಷ ವಿಜಯಕುಮಾರ್, ನಗರಾಧ್ಯಕ್ಷ ಮೂರ್ತಿ ಇದ್ದರು.

# ಮಣಿಪುರದಲ್ಲಿ ಹಿಂಸಾಚಾರ; ಅಮಿತ್ ಶಾ ವಾಪಸ್

**ಬೆಂಗಳೂರು :** ಮಣಿಪುರದಲ್ಲಿ ಹಿಂಸಾಚಾರ ಭುಗಿಲೆದ್ದಿರುವ ಹಿನ್ನೆಲೆಯಲ್ಲಿ ರಾಜ್ಯದಲ್ಲಿ ಶುಕ್ರವಾರದ ಚುನಾವಣಾ ಪ್ರಚಾರವನ್ನು ರದ್ದುಪಡಿಸಿದ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ದೆಹಲಿಗೆ ತೆರಳಿದ್ದಾರೆಂದು ತಿಳಿದುಬಂದಿದೆ.



ಏಪ್ರಿಲ್ 25ರಿಂದ ಅಮಿತ್ ಶಾ ಅವರು ರಾಜ್ಯದಲ್ಲಿ ವ್ಯಾಪಕ ಪ್ರಚಾರ ನಡೆಸಿದ್ದರು. ಚುನಾವಣೆಗೆ ಕೆಲವೇ ದಿನಗಳು ಬಾಕಿ ಇರುವ ಹಿನ್ನೆಲೆಯಲ್ಲಿ ಮತ್ತಷ್ಟು ಪ್ರಚಾರ ನಡೆಸಲು ಮುಂದಾಗಿದ್ದರು.

ಆದರೆ ಮಣಿಪುರದಲ್ಲಿ ಹಿಂಸಾಚಾರ ತೀವ್ರಗೊಂಡಿರುವ ಹಿನ್ನೆಲೆಯಲ್ಲಿ ರಾಜ್ಯದಲ್ಲಿನ ಪ್ರಚಾರ ಕಾರ್ಯಕ್ರಮಗಳ ರದ್ದುಪಡಿದ್ದಾರೆ ಎನ್ನಲಾಗಿದೆ.

ಮೇಟಿ ಸಮುದಾಯದವರನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಸುವಂತೆ ಮಣಿಪುರ ಹೈಕೋರ್ಟ್ ಆದೇಶದ ವಿರುದ್ಧ ಮಣಿಪುರ ರಾಜ್ಯದಲ್ಲಿ ಹಿಂಸಾತ್ಮಕ ಪ್ರತಿಭಟನೆಗಳು ಭುಗಿಲೆದ್ದಿದೆ.

ಕೇಂದ್ರವು ಮಣಿಪುರ ರಾಜ್ಯಕ್ಕೆ ಹೆಚ್ಚುವರಿ ಪಡೆಗಳನ್ನು ಕಳುಹಿಸುತ್ತಿದೆ. ಭಾರತೀಯ ವಾಯುಪಡೆಯು (ಐಎಎಫ್) ಅಸ್ಸಾಂನ ಗುವಾಹಟಿ ಮತ್ತು ತೇಜ್‌ಪುರದಿಂದ ಪಡೆಗಳನ್ನು ಏರ್ಲಿಫ್ಟ್ ಮಾಡುತ್ತದೆ. ಮಾಜಿ ಸಿಆರ್‌ಪಿಎಫ್ ಮುಖ್ಯಸ್ಥ ಕುಲದೀಪ್ ಸಿಂಗ್ ಅವರನ್ನು ಮಣಿಪುರದ ಭದ್ರತಾ ಸಲಹೆಗಾರರನ್ನಾಗಿ ನೇಮಿಸಲಾಗಿದೆ ಮತ್ತು ಹಿರಿಯ ಐಪಿಎಸ್ ಅಧಿಕಾರಿ ಅಶುತೋಷ್ ಸಿನ್ಹಾ ಅವರು ರಾಜ್ಯದಲ್ಲಿ ಶಾಂತಿ ಮರುಸ್ಥಾಪನೆ ಕಾರ್ಯಾಚರಣೆಗಳ ಮೇಲ್ವಿಚಾರಣೆಯ ಒಟ್ಟಾರೆ ಕಮಾಂಡರ್ ಆಗಿ ನೇಮಕಗೊಂಡಿದ್ದಾರೆ.

# ಪ್ರತಾಪ್ ಸಿಂಹಗೆ ಟ್ವೀಟ್‌ಗೆ ಪ್ರಕಾಶ್ ರಾಜ್ ತಿರುಗೇಟು

**ಮೈಸೂರು :** ಚಿತ್ರನಟ ಶಿವರಾಜ್ ಕುಮಾರ್ ಅವರು ವರುಣ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಸಿದ್ದರಾಮಯ್ಯ ಪರವಾಗಿ ಪ್ರಚಾರ ನಡೆಸಿದ್ದಕ್ಕೆ ಆಕ್ಷೇಪ ವ್ಯಕ್ತಪಡಿಸಿ ಸಂಸದ ಪ್ರತಾಪ ಸಿಂಹ ಮಾಡಿರುವ ಟ್ವೀಟ್‌ಗೆ ನಟ ಪ್ರಕಾಶ್ ರಾಜ್ ತಿರುಗೇಟು ನೀಡಿದ್ದಾರೆ.

'ಪುನೀತ್ ರಾಜಕುಮಾರ್ ಸರ್ ಹೆಸರಿನಲ್ಲಿ ಬಡವರಿಗಾಗಿ ಆಸ್ಪತ್ರೆ ಕಟ್ಟಿದ ಸೋಮಣ್ಣ, ಮನಮೆಚ್ಚಿ ಶ್ಲಾಘಿಸಿದ ರಾಘಣ್ಣ, ಸಿದ್ರಾಮಣ್ಣ ಪರವಾಗಿ ಪ್ರಚಾರಕ್ಕಿಳಿದ ಶಿವಣ್ಣ!

ಅವರವ ಭಾವ ಭಕುತಿಗೆ...' ಎಂದು ಸಂಸದ ಪ್ರತಾಪ ಸಿಂಹ ಟ್ವೀಟ್ ಮಾಡಿದ್ದರು. ಒಂದೆಡೆ ರಾಘವೇಂದ್ರ ರಾಜ್‌ಕುಮಾರ್ ಅವರು ಸೋಮಣ್ಣ ಅವರನ್ನು ಹೊಗಳುವ ವಿಡಿಯೊ, ಇನ್ನೊಂದೆಡೆ ಸಿದ್ದರಾಮಯ್ಯ ಪರವಾಗಿ ಪ್ರಚಾರ ಮಾಡುತ್ತಿರುವ ಶಿವರಾಜ್ ಕುಮಾರ್ ಫೋಟೊ ಹಾಕಿದ್ದರು.

ಇದಕ್ಕೆ ಟ್ವೀಟ್ ಮೂಲಕವೇ ಪ್ರತಿಕ್ರಿಯಿಸಿರುವ ಪ್ರಕಾಶ್ ರಾಜ್, ನಿಮ್ಮ ಹೊಲಸು ರಾಜಕಾರಣಕ್ಕೆ.. ನಮ್ಮೆಲ್ಲರ ಅಪ್ಪು ಅವರನ್ನ ಯಾಕ್ ಎಳೀತೀರ್ರಿ @mepratap ಅವರೆ .. ಛಿ ಛೀ .. ಇದು ತುಂಬಾ ದೊಡ್ಡ ತಪ್ಪು .. ಮಾಡ್ಬೇಡಿ... #justasking ಎಂದು ಹಾಕಿದ್ದಾರೆ.

# ಎಲ್‌ಕೆಜಿ ಪ್ರವೇಶಕ್ಕೆ 4 ವರ್ಷ ಕಡ್ಡಾಯ

**ಬೆಂಗಳೂರು :** ಮಕ್ಕಳ ಎಲ್‌ಕೆಜಿ ಪ್ರವೇಶಕ್ಕೆ ನಾಲ್ಕು ವರ್ಷ ವಯೋಮಿತಿ ನಿಗದಿಪಡಿಸಿ ಶಿಕ್ಷಣ ಇಲಾಖೆ ಆದೇಶ ಹೊರಡಿಸಿದೆ. 2025- 26ನೇ ಸಾಲಿನ ಶೈಕ್ಷಣಿಕ ವರ್ಷದಿಂದ ಒಂದನೇ ತರಗತಿ ಪ್ರವೇಶಕ್ಕೆ 6 ವರ್ಷ ಪೂರ್ಣಗೊಂಡಿರುವುದು ಕಡ್ಡಾಯ ಮಾಡಲಾಗಿದೆ. ಒಂದನೇ ತರಗತಿಗೆ 6 ವರ್ಷ ತುಂಬಿರಬೇಕು ಎಂಬ ಕಡ್ಡಾಯ ನಿಯಮದ ಹಿನ್ನಲೆಯಲ್ಲಿ ಪೂರ್ವ ತಯಾರಿಯಾಗಿ ಈ ವರ್ಷದಿಂದ ಎಲ್‌ಕೆಜಿ ದಾಖಲಾತಿಗೆ 4 ವರ್ಷ ನಿಗದಿ ಪಡಿಸಲಾಗಿದೆ.

# ವರುಣ ವಿಧಾನಸಭಾ ಕ್ಷೇತ್ರದಲ್ಲಿ ಸಿದ್ದರಾಮಯ್ಯ ಗೆಲ್ಲುವ ವಿಶ್ವಾಸ

**ಮೈಸೂರು :** ವಿರೋಧ ಪಕ್ಷದ ನಾಯಕ ಸಿದ್ದರಾಮಯ್ಯ ಸಿಎಂ ಆಗಿದ್ದ ವೇಳೆ ಹಲವಾರು ಅಭಿವೃದ್ಧಿ ಕಾರ್ಯಗಳನ್ನು ಮಾಡಿ, ಬಡವರು, ಮಹಿಳೆಯರು, ದೀನದಲಿತರು ಮೊದಲಾದವರಿಗಾಗಿ ಅನ್ನಭಾಗ್ಯ ಸೇರಿದಂತೆ ಹಲವು ಭಾಗ್ಯಗಳ ಯೋಜನೆ ಮೂಲಕ ಅಭಿವೃದ್ಧಿಗೆ ಶ್ರಮಿಸಿದ್ದಾರೆ. ಹೀಗಾಗಿ ವರುಣ ವಿಧಾನಸಭಾ ಕ್ಷೇತ್ರದಲ್ಲಿ ಖಂಡಿತವಾಗಿಯೂ ಗೆಲುವು ಸಾಧಿಸಲಿದ್ದಾರೆಂದು ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಮಾಜಿ ಅಧ್ಯಕ್ಷ ಎಸ್.ಪಿ.ಶೇಷಾದ್ರಿ ವಿಶ್ವಾಸ ವ್ಯಕ್ತಪಡಿಸಿದರು.

ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಸಿದ್ದರಾಮಯ್ಯ ಅವರನ್ನು ಸೋಲಿಸಲು ಬಿಜೆಪಿ ಏನೋನೋ ಕುತಂತ್ರ ಮಾಡುತ್ತಿದೆ. ಅದು ಸಾಧ್ಯವಿಲ್ಲ. ರಾಜ್ಯದಲ್ಲಿ ಎಲ್ಲಿ ಬೇಕಾದರೂ ನಿಂತು ಗೆಲ್ಲಬಹುದಾದ ಸಾಮರ್ಥ್ಯ ಸಿದ್ದರಾಮಯ್ಯ ಅವರಿಗಿದೆ. ಆ ಸ್ವಾತಂತ್ರ್ಯ ಎಲ್ಲರಿಗೂ ಇರುತ್ತದೆ. ಆದರೆ, ಬಿಜೆಪಿ ದ್ವೇಷ ಮತ್ತು ತಲ್ಲಣಗೊಂಡು, ಮಾಜಿ ಸಚಿವ ಸೋಮಣ್ಣ ಅವರನ್ನು ಸಿದ್ದರಾಮಯ್ಯ ವಿರುದ್ಧ ಒತ್ತಾಯವಿಂದ ನಿಲ್ಲಿಸಿರುವುರಿಂದ ಯಾವುದೇ ಆತಂಕದ ಅಗತ್ಯವಿಲ್ಲ ಎಂದರು.

ವರುಣಾ ಕ್ಷೇತ್ರದ ಎಲ್ಲಾ ಹಳ್ಳಿಗಳಿಗೂ ಶಾಶ್ವತ ಕುಡಿಯುವ ನೀರಿನ ಯೋಜನೆ ಮತ್ತು ರೈತ ವರ್ಗಕ್ಕೂ ಸಹ ವರುಣಾ ನಾಲೆಯಿಂದ ನೀರಿನ ಅನುಕೂಲ ಮಾಡಿದ್ದಾರೆ. ಬಿಜೆಪಿಯ ದುರಾಡತಕ್ಕೆ ಬೇಸತ್ತು. ಬಿಜೆಪಿಯವರು ಭ್ರಷ್ಟಾಚಾರದ ಮುಖ ಈಗಾಗಲೇ ಅನಾವರಣಗೊಂಡಿದೆ. ಬೆಲೆ ಏರಿಕೆಯಿಂದ ಜನರು ತತ್ತರಿಸಿದ್ದಾರೆ. ಕೋಮುವಾದ ಭಾವನೆಗಳಿಗೆ ಬೇಸತ್ತಿದ್ದಾರೆ. ಉದ್ಯೋಗದಲ್ಲಿರುವ ಯುವಕರು ಹತಾಶರಾಗಿದ್ದಾರೆ. ರಾಜ್ಯಾದ್ಯಂತ ಆಡಳಿತ ವಿರೋಧಿ ಅಲೆ ಇದೆ. ಹೀಗಾಗಿ ಸಿದ್ದರಾಮಯ್ಯ ಗೆಲುವು ಸಾಧಿಸಲಿದ್ದಾರೆಂದರು. ಗೋಷ್ಠಿಯಲ್ಲಿ ಶಿವಮೊಗ್ಗ ಅಲ್ಪಸಂಖ್ಯಾತರ ಸಮಿತಿ ಉಪಾಧ್ಯಕ್ಷ ಜೋಸೆಫ್ ಹಾಜರಿದ್ದರು.

# ಕ್ಷೇತ್ರದ ಜನತೆಯೇ ನನ್ನ ತಂದೆ-ತಾಯಿ

## ಮಲ್ಕುಂಡಿಯಲ್ಲಿ ದರ್ಶನ್ ಧ್ರುವನಾರಾಯಣ್ ಪ್ರಚಾರ

**ನಂಜನಗೂಡು :** ನಂಜನಗೂಡು ವಿಧಾನ ಸಭಾ ಕ್ಷೇತ್ರದ ಮಲ್ಕುಂಡಿ ಗ್ರಾಮದಲ್ಲಿ ಕಾಂಗ್ರೆಸ್ ಅಭ್ಯರ್ಥಿ ದರ್ಶನ್ ಧ್ರುವನಾರಾಯಣ್ ಬಿರುಸಿನ ಪ್ರಚಾರ ಮಾಡಿದರು.

ಗ್ರಾಮದಲ್ಲಿನ ಡಾ. ಬಿ ಆರ್ ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಬಳಿಕ ಪ್ರಮುಖ ಬೀದಿಗಳಲ್ಲಿ ಮತಯಾಚನೆ ಮಾಡಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಈ ಗ್ರಾಮದಲ್ಲಿ ನನ್ನ ತಂದೆ ಆರ್. ಧ್ರುವನಾರಾಯಣ್ ಅವರು ಕೊನೆಯ ಬಾಷಣ ಮಾಡಿದ್ದರು. ಮತ್ತೆ ನಾನು ಈ ಗ್ರಾಮಕ್ಕೆ ಬಂದಿದ್ದೇನೆ. ನಿಮ್ಮ ಪ್ರೀತಿ ವಿಶ್ವಾಸಕ್ಕೆ ನಾನು ಚಿರಋಣಿಯಾಗಿರುತೇನೆ ಎಮಲು ಮನವಿ ಮಾಡಿದರು.

ನನ್ನ ತಂದೆಗೆ ತೋರಿಸಿದ ಪ್ರೀತಿಯನ್ನು ನನಗೂ ನೀಡಿ. ಸದಾ ನಿಮ್ಮಗಳ ಸೇವೆಯಲ್ಲಿ ಇರುತೇನೆ ನನ್ನ ತಂದೆ ಆರ್. ಧ್ರುವನಾರಾಯಣ್ ಅವರು ಮಾಡಿರುವ ಅಭಿವೃದ್ಧಿ ಕಾರ್ಯ ಮೆಚ್ಚಿ ನನಗೆ ಅವರಂತೆ ನಿಮ್ಮಗಳ ಸೇವೆ ಮಾಡಲು ಅವಕಾಶ ಕಲ್ಪಿಸಿಕೊಡಿ ನಾನು ನಿಮ್ಮ ಮನೆ ಮಗನಾಗಿ ಕೆಲಸ ಮಾಡುತೇನೆ ಎಂದರಲ್ಲದೆ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದರೆ 200 ಯುನಿಟ್, 10 ಕೆಜಿ ಅಕ್ಕಿ, ಪ್ರತಿ ಮಹಿಳೆಯರಿಗೆ 2000 ನೀಡಲಾಗುವುದು ಎಂದು ಹೇಳಿದರು.

ಬಿಜೆಪಿ ಸರ್ಕಾರದ ಅವಧಿಯಲ್ಲಿ ಬಡ ಮಕ್ಕಳಿಗೆ ಬರುವ ವಿದ್ಯಾರ್ಥಿ ವೇತನವನ್ನು ಖಡಿತ ಮಾಡಿ ಹಾಗೂ ದಿನನಿತ್ಯ ಬಳಸುವ ಆಹಾರ ಪದಾರ್ಥಗಳನ್ನು ಬೆಲೆ ಏರಿಕೆ ಮಾಡಿ ಬಡವರ ಜೀವನದ ಜೊತೆ ಚೆಲ್ಲಾಟವಾಡಿರುವ ಬಿಜೆಪಿ ಸರ್ಕಾರವನ್ನು ದೇಶದಿಂದ ಕಿತ್ತೊಗೆದು ಬಡವರ ಪರವಾಗಿರುವ



ಕಾಂಗ್ರೆಸ್ ಸರ್ಕಾರವನ್ನು ಅಧಿಕಾರಕ್ಕೆ ತರಬೇಕು ಎಂದರು.

ಅದೇ ರೀತಿ ಕ್ಷೇತ್ರದಲ್ಲಿ ಹೆಚ್ಚಿನ ಅಭಿವೃದ್ಧಿ ಬಗ್ಗೆ ಕನಸು ಕಂಡಿದ್ದ ನನ್ನ ತಂದೆ ಆರ್. ಧ್ರುವನಾರಾಯಣ್ ಅವರ ಕನಸನ್ನು ನನಸ್ಸು ಮಾಡುವ ಜವಬ್ದಾರಿ ನನ್ನ ಮೇಲಿದೆ. ನಾನು ನನ್ನ ತಂದೆ ತಾಯಿ ಕಳೆದು ಕೊಂಡು ತಬ್ಬಲಿಯಾಗಿದ್ದೇನೆ ಎಂದು ತಿಳಿದಿದ್ದೆ. ಅದರೆ ನಿಮ್ಮಗಳ ಪ್ರೀತಿ ವಿಶ್ವಾಸ ನೋಡಿದರೆ ನಾನು ತಬ್ಬಲಿಯಲ್ಲ ಕ್ಷೇತ್ರದ ಜನತೆಯೇ ನನ್ನ ತಂದೆ ತಾಯಿ ಎಂದು ಭಾವಿಸಿದ್ದೇನೆ. ಈ ನಿಮ್ಮ ಮನೆ ಮಗನಿಗೆ ತಮ್ಮಗಳ ಸೇವೆ ಮಾಡಲು ಒಂದು ಅವಕಾಶ ನೀಡಿ ಎಂದು ಮನವಿ ಮಾಡಿದರು.

ತಾ.ಪಂ.ಮಾಜಿ ಅಧ್ಯಕ್ಷ ನಾಗೇಶ್‌ರಾಜ್, ಹುಲ್ಲಹಳ್ಳಿ ಬ್ಲಾಕ್ ಅದ್ಯಕ್ಷ ಶ್ರೀಕಂಠನಾಯಕ, ಹಿಂದೂಳಿದ ವರ್ಗದ ಜಿಲ್ಲಾದ್ಯಕ್ಷ ಕೆ. ಮಾರುತಿ, ಎಸ್ಟಿ ಘಟಕದ ಜಿಲ್ಲಾ ಉಪಾಧ್ಯಕ್ಷ ಮಹದೇವು, ಗ್ರಾ ಪಂ ಮಾಜಿ ಸದಸ್ಯ ಎಂ ಎನ್ ಸತೀಶ್, ಹೆಚ್. ಎಂ. ಪುಟ್ಟಬುದ್ದಿ, ಗ್ರಾ ಪಂ ಸದಸ್ಯ ಪಾಪ, ಶಿವಕುಮಾರ್, ವಕೀಲ ಎಂ. ಸಿ. ಶ್ರೀನಿವಾಸ್, ಶಿವಕುಮಾರ್, ಶಿವಲಿಂಗಪ್ಪ, ಕಿಟ್ಟಪ್ಪ, ದೇಬೂರು ಆಶೋಕ್, ಇಬ್ಬಾಲ ಕೆಂಡಗಣ್ಣಪ್ಪ, ಸೇರಿದಂತೆ ಪ್ರಮುಖರು ಹಾಜರಿದ್ದರು.

**Published by** Mihir Akash K.R **Printed by** M.S.Shivaprakash on behalf of Mihir Akash K.R. Printed at M.S.Shivaprakash, **IDEAL OFFSET PRINTERS,** #337, SLJ Temple Street, Old Town Mandya Dist-571401, Karnataka. Published from Mihir Akash K.R, #78, Daya Marga, Near Geetha School, Siddartha Nagar Mysore – 570011, Karnataka. **Editor K.N Ravi,**